Volume : 9 | Issue : 175 | September : 29 : 2026 : Tuesday
ಸಂಪುಟ : 9 | ಸಂಚಿಕೆ : 175 | ಸೆಪ್ಟಂಬರ್ : 29 : 2026 : ಮಂಗಳವಾರ

www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ



# ವಿಕ್ರಮ ವಾಹಿನಿ



ಪುಟ 4 | ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481

ಶ್ರೀಲೀಲಾ ಹೊಸ ದಾಖಲೆ: ಇನ್‌ಸ್ಟಾಗ್ರಾಮ್ ಪೋಸ್ಟ್‌ಗೆ 1.11 ಕೋಟಿ ಲೈಕ್ಸ್; ದಳಪತಿ ವಿಜಯ್, ಸಲ್ಮಾನ್ ಖಾನ್ ಸೇರಿದಂತೆ ಹಲವು ತಾರೆಯರ ದಾಖಲೆ ಹಿಂದಿಕ್ಕಿದ ಕನ್ನಡತಿ.

6 ಸೆಕೆಂಡ್‌ನಲ್ಲಿ ಕುಸಿದ ಬೆಟ್ಟ; ನೇಪಾಳದಲ್ಲಿ 24 ಮಂದಿ ಬಲಿ | ಪುಟ 4

ರೈತರ ಆದಾಯ ರಕ್ಷಣೆಗೆ 'ಸಂಪೂರ್ಣ ಗ್ರ್ಯಾಂಡ್ ಚಾಲೆಂಜ್' | ಪುಟ 3

## ಬಾಕಿ ಟ್ರಾಫಿಕ್ ದಂಡಕ್ಕೆ ವಿದ್ಯುತ್ ಬಿಲ್ ಕೊಂಡಿ!

**ಬಾಕಿ ಉಳಿದಿರುವ ಇ–ಚಲನ್ ದಂಡ ವಸೂಲಿಗೆ ವಿದ್ಯುತ್ ಬಿಲ್‌ಗಳೊಂದಿಗೆ ಕೊಂಡಿ ಕಲ್ಪಿಸುವುದು ಸೇರಿದಂತೆ ಕಠಿಣ ಕ್ರಮಗಳನ್ನು ಪರಿಗಣಿಸುವಂತೆ ಸುಪ್ರೀಂ ಕೋರ್ಟ್ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಸಲಹೆ ನೀಡಿದೆ. ದಂಡ ಪಾವತಿಸದ ವಾಹನಗಳ ಪರವಾನಗಿ ಅಮಾನತು, ಆರ್‌ಸಿ–ಫಿಟ್‌ನೆಸ್–ಪಿಯುಸಿ ನವೀಕರಣ ನಿರ್ಬಂಧ ಹಾಗೂ ವಾಹನಗಳನ್ನು 'ಪರಿವಾಹನ್' ಪೋರ್ಟಲ್‌ನಲ್ಲಿ ಕಪ್ಪುಪಟ್ಟಿಗೆ ಸೇರಿಸುವ ಬಗ್ಗೆಯೂ ಪೀಠ ಸೂಚಿಸಿದೆ.**

● ವಿಕ್ರಮ ವಾಹಿನಿ । ನವದೆಹಲಿ

ಸಂಚಾರ ನಿಯಮ ಉಲ್ಲಂಘನೆಗೆ ವಿಧಿಸಿರುವ ದಂಡವನ್ನು ಪಾವತಿಸದೆ ಬಾಕಿ ಉಳಿಸಿಕೊಂಡಿರುವ ವಾಹನ ಮಾಲೀಕರ ವಿರುದ್ಧ ಪರಿಣಾಮಕಾರಿ ಕ್ರಮ ಕೈಗೊಳ್ಳುವಂತೆ ಸುಪ್ರೀಂ ಕೋರ್ಟ್ ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಿಗೆ ಸಲಹೆ ನೀಡಿದೆ. ಬಾಕಿ ಉಳಿದಿರುವ ಇ–ಚಲನ್ ದಂಡದ ಮೊತ್ತವನ್ನು ವಿದ್ಯುತ್ ಬಿಲ್‌ಗಳೊಂದಿಗೆ ಲಿಂಕ್ ಮಾಡುವ ಸಾಧ್ಯತೆಯನ್ನೂ ಪರಿಶೀಲಿಸುವಂತೆ ನ್ಯಾಯಾಲಯ ಸೂಚಿಸಿದೆ.

ಸಂಚಾರ ನಿಯಮ ಉಲ್ಲಂಘನೆಗೆ ಇ–ಚಲನ್ ನೀಡುವುದಷ್ಟೇ ಸಾಲದು. ವಿಧಿಸಿರುವ ದಂಡವನ್ನು ವಸೂಲಿ ಮಾಡುವುದು ಮುಖ್ಯ ಸವಾಲಾಗಿದೆ ಎಂದು ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದಿವಾಲಾ ಹಾಗೂ ಕೆ.ವಿ. ವಿಶ್ವನಾಥನ್ ಅವರಿದ್ದ ಪೀಠ ಅಭಿಪ್ರಾಯಪಟ್ಟಿತು.

**ರೂ 45 ಸಾವಿರ ಕೋಟಿ ದಂಡ ಬಾಕಿ:** ಸಾಮಾಜಿಕ ಕಾರ್ಯಕರ್ತ ಎಸ್. ರಾಜಶೇಖರನ್ ಅವರು 2012ರಲ್ಲಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ವೇಳೆ ಈ ವಿಷಯ ಚರ್ಚೆಗೆ ಬಂದಿದೆ. ರಸ್ತೆ



ಸುರಕ್ಷತೆ, ಸಂಚಾರ ನಿಯಮಗಳ ಎಲೆಕ್ಟ್ರಾನಿಕ್ ಜಾರಿ ಹಾಗೂ ಪಾವತಿಯಾಗದ ಇ–ಚಲನ್‌ಗಳ ವಸೂಲಿಗೆ ಸಂಬಂಧಿಸಿದ ಅರ್ಜಿ ಇದಾಗಿದೆ.

ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳಲ್ಲಿ ಇ–ಚಲನ್ ಮೂಲಕ ಒಟ್ಟು ಸುಮಾರು ರೂ 45,000 ಕೋಟಿ ದಂಡ ವಸೂಲಿ ಮಾಡಬೇಕಿದ್ದು, ಈ ಪೈಕಿ ಈವರೆಗೆ ಸುಮಾರು ರೂ 25,000 ಕೋಟಿ ವಸೂಲಾಗಿದೆ ಎಂದು ನ್ಯಾಯಾಲಯಕ್ಕೆ ತಿಳಿಸಲಾಯಿತು.

**ವಿದ್ಯುತ್ ಬಿಲ್‌ಗೆ ಜೋಡಿಸುವ ಸಲಹೆ:** ಬಾಕಿ ದಂಡ ವಸೂಲಿಗೆ ಪ್ರಾಯೋಗಿಕ ಹಾಗೂ ಪರಿಣಾಮಕಾರಿ ಮಾರ್ಗಗಳನ್ನು ಅಧಿಕಾರಿಗಳು ಕಂಡುಕೊಳ್ಳಬೇಕು ಎಂದು ಪೀಠ ಹೇಳಿತು. ದಂಡ ಪಾವತಿಸದಿದ್ದರೆ ಅದನ್ನು ವಿದ್ಯುತ್ ಬಿಲ್‌ನೊಂದಿಗೆ ಜೋಡಿಸುವ ವ್ಯವಸ್ಥೆ ಜಾರಿಗೆ ತರಬಹುದೇ ಎಂಬುದನ್ನು ಪರಿಗಣಿಸುವಂತೆ ಸಲಹೆ ನೀಡಿತು.

ವಿದ್ಯುತ್ ಬಿಲ್ ಪಾವತಿಸದಿದ್ದಲ್ಲಿ ಸಂಪರ್ಕ ಕಡಿತದಂತಹ ಪರಿಣಾಮ ಎದುರಾಗುವುದರಿಂದ, ಇದೇ ರೀತಿಯ ವ್ಯವಸ್ಥೆ ಮೂಲಕ ಸಂಚಾರ ದಂಡ ವಸೂಲಿಗೂ ಪರಿಣಾಮಕಾರಿ ಮಾರ್ಗ ಕಂಡುಕೊಳ್ಳಬಹುದು ಎಂದು ಪೀಠ ಚರ್ಚಿಸಿತು.

**ವಾಹನ ಜಪ್ತಿ ಕುರಿತು ಚರ್ಚೆ:** ಭಾರೀ ಮೊತ್ತದ ಇ–ಚಲನ್ ಬಾಕಿ ಉಳಿಸಿಕೊಂಡಿರುವ ವಾಹನಗಳನ್ನು ರಸ್ತೆ ತಪಾಸಣೆ ವೇಳೆ ಗುರುತಿಸಿ ಜಪ್ತಿ ಮಾಡುವ ಸಾಧ್ಯತೆಯ ಬಗ್ಗೆಯೂ ನ್ಯಾಯಾಲಯ ಚರ್ಚಿಸಿತು. ದಂಡ ಪಾವತಿಸದ ವಾಹನ ಮಾಲೀಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ಅಗತ್ಯವನ್ನು ಪೀಠ ಒತ್ತಿಹೇಳಿತು.

**ಪರವಾನಗಿ, ಆರ್‌ಸಿ ನವೀಕರಣಕ್ಕೆ ನಿರ್ಬಂಧ:** ಇ–ಚಲನ್ ದಂಡ ಪಾವತಿಸದವರ ಚಾಲನಾ ಪರವಾನಗಿ ಅಮಾನತುಗೊಳಿಸುವುದು ಸೇರಿದಂತೆ ಹಲವು ಕ್ರಮಗಳನ್ನು ಪರಿಗಣಿಸುವಂತೆ ನ್ಯಾಯಾಲಯ ಸಲಹೆ ನೀಡಿತು. ದಂಡ ಪಾವತಿಯಾಗುವವರೆಗೆ ವಾಹನದ ನೋಂದಣಿ ಪ್ರಮಾಣಪತ್ರ (ಆರ್‌ಸಿ) ನವೀಕರಣ, ಫಿಟ್‌ನೆಸ್ ಪ್ರಮಾಣಪತ್ರ ಹಾಗೂ ಮಾಲಿನ್ಯ ನಿಯಂತ್ರಣ (ಪಿಯುಸಿ) ಪ್ರಮಾಣಪತ್ರ ನೀಡುವುದನ್ನು ನಿರ್ಬಂಧಿಸುವ ಸಾಧ್ಯತೆಯನ್ನೂ ಪರಿಶೀಲಿಸುವಂತೆ ಸೂಚಿಸಿತು.

ಇದಲ್ಲದೆ, ನಕಲಿ ಆರ್‌ಸಿ ನೀಡುವುದನ್ನು ತಡೆಯುವುದು, ವಾಹನಗಳ ಮಾಲೀಕತ್ವ ವರ್ಗಾವಣೆಗೆ ನಿರ್ಬಂಧ ವಿಧಿಸುವುದು ಹಾಗೂ ಬಾಕಿ ದಂಡ ಹೊಂದಿರುವ ವಾಹನಗಳನ್ನು ಕೇಂದ್ರ ಸರ್ಕಾರದ 'ಪರಿವಾಹನ್' ಪೋರ್ಟಲ್‌ನಲ್ಲಿ ಕಪ್ಪುಪಟ್ಟಿಗೆ ಸೇರಿಸುವ ಕ್ರಮಗಳ ಬಗ್ಗೆಯೂ ಪೀಠ ಸಲಹೆ ನೀಡಿತು.

## ನೀರಾವರಿ ಯೋಜನೆಗಳಿಗೆ ಕೇಂದ್ರದ ಮಧ್ಯಸ್ಥಿಕೆ ವಹಿಸಿ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಕುಡಿಯುವ ನೀರು, ನೀರಾವರಿ ಹಾಗೂ ಬರ ಪರಿಹಾರದ ಅಗತ್ಯಗಳನ್ನು ಈಡೇರಿಸಲು ಪ್ರಮುಖ ನೀರಾವರಿ ಯೋಜನೆಗಳಿಗೆ ಬಾಕಿ ಇರುವ ಅನುಮತಿಗಳನ್ನು ಶೀಘ್ರ ನೀಡುವಂತೆ ಕೇಂದ್ರ ಸರ್ಕಾರ ಮಧ್ಯಸ್ಥಿಕೆ ವಹಿಸಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಮಾಡಿದ್ದಾರೆ.

ದೆಹಲಿಯಲ್ಲಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರನ್ನು ಸೋಮವಾರ ಭೇಟಿ ಮಾಡಿದ ಅವರು, ಮೇಕೆದಾಟು, ಕೃಷ್ಣಾ ಮೇಲ್ದಂಡೆ ಯೋಜನೆ–3 (ಯುಕೆಪಿ–3), ಭದ್ರಾ ಮೇಲ್ದಂಡೆ ಸೇರಿದಂತೆ ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ ಮನವಿ ಸಲ್ಲಿಸಿದರು.

**ಮೇಕೆದಾಟು:** 16,745 ಕೋಟಿ ವೆಚ್ಚದ ಮೇಕೆದಾಟು ಸಮತೋಲನ ಜಲಾಶಯ ಮತ್ತು ಕುಡಿಯುವ ನೀರಿನ ಯೋಜನೆಯ ಡಿಪಿಆರ್ ಅನ್ನು ಕೇಂದ್ರ ಜಲ ಆಯೋಗ ಶೀಘ್ರ ಪರಿಶೀಲಿಸಿ ಅನುಮೋದನೆ ನೀಡುವಂತೆ ಕ್ರಮ ಕೈಗೊಳ್ಳಬೇಕು ಎಂದು ಕೋರಿದರು.

**ಯುಕೆಪಿ–3:** ಕೃಷ್ಣಾ ಜಲ ವಿವಾದ ನ್ಯಾಯಾಧಿಕರಣ–2ರ ತೀರ್ಪಿಗೆ ಅಧಿಸೂಚನೆ ಹೊರಡಿಸುವ ಸಂಬಂಧ ಸುಪ್ರೀಂ ಕೋರ್ಟ್‌ನಲ್ಲಿ ತುರ್ತು ಮಧ್ಯಂತರ ಅರ್ಜಿ ಸಲ್ಲಿಸುವಂತೆ ಮನವಿ ಮಾಡಿದರು. ಅಧಿಸೂಚನೆ ಹೊರಬಂದರೆ ಕರ್ನಾಟಕಕ್ಕೆ ಹಂಚಿಕೆಯಾಗಿರುವ ನೀರಿನ ಪಾಲನ್ನು ಬಳಸಿಕೊಂಡು ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಅನುಕೂಲವಾಗಲಿದೆ ಎಂದು ತಿಳಿಸಿದರು.

**ಭದ್ರಾ ಮೇಲ್ದಂಡೆ:** 21,167.93 ಕೋಟಿ ಪರಿಷ್ಕೃತ



ಸಿಎಂ ಡಿ ಕೆ ಶಿವಕುಮಾರ್ ಕೇಂದ್ರ ಜಲಶಕ್ತಿ ಸಚಿವ ಸಿ ಆರ್ ಪಾಟೀಲ್‌ರನ್ನು ದೆಹಲಿಯ ಅವರ ಅಧಿಕೃತ ನಿವಾಸದಲ್ಲಿ ಸೋಮವಾರ ಭೇಟಿ ಮಾಡಿ ಮೇಕೆದಾಟು, ಮಹದಾಯಿ ಸೇರಿದಂತೆ ರಾಜ್ಯದ ನಾನಾ ಬಾಕಿ ಯೋಜನೆಗಳ ಅನುಮತಿಗೆ ಮನವಿ ಸಲ್ಲಿಸಿದರು.

ಅಂದಾಜಿನ ಭದ್ರಾ ಮೇಲ್ದಂಡೆ ಯೋಜನೆಯನ್ನು ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ (ಪಿಎಂಕೆಎಸ್‌ವೈ) ಅಡಿ ಸೇರಿಸಲು ಹಾಗೂ 2023–24ರ ಕೇಂದ್ರ ಬಜೆಟ್‌ನಲ್ಲಿ ಘೋಷಿಸಿದ್ದ ಅನುದಾನವನ್ನು ಶೀಘ್ರ ಬಿಡುಗಡೆ ಮಾಡಲು ಮಧ್ಯಸ್ಥಿಕೆ ವಹಿಸುವಂತೆ ಕೋರಿದರು.

ಇದರ ಜತೆಗೆ, ಗೋದಾವರಿ–ಕಾವೇರಿ ಹಾಗೂ ಬೇಡ್ತಿ–ವರದಾ ನದಿ ಜೋಡಣೆ ಯೋಜನೆಗಳಲ್ಲಿ ಕರ್ನಾಟಕದ ನ್ಯಾಯಬದ್ಧ ನೀರಿನ ಪಾಲನ್ನು ಪರಿಗಣಿಸಬೇಕು. ಇತರ ಫಲಾನುಭವಿ ರಾಜ್ಯಗಳಿಗೆ ಹೋಲಿಕೆಯಲ್ಲಿ ರಾಜ್ಯಕ್ಕೆ ಸಮಾನ ನೀರಿನ ಹಂಚಿಕೆ ದೊರೆಯುವಂತೆ ರಾಷ್ಟ್ರೀಯ ಜಲ ಅಭಿವೃದ್ಧಿ ಸಂಸ್ಥೆಗೆ (ಎನ್‌ಡಬ್ಲ್ಯೂಡಿಎ) ನಿರ್ದೇಶನ ನೀಡಬೇಕು ಎಂದು ಶಿವಕುಮಾರ್ ಮನವಿ ಮಾಡಿದರು.

## ತೈಲ ಬೆಲೆ ಏರಿಕೆಗೆ ಷೇರುಪೇಟೆ ಕುಸಿತ; ರೂ 17 ಲಕ್ಷ ಕೋಟಿ ನಷ್ಟ

● ವಿಕ್ರಮ ವಾಹಿನಿ । ಮುಂಬೈ

ಕಚ್ಚಾ ತೈಲ ಬೆಲೆ ಏರಿಕೆ, ಪಶ್ಚಿಮ ಏಷ್ಯಾದ ಭೌಗೋಳಿಕ ಉದ್ವಿಗ್ನತೆ ಹಾಗೂ ಅಮೆರಿಕದ ಬಾಂಡ್‌ಗಳ ಇಳುವರಿ ಹೆಚ್ಚಳದ ಪರಿಣಾಮ ಭಾರತೀಯ ಷೇರುಪೇಟೆ ಸೋಮವಾರ ಭಾರಿ ಕುಸಿತ ಕಂಡಿದೆ. ಸೆನ್ಸೆಕ್ಸ್ 1,124 ಅಂಕ ಹಾಗೂ ನಿಫ್ಟಿ 360 ಅಂಕಗಳಷ್ಟು ಕುಸಿದಿದ್ದು, ಹೂಡಿಕೆದಾರರ ಸಂಪತ್ತಿನಲ್ಲಿ ಒಂದೇ ದಿನ ರೂ 7.52 ಲಕ್ಷ ಕೋಟಿ ಕರಗಿದೆ.

ಸೆನ್ಸೆಕ್ಸ್ 1,124.02 ಅಂಕ ಅಥವಾ ಶೇ.1.52ರಷ್ಟು ಕುಸಿದು 72,771.72 ಅಂಕಗಳಲ್ಲಿ ವಹಿವಾಟು ಮುಗಿಸಿತು. ಇದು ಮಾರ್ಚ್ 30, 2026ರ ಬಳಿಕದ ಕನಿಷ್ಠ ಮುಕ್ತಾಯ ಮಟ್ಟವಾಗಿದೆ. ನಿಫ್ಟಿ 360.25 ಅಂಕ ಅಥವಾ ಶೇ.1.56ರಷ್ಟು ಇಳಿದು 22,780.25 ಅಂಕಗಳಿಗೆ ತಲುಪಿದ್ದು, ಸುಮಾರು ಆರು ತಿಂಗಳ ಕನಿಷ್ಠ ಮಟ್ಟ ದಾಖಲಿಸಿದೆ.

ಕಳೆದ ಒಂದು ತಿಂಗಳ ಅವಧಿಯಲ್ಲೂ ಮಾರುಕಟ್ಟೆಯಲ್ಲಿ ಕುಸಿತ ಮುಂದುವರಿದಿದೆ. ಆ.27ರಿಂದ ಸೆನ್ಸೆಕ್ಸ್ 4,161.87 ಅಂಕ ಅಥವಾ ಶೇ.5.40ರಷ್ಟು ಹಾಗೂ ನಿಫ್ಟಿ 1,310.60 ಅಂಕ ಅಥವಾ ಶೇ.5.44ರಷ್ಟು ಕುಸಿದಿವೆ. ಇದೇ ಅವಧಿಯಲ್ಲಿ ಹೂಡಿಕೆದಾರರ ಒಟ್ಟು ಸಂಪತ್ತು ರೂ 17.17 ಲಕ್ಷ ಕೋಟಿ ಕಡಿಮೆಯಾಗಿದ್ದು, ರೂ 4,74,36,620.19 ಕೋಟಿಗೆ ಇಳಿದಿದೆ.

ಕಚ್ಚಾ ತೈಲ ಬೆಲೆ ಏರಿಕೆ, ಪಶ್ಚಿಮ ಏಷ್ಯಾದ ಉದ್ವಿಗ್ನತೆ ಹಾಗೂ ಅಮೆರಿಕದ ಬಾಂಡ್‌ಗಳ ಇಳುವರಿ ಹೆಚ್ಚಳವು ಹೂಡಿಕೆದಾರರ ಆತಂಕವನ್ನು ಹೆಚ್ಚಿಸಿದೆ. 2ನೇ ಪುಟಕ್ಕೆ...

## ■ ಸುದ್ದಿ ಚುಟುಕು

### ಅ.9ರಂದು ಖುದ್ದು ವಿಚಾರಣೆಗೆ ಹಾಜರಾಗಲು ಲಕ್ಷ್ಮಣ ಸವದಿಗೆ ಸಮನ್ಸ್

● ವಿಕ್ರಮ ವಾಹಿನಿ । ಬೆಳಗಾವಿ

ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಖುದ್ದು ಹಾಜರಾಗುವಂತೆ ಸಹಕಾರ ಸಚಿವ ಲಕ್ಷ್ಮಣ ಸವದಿಗೆ ಅಥಣಿ ತಾಲೂಕಿನ 4ನೇ ಜೆಸಿಎಂಎಂ ನ್ಯಾಯಾಲಯ ಸಮನ್ಸ್ ಜಾರಿಗೊಳಿಸಿದೆ.

2018ರಲ್ಲಿ ತಳವಾರ ಸಮುದಾಯಕ್ಕೆ ಎಷ್ಟು ಅನುದಾನ ನೀಡಲಾಗಿದೆ ಎಂದು ರಾಜು ಜಮಖಂಡೀಕರ್ ಪ್ರಶ್ನಿಸಿದ್ದರು. ಈ ವೇಳೆ ಸವದಿ ಬೆಂಬಲಿಗರು ಅವರ ಮೇಲೆ ಹಲ್ಲೆ ನಡೆಸಿದ್ದು, ಘಟನೆ ವೇಳೆ ಲಕ್ಷ್ಮಣ ಸವದಿ ಸ್ಥಳದಲ್ಲಿದ್ದರು ಎಂದು ಆರೋಪಿಸಲಾಗಿದೆ.

ಹಲ್ಲೆ ಸಂಬಂಧ ರಾಜು ಜಮಖಂಡೀಕರ್ ದೂರು ದಾಖಲಿಸಿದ್ದರು. ಪ್ರಕರಣದ ವಿಚಾರಣೆಗೆ ಅಕ್ಟೋಬರ್ 9ರಂದು ನ್ಯಾಯಾಲಯಕ್ಕೆ ಖುದ್ದು ಹಾಜರಾಗುವಂತೆ ಲಕ್ಷ್ಮಣ ಸವದಿಗೆ ಸಮನ್ಸ್ ನೀಡಲಾಗಿದೆ.

### ಪ್ರದೀಪ್ ಈಶ್ವರ್‌ಗೆ ಮುಂದಿನ ಬಾರಿ ಟಿಕೆಟ್ ನೀಡದಂತೆ ದೂರು

● ವಿಕ್ರಮ ವಾಹಿನಿ । ಚಿಕ್ಕಬಳ್ಳಾಪುರ

ಶಾಸಕ ಪ್ರದೀಪ್ ಈಶ್ವರ್ ಅವರ ಕಾರ್ಯವೈಖರಿ ಹಾಗೂ ಕ್ಷೇತ್ರದಲ್ಲಿನ ಪಕ್ಷ ಸಂಘಟನೆ ಕುರಿತು ಅಸಮಾಧಾನ ವ್ಯಕ್ತಪಡಿಸಿರುವ ಕಾಂಗ್ರೆಸ್‌ನ ಸ್ಥಳೀಯ ಮುಖಂಡರು, ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಅವರಿಗೆ ಟಿಕೆಟ್ ನೀಡಬಾರದು ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರಿಗೆ ದೂರು ನೀಡಿದ್ದಾರೆ.

ಬೆಂಗಳೂರಿನ ಕೆಪಿಸಿಸಿ ಕಚೇರಿಯಲ್ಲಿ ಮಾಜಿ ಸಚಿವ ಡಾ. ಎಂ.ಸಿ. ಸುಧಾಕರ್ ನೇತೃತ್ವದಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಮಾಜಿ ಶಾಸಕರನ್ನೊಳಗೊಂಡ ನಿಯೋಗ ಹರಿಪ್ರಸಾದ್ ಅವರನ್ನು ಭೇಟಿ ಮಾಡಿ ತಮ್ಮ ಅಹವಾಲುಗಳನ್ನು ಸಲ್ಲಿಸಿತು ಎಂದು ತಿಳಿದುಬಂದಿದೆ.

ಪ್ರದೀಪ್ ಈಶ್ವರ್ ಅವರು ಕ್ಷೇತ್ರಕ್ಕೆ ಸಮರ್ಪಕವಾಗಿ ಭೇಟಿ ನೀಡುತ್ತಿಲ್ಲ ಹಾಗೂ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ನಿಯೋಗದ ಸದಸ್ಯರು ಆರೋಪಿಸಿದ್ದಾರೆ.

ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಶಾಸಕರು ಸಕ್ರಿಯವಾಗಿ ತೊಡಗಿಸಿಕೊಂಡಿಲ್ಲ. ಇದರಿಂದ ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಹಿನ್ನಡೆಯಾಗಿದೆ ಎಂದು ಮುಖಂಡರು ಕೆಪಿಸಿಸಿ ಅಧ್ಯಕ್ಷರ ಗಮನಕ್ಕೆ ತಂದಿದ್ದಾರೆ ಎನ್ನಲಾಗಿದೆ.

ಈ ಎಲ್ಲ ವಿಚಾರಗಳನ್ನು ಪರಿಗಣಿಸಿ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಪ್ರದೀಪ್ ಈಶ್ವರ್ ಅವರಿಗೆ ಪಕ್ಷದ ಟಿಕೆಟ್ ನೀಡಬಾರದು ಎಂದು ನಿಯೋಗ ಒತ್ತಾಯಿಸಿದೆ ಎಂದು ಮೂಲಗಳು ತಿಳಿಸಿವೆ.

### 6ನೇ ತರಗತಿಗೂ ತ್ರಿಭಾಷಾ ನೀತಿ ವಿನಾಯಿತಿ?

● ವಿಕ್ರಮ ವಾಹಿನಿ । ನವದೆಹಲಿ

ಸಿಬಿಎಸ್‌ಇ ಜಾರಿಗೆ ತಂದಿರುವ ತ್ರಿಭಾಷಾ ಸೂತ್ರದಡಿ 7ನೇ ತರಗತಿ ವಿದ್ಯಾರ್ಥಿಗಳಿಗೆ ನೀಡಿರುವ ವಿನಾಯಿತಿ ಮತ್ತು ಸಡಿಲಿಕೆಗಳನ್ನು 6ನೇ ತರಗತಿ ವಿದ್ಯಾರ್ಥಿಗಳಿಗೂ ವಿಸ್ತರಿಸುವಂತೆ ಸುಪ್ರೀಂ ಕೋರ್ಟ್ ಸೋಮವಾರ ನಿರ್ದೇಶನ ನೀಡಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೊಯ್ಮಲ್ಯ ಬಾಗ್ಚಿ ಹಾಗೂ ವಿ. ಮೋಹನಾ ಅವರಿದ್ದ ಪೀಠ ಈ ನಿರ್ದೇಶನ ನೀಡಿದೆ. ಪ್ರಸ್ತುತ 7, 8 ಮತ್ತು 9ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು 10ನೇ ತರಗತಿಗೆ ಬಂದಾಗ ಮೂರನೇ ಭಾಷೆಯ ಬೋರ್ಡ್ ಪರೀಕ್ಷೆ ಬರೆಯಬೇಕಿಲ್ಲ ಎಂದು ಸಿಬಿಎಸ್‌ಇ ಜೂನ್ 29ರಂದು ತಿಳಿಸಿತ್ತು.

ತ್ರಿಭಾಷಾ ನೀತಿ ಜಾರಿಯಿಂದ ಈಗಾಗಲೇ ಭಾಷೆ ಆಯ್ಕೆ ಮಾಡಿಕೊಂಡಿರುವ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಅರ್ಜಿದಾರರ ಪರ ವಕೀಲರು ನ್ಯಾಯಾಲಯದ ಗಮನ ಸೆಳೆದರು.

ಕೇಂದ್ರ ಸರ್ಕಾರದ ಪರ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಒಟ್ಟು 2.80 ಲಕ್ಷಕ್ಕೂ ಅಧಿಕ ಶಾಲೆಗಳ ಪೈಕಿ ಸುಮಾರು ಶೇ.1.2ರಷ್ಟು ಶಾಲೆಗಳಷ್ಟೇ ಈ ಸಮಸ್ಯೆಯಿಂದ ಪರಿಣಾಮಕ್ಕೊಳಗಾಗಿವೆ ಎಂದು ತಿಳಿಸಿದರು. ಪ್ರಕರಣದ ಮುಂದಿನ ವಿಚಾರಣೆಯನ್ನು ಆರು ವಾರಗಳ ಬಳಿಕ ನಡೆಸಲು ಪೀಠ ನಿಗದಿಪಡಿಸಿದ್ದು, ನಾಲ್ಕು ವಾರಗಳಲ್ಲಿ ಉತ್ತರದ ಅಫಿಡವಿಟ್ ಸಲ್ಲಿಸುವಂತೆ ಸಿಬಿಎಸ್‌ಇಗೆ ಸೂಚಿಸಿದೆ.

## ನಕಲಿ ಔಷಧ ಜಾಲದ ಪ್ರಮುಖ ಆರೋಪಿ ಎಸ್‌ಐಟಿ ವಶಕ್ಕೆ

● ವಿಕ್ರಮ ವಾಹಿನಿ । ಬೆಂಗಳೂರು



ನಕಲಿ ಔಷಧ ಜಾಲ ಪ್ರಕರಣದ ಪ್ರಮುಖ ಆರೋಪಿ ಪ್ರಶಾಂತ್ ದೊರೆಸ್ವಾಮಿಯನ್ನು ವಿಶೇಷ ತನಿಖಾ ತಂಡ (ಎಸ್‌ಐಟಿ) ಸೋಮವಾರ ಬೆಳಗಿನ ಜಾವ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ವಶಕ್ಕೆ ಪಡೆದುಕೊಂಡಿದೆ.

ಪ್ರಕರಣ ಬೆಳಕಿಗೆ ಬಂದ ಬಳಿಕ ದೇಶ ತೊರೆದಿದ್ದ ಪ್ರಶಾಂತ್ ರಂಜನ್ ಬಾಬು ಅಜರ್‌ಬೈಜಾನ್‌ನಲ್ಲಿ ತಲೆಮರೆಸಿಕೊಂಡಿದ್ದ ಕುರಿತು ಎನ್ನಲಾಗಿದ್ದು, ಎಸ್‌ಐಟಿ ಅಧಿಕಾರಿಗಳ ನಿರಂತರ ಪ್ರಯತ್ನ ಹಾಗೂ ಕಾನೂನು ಕ್ರಮಗಳ ಬಳಿಕ ಭಾರತಕ್ಕೆ ಮರಳಿದ್ದಾನೆ. ವಿಮಾನ ನಿಲ್ದಾಣಕ್ಕೆ ಬಂದಿಳಿಯುತ್ತಿದ್ದಂತೆಯೇ ಸಜ್ಜಾಗಿದ್ದ ಎಸ್‌ಐಟಿ ತಂಡ ಆರೋಪಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದೆ.

ನಕಲಿ ಔಷಧ ಜಾಲದ ಹಿಂದೆ ಇರುವ ವ್ಯಕ್ತಿಗಳು, ಅದರ ಕಾರ್ಯವ್ಯಾಪ್ತಿ ಹಾಗೂ ಔಷಧಗಳ ತಯಾರಿಕೆ ಮತ್ತು ಪೂರೈಕೆಯ ಮಹತ್ವದ ಮಾಹಿತಿ ಸಂಗ್ರಹಿಸಲು ತನಿಖೆ ಮುಂದುವರಿದಿದೆ ಎಂದು ಮೂಲಗಳು ತಿಳಿಸಿವೆ.

ಆ.18ರಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಬಿಡದಿ ಹಾಗೂ ದೊಡ್ಡೇರಿ ಪ್ರದೇಶಗಳ ಫಾರ್ಮ್‌ಹೌಸ್‌ಗಳು ಮತ್ತು ಅನಧಿಕೃತ ಪ್ಯಾಕಿಂಗ್ ಘಟಕಗಳ ಮೇಲೆ ಆಹಾರ ಸುರಕ್ಷತೆ ಹಾಗೂ ಔಷಧ ನಿಯಂತ್ರಣ ಇಲಾಖೆ ಅಧಿಕಾರಿಗಳು ದಾಳಿ ನಡೆಸಿದ್ದರು. ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ಹಲವರನ್ನು ವಿಚಾರಣೆಗೆ ಒಳಪಡಿಸಿರುವ ಎಸ್‌ಐಟಿ, ಪ್ರಶಾಂತ್ ದೊರೆಸ್ವಾಮಿ ವಿಚಾರಣೆಯಿಂದ ಜಾಲದ ಕಾರ್ಯವಿಧಾನ ಮತ್ತು ಇತರ ಆರೋಪಿಗಳ ಕುರಿತು ಹೆಚ್ಚಿನ ಮಾಹಿತಿ ಕಲೆಹಾಕುವ ನಿರೀಕ್ಷೆಯಿದೆ. 2ನೇ ಪುಟಕ್ಕೆ...

## 'ಓಂ ಕಾಳಿ, ಜೈ ಕಾಳಿ' ಘೋಷಣೆಗೆ ಉದಯನಿಧಿ ಕರೆ

● ವಿಕ್ರಮ ವಾಹಿನಿ । ಚೆನ್ನೈ

ತಮಿಳುನಾಡಿನಲ್ಲಿ ಆಡಳಿತಾರೂಢ ಡಿಎಂಕೆ ಹಾಗೂ ನಟ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ (ಟಿವಿಕೆ) ನಡುವಿನ ರಾಜಕೀಯ ವಾಕ್ಸಮರ ತೀವ್ರಗೊಂಡಿದ್ದು, ಟಿವಿಕೆ ಘೋಷಣೆಗೆ ಪ್ರತಿಯಾಗಿ 'ಓಂ ಕಾಳಿ, ಜೈ ಕಾಳಿ' ಘೋಷಣೆ ಮೊಳಗಿಸುವಂತೆ ಡಿಎಂಕೆ ನಾಯಕ ಉದಯನಿಧಿ ಸ್ಟಾಲಿನ್ ಕಾರ್ಯಕರ್ತರಿಗೆ ಕರೆ ನೀಡಿದ್ದಾರೆ.

ಸೆ.27ರಂದು ಪಕ್ಷದ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಉದಯನಿಧಿ, ಟಿವಿಕೆ ನಾಯಕ ವಿಜಯ್ ಅವರು ತಮ್ಮ ರಾಜಕೀಯ ರ್‍ಯಾಲಿಗಳಲ್ಲಿ ಡಿಎಂಕೆಯನ್ನು ಗುರಿಯಾಗಿಸಿಕೊಂಡು 'ಡಿಎಂಕೆ ಒಂದು ದುಷ್ಟ ಶಕ್ತಿ' ಎಂಬ ಅರ್ಥದ ಘೋಷಣೆ ಮಾಡುತ್ತಿದ್ದಾರೆ ಎಂದು ಹೇಳಿದರು. ಇದಕ್ಕೆ ಪ್ರತಿಯಾಗಿ 'ಓಂ ಕಾಳಿ, ಜೈ ಕಾಳಿ... ಟಿವಿಕೆ ಒರು ಓಡುಗಾಲಿ' ಎಂಬ ಘೋಷಣೆಯನ್ನು ಕಾರ್ಯಕರ್ತರು ಬಳಸುವಂತೆ ಕರೆ ನೀಡಿದರು.

ವಿಜಯ್ ಅವರ ಹೆಸರನ್ನು ನೇರವಾಗಿ ಉಲ್ಲೇಖಿಸುವ ಅಗತ್ಯವಿಲ್ಲ. ಟಿವಿಕೆ ಹೆಸರಿನೊಂದಿಗೆ ಈ ಘೋಷಣೆಯನ್ನು ಸಾರ್ವಜನಿಕರ ನಡುವೆ ಪುನರಾವರ್ತಿಸುವ ಮೂಲಕ ಚುನಾವಣಾ ರ್‍ಯಾಲಿಗಳು ಹಾಗೂ ಮನೆ–ಮನೆ ಪ್ರಚಾರದಲ್ಲಿ ಜನರಿಗೆ ತಲುಪಿಸುವಂತೆ ಕಾರ್ಯಕರ್ತರಿಗೆ ಸೂಚಿಸಿದರು.

ಇದೇ ವೇಳೆ ಕರೂರಿನಲ್ಲಿ ನಡೆದ ಕಾಲ್ತುಳಿತ ಘಟನೆಯನ್ನು ಪ್ರಸ್ತಾಪಿಸಿದ ಉದಯನಿಧಿ, ಘಟನೆಯಲ್ಲಿ 40 ಮಂದಿ ಮೃತಪಟ್ಟಿರುವ ಕುರಿತು ಟಿವಿಕೆ ವಿರುದ್ಧ ಆರೋಪ ಮಾಡಿದರು. ಘಟನೆಯ ಹೊಣೆಗಾರಿಕೆಯಿಂದ ವಿರೋಧ ಪಕ್ಷ ನುಣುಚಿಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ ಅವರು, ಈ ವಿಚಾರವನ್ನು ಮುಂಬರುವ ಚುನಾವಣಾ ಪ್ರಚಾರದಲ್ಲಿ ಜನರ ಮುಂದಿಡುವಂತೆ ಕಾರ್ಯಕರ್ತರಿಗೆ ಕರೆ ನೀಡಿದರು.

## ದರ್ಶನ್ ಪ್ರಕರಣ: ಮೂರು ಗಂಟೆ ಹೇಳಿಕೆ ದಾಖಲು

● ವಿಕ್ರಮ ವಾಹಿನಿ । ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಮಾಫಿ ಸಾಕ್ಷಿಯಾಗಲು ಮುಂದಾಗಿರುವ ಪ್ರದೋಷ್ ರಾವ್ ಅವರು ಸೋಮವಾರ 59ನೇ ಸಿಸಿಹೆಚ್ ನ್ಯಾಯಾಲಯದಲ್ಲಿ ಸತತ ಮೂರು ಗಂಟೆಗಳ ಕಾಲ ಇನ್‌ಕ್ಯಾಮೆರಾ ವಿಚಾರಣೆಯಲ್ಲಿ ಹೇಳಿಕೆ ದಾಖಲಿಸಿದ್ದಾರೆ.

ಬಿಗಿ ಭದ್ರತೆಯಲ್ಲಿ ನ್ಯಾಯಾಲಯಕ್ಕೆ ಹಾಜರಾದ ಪ್ರದೋಷ್, ಪ್ರಕರಣಕ್ಕೆ ಸಂಬಂಧಿಸಿದಂತೆ ತಮಗೆ ತಿಳಿದಿರುವ ಹಲವು ಘಟನೆಗಳ ಕುರಿತು ಹೇಳಿಕೆ ನೀಡಿದ್ದಾರೆ ಎನ್ನಲಾಗಿದೆ. ಅವರ ಸುದೀರ್ಘ ಹೇಳಿಕೆಯನ್ನು ಮುದ್ರಿಸಿ ಸಹಿ ಪಡೆಯುವ ಪ್ರಕ್ರಿಯೆ ಬಾಕಿ ಇರುವ ಹಿನ್ನೆಲೆಯಲ್ಲಿ ಹಾಗೂ ವಿಶೇಷ ಸರ್ಕಾರಿ ಅಭಿಯೋಜಕರ ಮನವಿ ಮೇರೆಗೆ ವಿಚಾರಣೆಯನ್ನು ಮಂಗಳವಾರಕ್ಕೆ ಮುಂದೂಡಲಾಗಿದೆ.

ಪ್ರದೋಷ್ ಅವರ ಹೇಳಿಕೆ ಪ್ರಕಾರ, 2003ರಲ್ಲಿ ಕ್ರಿಕೆಟ್ ಆಡಲು ತೆರಳುತ್ತಿದ್ದ ವೇಳೆ ದರ್ಶನ್ ಪರಿಚಯವಾಗಿದ್ದು, ಬಳಿಕ ಆತ್ಮೀಯ ಸ್ನೇಹ ಬೆಳೆದಿತ್ತು. 2024ರ ಜೂನ್ 8ರಂದು ದರ್ಶನ್ ಅವರ ಐಡಿಯಲ್ ಹೋಮ್ಸ್ ನಿವಾಸಕ್ಕೆ ತೆರಳಿದ್ದಾಗ, ಮಧ್ಯಾಹ್ನ ಆರ್.ಆರ್.ನಗರದ ಸ್ಟೋನಿ ಬ್ರೂಕ್‌ನಲ್ಲಿ ನಡೆಯಲಿದ್ದ ಪಾರ್ಟಿಗೆ ಬರುವಂತೆ ದರ್ಶನ್ ಒತ್ತಾಯಿಸಿದ್ದರು ಎಂದು ತಿಳಿಸಿದ್ದಾರೆ ಎನ್ನಲಾಗಿದೆ.

ನಂತರ ಸ್ಕಾರ್ಪಿಯೋ ಕಾರಿನಲ್ಲಿ ಮಧ್ಯಾಹ್ನ ಸುಮಾರು 12.30ಕ್ಕೆ ದರ್ಶನ್ ಮನೆಗೆ ಬಂದಿದ್ದು, ನಾಗರಾಜ್ ಕೂಡ ಕಾರಿನಲ್ಲಿ ಸೇರಿಕೊಂಡಿದ್ದರು. ಅಲ್ಲಿಂದ ಆರ್.ಆರ್.ನಗರದ ವೆಂಕಟೇಶ್ವರ ಸ್ವಾಮಿ ದೇವಸ್ಥಾನಕ್ಕೆ ತೆರಳಿ ಬಳಿಕ ಸ್ಟೋನಿ ಬ್ರೂಕ್ ರೆಸ್ಟೋರೆಂಟ್‌ಗೆ ಹೋಗಿದ್ದಾಗಿ ಪ್ರದೋಷ್ ನ್ಯಾಯಾಲಯಕ್ಕೆ ಹೇಳಿಕೆ ನೀಡಿದ್ದಾರೆ ಎನ್ನಲಾಗಿದೆ.

## ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಸಿಜೆಪಿ ಪಟ್ಟು

● ವಿಕ್ರಮ ವಾಹಿನಿ । ಗುವಾಹಟಿ

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡುವವರೆಗೆ ಹೋರಾಟದಿಂದ ಹಿಂದೆ ಸರಿಯುವುದಿಲ್ಲ.

ಅಕ್ಟೋಬರ್ 2ರಿಂದ ದೇಶಾದ್ಯಂತ ಪ್ರತಿಭಟನೆ ಆರಂಭಿಸಲಾಗುವುದು ಎಂದು ಸಿಜೆಪಿ ವಕ್ತಾರ ಅಶುತೋಷ್ ರಂಕಾ ಹೇಳಿದ್ದಾರೆ. ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಶೇಷ ತೀವ್ರ ಪರಿಷ್ಕರಣೆ ಸಂದರ್ಭದಲ್ಲಿ ದೇಶದ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಕರಡು ಮತದಾರರ ಪಟ್ಟಿಯಿಂದ 13 ಕೋಟಿಗೂ ಹೆಚ್ಚು ಹೆಸರುಗಳನ್ನು ಕೈಬಿಡಲಾಗಿದೆ. 2ನೇ ಪುಟಕ್ಕೆ

## ಎನ್‌ಡಿಎ ಬೆಂಬಲಕ್ಕೆ ನಾಚಿಕೆಯಾಗುತ್ತಿದೆ: ಚಿರಾಗ್ ಪಾಸ್ವಾನ್

● ವಿಕ್ರಮ ವಾಹಿನಿ । ಪಾಟ್ನಾ

ಬಿಹಾರದಲ್ಲಿ ಮಹಿಳೆಯರ ವಿರುದ್ಧದ ಅಪರಾಧಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಕೇಂದ್ರ ಸಚಿವ ಹಾಗೂ ಲೋಕ ಜನಶಕ್ತಿ ಪಕ್ಷ (ರಾಮ್ ವಿಲಾಸ್) ನಾಯಕ ಚಿರಾಗ್ ಪಾಸ್ವಾನ್ ರಾಜ್ಯ ಸರ್ಕಾರದ ಕಾನೂನು–ಸುವ್ಯವಸ್ಥೆ ನಿರ್ವಹಣೆ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಅಪರಾಧಗಳು ನಿಯಂತ್ರಣ ಮೀರುತ್ತಿರುವ ಸಂದರ್ಭದಲ್ಲಿ ಎನ್‌ಡಿಎ ಸರ್ಕಾರಕ್ಕೆ ಬೆಂಬಲ ನೀಡುತ್ತಿರುವುದಕ್ಕೆ ನಾಚಿಕೆಯಾಗುತ್ತಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಕಾನೂನು–ಸುವ್ಯವಸ್ಥೆ ಮರುಸ್ಥಾಪಿಸಲು ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಪೊಲೀಸ್ ಮತ್ತು ಆಡಳಿತ ವ್ಯವಸ್ಥೆ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು.

ಜನರ, ವಿಶೇಷವಾಗಿ ಮಹಿಳೆಯರ ಸುರಕ್ಷತೆಗೆ ಆದ್ಯತೆ ನೀಡಬೇಕು. ಪರಿಸ್ಥಿತಿ ಮತ್ತಷ್ಟು ಕೈಮೀರುವ ಮುನ್ನ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಪಾಸ್ವಾನ್ ಆಗ್ರಹಿಸಿದ್ದಾರೆ.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

### ನುಡಿ ವಾಹಿನಿ

ಧೈರ್ಯವಿಲ್ಲದೆ ಈ ಜಗತ್ತಿನಲ್ಲಿ ನೀವು ಏನನ್ನೂ ಸಾಧಿಸಲಾರಿರಿ. ಆತ್ಮ ಗೌರವದಂತೆ ಧೈರ್ಯ ಶ್ರೇಷ್ಠವಾದ ಗುಣ.

### ದಿನ ಪಂಚಾಂಗ

ಸೆಪ್ಟಂಬರ್, 29–2026, ಮಂಗಳವಾರ ವರ್ಷ ಋತು, ಭಾದ್ರಪದ ಮಾಸ, ಬಹುಳ ಪಕ್ಷ
ತದಿಗೆ ತಿಥಿ ಸಾ.6:37
ಅಶ್ವಿನಿ ನಕ್ಷತ್ರ ಬೆ.11:20
ರಾಹುಕಾಲ ಮ 3:11–4:41
ಸಂಕಷ್ಟ ಚತುರ್ಥಿ(ಚಂ.ಉ ರಾ8:07), ವಿಶ್ವ ಹೃದಯ ದಿನ/ಸಾಮಾಜಿಕನ್ಯಾಯ ದಿನ, ಗಜಗೌರೀ ವ್ರತ, ಮಿತ್ತನಡ್ಕ ಜಾತ್ರೆ

### ಆರೋಗ್ಯ

# ಸಕ್ಕರೆ ಬಳಕೆಗೆ ಕಡಿವಾಣ ಹಾಕಲು ಸರ್ಕಾರದ ಚಿಂತನೆ

● ವಿಕ್ರಮ ವಾಹಿನಿ । ಬೆಂಗಳೂರು

ಅತಿಯಾದ ಸಕ್ಕರೆ ಸೇವನೆಯಿಂದ ಉಂಟಾಗುವ ಮಧುಮೇಹ, ಬೊಜ್ಜು, ಹೃದ್ರೋಗ ಹಾಗೂ ಯಕೃತ್ತಿನ ಸಮಸ್ಯೆಗಳ ಅಪಾಯವನ್ನು ತಗ್ಗಿಸುವ ಉದ್ದೇಶದಿಂದ ರಾಜ್ಯದಲ್ಲಿ ಸಕ್ಕರೆ ಬಳಕೆಗೆ ಮಾನದಂಡ ರೂಪಿಸಲು ಸರ್ಕಾರ ಚಿಂತನೆ ನಡೆಸಿದೆ. ಉಪ್ಪಿನ ಬಳಕೆಯನ್ನು ನಿಯಂತ್ರಿಸುವ ಕ್ರಮಗಳ ಬೆನ್ನಲ್ಲೇ ಸಕ್ಕರೆ ಪ್ರಮಾಣಕ್ಕೂ ಕಡಿವಾಣ ಹಾಕುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಮಾರ್ಗಸೂಚಿ ಸಿದ್ಧಪಡಿಸಲು ಮುಂದಾಗಿದೆ.

ಸಿಹಿ ತಿಂಡಿ, ತಂಪು ಪಾನೀಯ, ಪ್ಯಾಕ್ ಮಾಡಿದ ಆಹಾರ ಸೇರಿದಂತೆ ಸಕ್ಕರೆ ಬಳಸಿ ತಯಾರಿಸುವ ವಿವಿಧ ಆಹಾರ ಪದಾರ್ಥಗಳಲ್ಲಿ ಗರಿಷ್ಠ ಪ್ರಮಾಣದ ಸಕ್ಕರೆ ಬಳಕೆಗೆ ಸಂಬಂಧಿಸಿದಂತೆ ಉತ್ಪಾದಕರಿಗೆ ಮಾರ್ಗಸೂಚಿ ನೀಡುವ ಸಾಧ್ಯತೆಯಿದೆ. ಈ ಮೂಲಕ ಆಹಾರ ಪದಾರ್ಥಗಳಲ್ಲಿ ಅತಿಯಾದ ಸಕ್ಕರೆ ಬಳಕೆಯಾಗದಂತೆ ನಿಗಾ ವಹಿಸುವ ಜತೆಗೆ, ಗ್ರಾಹಕರಲ್ಲೂ ಆರೋಗ್ಯಕರ ಆಹಾರ ಪದ್ಧತಿ ಕುರಿತು ಜಾಗೃತಿ ಮೂಡಿಸಲು ಸರ್ಕಾರ ಉದ್ದೇಶಿಸಿದೆ.

**ದಿನಕ್ಕೆ 25 ಗ್ರಾಂ ಮಿತಿ:** ವಿಶ್ವ ಆರೋಗ್ಯ ಸಂಸ್ಥೆಯ (WHO) ಶಿಫಾರಸಿನಂತೆ ವಯಸ್ಕರು ಹಾಗೂ ಮಕ್ಕಳು ಸೇವಿಸುವ ಒಟ್ಟು ಕ್ಯಾಲೊರಿಗಳಲ್ಲಿ ಮುಕ್ತ ಸಕ್ಕರೆ ಪ್ರಮಾಣ ಶೇ.10ಕ್ಕಿಂತ ಕಡಿಮೆ ಇರಬೇಕು. ಆರೋಗ್ಯದ ಹೆಚ್ಚಿನ ಪ್ರಯೋಜನಕ್ಕಾಗಿ ಈ ಪ್ರಮಾಣವನ್ನು ಶೇ.5ಕ್ಕಿಂತ ಕಡಿಮೆ ಮಾಡುವುದು ಸೂಕ್ತ ಎಂದು ಡಬ್ಲ್ಯುಎಚ್‌ಒ ಸಲಹೆ ನೀಡಿದೆ. ಇದು ದಿನಕ್ಕೆ ಸುಮಾರು 25 ಗ್ರಾಂ ಅಥವಾ ಆರು ಟೀ ಚಮಚ ಸಕ್ಕರೆಗೆ ಸಮನಾಗಿದೆ.

ಸಕ್ಕರೆ ಸೇವನೆ ಹೆಚ್ಚಾದರೆ ದೇಹದಲ್ಲಿ ಹೆಚ್ಚುವರಿ ಕ್ಯಾಲೊರಿ ಸೇರ್ಪಡೆಯಾಗಿ ಬೊಜ್ಜು ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುವ ಸಾಧ್ಯತೆಯಿದೆ. ಹೀಗಾಗಿ ಸಕ್ಕರೆ ಹೆಚ್ಚಿರುವ ಆಹಾರ ಮತ್ತು ಪಾನೀಯಗಳ ಸೇವನೆಯನ್ನು ಕಡಿಮೆ ಮಾಡುವ ಕುರಿತು ಜನರಲ್ಲಿ ಅರಿವು ಮೂಡಿಸಲು ಆರೋಗ್ಯ ಇಲಾಖೆ ಮುಂದಾಗಿದೆ.

**ಸಾಂಕ್ರಾಮಿಕವಲ್ಲದ ಕಾಯಿಲೆ ನಿಯಂತ್ರಣ:** ರಾಜ್ಯದಲ್ಲಿ ಮಧುಮೇಹ, ಹೃದ್ರೋಗ ಸೇರಿದಂತೆ ಸಾಂಕ್ರಾಮಿಕವಲ್ಲದ ಕಾಯಿಲೆಗಳ ಪ್ರಮಾಣ ನಿಯಂತ್ರಿಸುವ ನಿಟ್ಟಿನಲ್ಲಿ ಆಹಾರ ಪದ್ಧತಿಯಲ್ಲಿ ಬದಲಾವಣೆ ತರುವುದಕ್ಕೆ ಸರ್ಕಾರ ಒತ್ತು ನೀಡುತ್ತಿದೆ. ಅದರ ಭಾಗವಾಗಿ ಉಪ್ಪು ಮತ್ತು ಸಕ್ಕರೆ ಬಳಕೆಯನ್ನು ನಿಯಂತ್ರಿಸುವ ಕ್ರಮಗಳನ್ನು ಕೈಗೊಳ್ಳಲು ಚಿಂತಿಸಲಾಗಿದೆ.

ಈ ಹಿಂದೆ ಅಧಿಕ ಉಪ್ಪಿನ ಸೇವನೆಯಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳನ್ನು ತಗ್ಗಿಸುವ ಉದ್ದೇಶದಿಂದ ಉಪ್ಪಿನ ಬಳಕೆಯ ಮೇಲೂ ನಿಯಂತ್ರಣ ಹೇರಲು ಸರ್ಕಾರ ಮುಂದಾಗಿತ್ತು. ಮದ್ಯದ ಬಾಟಲಿಗಳಲ್ಲಿರುವ ಎಚ್ಚರಿಕೆ ಸಂದೇಶದ ಮಾದರಿಯಲ್ಲಿ ಉಪ್ಪಿನ ಪ್ಯಾಕೆಟ್‌ಗಳ ಮೇಲೂ 'ಆರೋಗ್ಯಕ್ಕೆ ಹಾನಿಕರ' ಎಂಬ ಎಚ್ಚರಿಕೆ ಸಂದೇಶ ಅಳವಡಿಸುವ ಕುರಿತು ಚಿಂತನೆ ನಡೆಸಲಾಗಿತ್ತು.

ಜನರಿಗೆ ಉಪ್ಪಿನ ಮಿತ ಬಳಕೆಯ ಅರಿವು ಮೂಡಿಸುವುದು ಹಾಗೂ ಆರೋಗ್ಯಕರ ಆಹಾರ ಪದ್ಧತಿಗೆ ಉತ್ತೇಜನ ನೀಡುವುದು ಇದರ ಉದ್ದೇಶವಾಗಿದೆ.

ಇದೀಗ ಉಪ್ಪಿನ ಬಳಿಕ ಸಕ್ಕರೆ ಬಳಕೆಯ ಮೇಲೂ ಗಮನ ಹರಿಸಿರುವ ಸರ್ಕಾರ, ಆಹಾರ ಉತ್ಪಾದಕರು ಹಾಗೂ ಸಾರ್ವಜನಿಕರಿಗೆ ಸೂಕ್ತ ಮಾರ್ಗಸೂಚಿ ರೂಪಿಸುವ ಮೂಲಕ ಸಕ್ಕರೆ ಸೇವನೆ ಕಡಿಮೆ ಮಾಡಲು ಕ್ರಮ ಕೈಗೊಳ್ಳುವ ಸಾಧ್ಯತೆಯಿದೆ.

# 'ವಿಪಕ್ಷಗಳು ಕೈ ಜೋಡಿಸದಿದ್ದರೆ ರೈತರ ಹಿತಕ್ಕಾಗಿ ನಾವೇ ಕ್ರಮ'

● ವಿಕ್ರಮ ವಾಹಿನಿ । ಬೆಂಗಳೂರು



**ರಾಜ್ಯದ ಬರ ಪರಿಸ್ಥಿತಿ ಕುರಿತು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲು ಸರ್ವಪಕ್ಷ ನಿಯೋಗದೊಂದಿಗೆ ಬಿಜೆಪಿ ನಾಯಕರು ಬರಬೇಕು. ಬರ ಪರಿಹಾರಕ್ಕಾಗಿ ಕೇಂದ್ರದ ಬಳಿ ಮಾತನಾಡದಿದ್ದರೆ ಬಿಜೆಪಿಯವರದ್ದು ಕಪಟ ನಾಟಕ ಎಂಬುದು ಸಾಬೀತಾಗಲಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು. ರೈತರ ಹಿತಕ್ಕಾಗಿ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದರು.**

"ರಾಜ್ಯದ ಬರ ಪರಿಸ್ಥಿತಿ ಬಗ್ಗೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲು ಸರ್ವಪಕ್ಷ ನಿಯೋಗದೊಂದಿಗೆ ಬಾರದಿದ್ದರೆ, ಬಿಜೆಪಿಯವರದ್ದು ಕಪಟ ನಾಟಕ ಎಂಬುದು ಸಾಬೀತಾಗುತ್ತದೆ. ಕೇಂದ್ರ ಸರ್ಕಾರಕ್ಕೆ ರಾಜ್ಯ ಬಿಜೆಪಿ ನಾಯಕರು ಮನವರಿಕೆ ಮಾಡಿಕೊಡದಿದ್ದರೆ, ರೈತರ ಹಿತಕ್ಕಾಗಿ ನಾವೇ ಅಗತ್ಯ ಕ್ರಮ ತೆಗೆದುಕೊಳ್ಳುತ್ತೇವೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು.

ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು.

ಬರ ವಿಚಾರದಲ್ಲಿ ಸರ್ವಪಕ್ಷ ನಿಯೋಗದೊಂದಿಗೆ ಹೋಗುವುದಿಲ್ಲ ಎಂಬ ಬಿಜೆಪಿ ನಾಯಕರ ಹೇಳಿಕೆ ಬಗ್ಗೆ ಕೇಳಿದಾಗ, "ವಿರೋಧ ಪಕ್ಷಗಳು ಸರ್ವಪಕ್ಷ ನಿಯೋಗದೊಂದಿಗೆ ಸೇರದಿದ್ದರೆ, ರೈತರ ಹಿತಾಸಕ್ತಿಯನ್ನು ಸರ್ಕಾರ ಕಡೆಗಣಿಸುವುದಿಲ್ಲ. ರಾಜ್ಯದ ರೈತರ ಹಿತ ಕಾಪಾಡಲು ಏನು ಮಾಡಬೇಕೋ ಅದನ್ನು ನಾವು ಮಾಡುತ್ತೇವೆ" ಎಂದರು.

"ಅವರ ಈ ನಡೆಯಿಂದ ರಾಜ್ಯದ ರೈತರ ಬಗ್ಗೆ ಅವರಿಗೆ ಕಾಳಜಿ ಇಲ್ಲ ಎಂಬುದು ಸ್ಪಷ್ಟವಾಗುತ್ತದೆ. ರೈತರಿಗೆ 25 ಸಾವಿರ, 50 ಸಾವಿರ ಪರಿಹಾರ ನೀಡಿ ಎಂದು ಹೇಳುವವರು ಕೇಂದ್ರ ಸರ್ಕಾರದ ಬಳಿ ಮಾತನಾಡಿ ಅವರೂ ಪರಿಹಾರ ಕೊಡಿಸಬೇಕು" ಎಂದು ಆಗ್ರಹಿಸಿದರು.

"ಬರ ಪರಿಸ್ಥಿತಿಯ ಅಧ್ಯಯನ ಕುರಿತು ಅ. 3ರಂದು ಕೇಂದ್ರದ ತಂಡ ಬರುತ್ತಿದೆ. ಆ ಸಮಿತಿಗೆ ಅಗತ್ಯವಿರುವ ಎಲ್ಲ ಸಹಕಾರವನ್ನು ಕಾನೂನಿನ ಚೌಕಟ್ಟಿನಲ್ಲಿ ನಮ್ಮ ಅಧಿಕಾರಿಗಳು ನೀಡಲಿದ್ದಾರೆ" ಎಂದು ತಿಳಿಸಿದರು.

"ಕಸ್ತೂರಿರಂಗನ್ ವರದಿ ಹಾಗೂ ಬರ ಕುರಿತು ಚರ್ಚಿಸಲು ಸರ್ವಪಕ್ಷ ಸಭೆ ನಡೆಸುವ ಸಂಬಂಧ ಶೀಘ್ರದಲ್ಲೇ ದಿನಾಂಕ ನಿಗದಿಪಡಿಸಲಾಗುವುದು. ಈ ಹಿನ್ನೆಲೆಯಲ್ಲಿ ಸಭೆಯ ದಿನಾಂಕ ನಿಗದಿಪಡಿಸುತ್ತೇನೆ. ಇದೇ ವೇಳೆ ಕೆಲವು ಕೇಂದ್ರ ಸಚಿವರನ್ನು ಭೇಟಿಯಾಗಲಿದ್ದು, ಎಸ್ ಐಆರ್ ಹಾಗೂ ಮುಖ್ಯ ಚುನಾವಣಾ ಆಯುಕ್ತರ ವಿಚಾರದ ಬಗ್ಗೆ ನಡೆಯುತ್ತಿರುವ ಸಿಡಬ್ಲ್ಯೂಸಿ ಸಭೆಯಲ್ಲಿ ಭಾಗವಹಿಸಲಾಗುವುದು. ಚರ್ಚೆ ನಡೆಸಬೇಕಿದೆ" ಎಂದು ಹೇಳಿದರು.

"ಕಸ್ತೂರಿರಂಗನ್ ವರದಿ ವಿಚಾರವಾಗಿಯೂ ಕೇಂದ್ರದ ಮಟ್ಟದಲ್ಲಿ ಚರ್ಚೆ ನಡೆಸಲಾಗುತ್ತದೆ. ಕಸ್ತೂರಿರಂಗನ್ ವಿಚಾರದಲ್ಲಿ ಕೇಂದ್ರ ಸಚಿವರ, ಪ್ರಧಾನಮಂತ್ರಿಯವರ ಭೇಟಿಗೆ ಸಮಯ ಕೇಳುತ್ತೇನೆ. ಸಮಯ ಪಡೆದು, ರಾಜ್ಯದ ಪರವಾಗಿ ಅಗತ್ಯವಿರುವ ಮನವಿಯನ್ನು ಸಲ್ಲಿಸುವ ಕೆಲಸ ಮಾಡುತ್ತೇನೆ" ಎಂದು ಹೇಳಿದರು.

# ಬರವನ್ನು ಗಂಭೀರವಾಗಿ ಪರಿಗಣಿಸದ ಸರ್ಕಾರ: ನಡಹಳ್ಳಿ

**ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ಇದ್ದರೂ ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ. ರೈತರ ಸಂಕಷ್ಟದ ಬಗ್ಗೆ ವಿಶೇಷ ಅಧಿವೇಶನದಲ್ಲಿ ಸಮರ್ಪಕ ಚರ್ಚೆಯಾಗಿಲ್ಲ. ರೈತರ ಕುರಿತು ಹಗುರವಾಗಿ ಮಾತನಾಡಿರುವ ಮುಖ್ಯಮಂತ್ರಿ ಕ್ಷಮೆಯಾಚಿಸಬೇಕು ಎಂದು ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್. ಪಾಟೀಲ್ ನಡಹಳ್ಳಿ ಆಗ್ರಹಿಸಿದರು.**

● ವಿಕ್ರಮ ವಾಹಿನಿ । ಬೆಂಗಳೂರು




ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ಇದ್ದರೂ ಮುಖ್ಯಮಂತ್ರಿ, ಸಚಿವರು ಹಾಗೂ ಶಾಸಕರು ಅದನ್ನು ಗಂಭೀರವಾಗಿ ಪರಿಗಣಿಸಿಲ್ಲ. ವಿಶೇಷ ಅಧಿವೇಶನದಲ್ಲಿ ರೈತರ ಕುರಿತು ಹಗುರವಾಗಿ ಮಾತನಾಡಿರುವ ಮುಖ್ಯಮಂತ್ರಿ ಕ್ಷಮೆಯಾಚಿಸಬೇಕು ಎಂದು ಮಾಜಿ ಶಾಸಕ ಹಾಗೂ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್. ಪಾಟೀಲ್ ನಡಹಳ್ಳಿ ಆಗ್ರಹಿಸಿದರು.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರ ಪರಿಸ್ಥಿತಿ ಕುರಿತು ಚರ್ಚಿಸಲು ಕರೆಯಲಾಗಿದ್ದ ವಿಶೇಷ ಅಧಿವೇಶನ ನಾಮಕಾವಸ್ತೆಯಾಗಿ ನಡೆಯಿತು. ಕೆಲವೇ ಕೆಲವು ಶಾಸಕರನ್ನು ಹೊರತುಪಡಿಸಿ ಬಹುತೇಕ ಸದಸ್ಯರಲ್ಲಿ ಬರದ ಗಂಭೀರತೆಯ ಬಗ್ಗೆ ಕಾಳಜಿ ಕಾಣಿಸಲಿಲ್ಲ ಎಂದು ಟೀಕಿಸಿದರು.

ಮಳೆ ಕೊರತೆಯಿಂದ ಮುಂಗಾರು ಬೆಳೆಗಳು ಹಾನಿಗೊಳಗಾಗಿದ್ದು, ಹಿಂಗಾರು ಮಳೆಯ ಬಗ್ಗೆಯೂ ಆತಂಕವಿದೆ. ಇಂತಹ ಸಂದರ್ಭದಲ್ಲಿ ರೈತರ ರಕ್ಷಣೆ ಹಾಗೂ ಬರ ನಿರ್ವಹಣೆಗೆ ಸರ್ಕಾರ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮುಖ್ಯಮಂತ್ರಿ ಅಥವಾ ಕಂದಾಯ ಸಚಿವರು ಸ್ಪಷ್ಟ ಸಲಹೆ ಹಾಗೂ ಭರವಸೆ ನೀಡಲಿಲ್ಲ. ಪಕ್ಷಾತೀತವಾಗಿ ಸಮಗ್ರ ಚರ್ಚೆ ನಡೆಸಿ ಒಗ್ಗಟ್ಟಿನ ನಿರ್ಣಯ ಕೈಗೊಳ್ಳುವ ಅವಕಾಶವಿದ್ದರೂ ಸರ್ಕಾರ ಅದನ್ನು ಬಳಸಿಕೊಳ್ಳಲಿಲ್ಲ ಎಂದು ದೂರಿದರು.

ಆಳಂದ ಶಾಸಕ ಬಿ.ಆರ್. ಪಾಟೀಲ್ ಸೇರಿದಂತೆ ಎಂಟು–ಹತ್ತು ಶಾಸಕರು ಮಾತ್ರ ಬರದ ಸಮಸ್ಯೆಯನ್ನು ಗಂಭೀರವಾಗಿ ಪ್ರಸ್ತಾಪಿಸಿದರು. ಕರಾವಳಿ, ಮಲೆನಾಡು, ಮೈಸೂರು ಕರ್ನಾಟಕ ಹಾಗೂ ಕಿತ್ತೂರು ಕರ್ನಾಟಕ ಭಾಗಗಳಲ್ಲಿ ಬರದ ಪರಿಣಾಮ ವಿಭಿನ್ನವಾಗಿದ್ದು, ಆಯಾ ಪ್ರದೇಶಗಳಿಗೆ ಅಗತ್ಯವಿರುವ ಮುಂಜಾಗ್ರತಾ ಕ್ರಮಗಳ ಕುರಿತು ಅಧಿವೇಶನದಲ್ಲಿ ಸಮಗ್ರ ಚರ್ಚೆಯಾಗಲಿಲ್ಲ ಎಂದರು.

ಈ ಬಾರಿಯ ಬರ ಕೃಷಿಗೆ ಮಾತ್ರ ಸೀಮಿತವಾಗಿಲ್ಲ. ಇದು ಜಲಮೂಲಗಳ ಮೇಲೂ ಪರಿಣಾಮ ಬೀರಿರುವ 'ಹೈಡ್ರಾಲಾಜಿಕಲ್ ಬರ'ವಾಗಿದೆ. ಕೆರೆಗಳು ಬತ್ತಿದ್ದು, ಅಂತರ್ಜಲ ಮಟ್ಟ ಕುಸಿದಿದೆ. ಜಾನುವಾರುಗಳಿಗೆ ನೀರು ಒದಗಿಸುವುದೂ ಸವಾಲಾಗಿದೆ. ಈ ಪರಿಸ್ಥಿತಿಯ ಗಂಭೀರತೆಯನ್ನು ಸರ್ಕಾರ ಅರ್ಥಮಾಡಿಕೊಳ್ಳಬೇಕು ಎಂದು ಹೇಳಿದರು.

ಮುಖ್ಯಮಂತ್ರಿಗಳ ವಿಶೇಷ ಅಧಿವೇಶನದ ಭಾಷಣದಲ್ಲಿ ರೈತರ ಸಂಕಷ್ಟಕ್ಕೆ ಸ್ಪಂದಿಸುವ ಭರವಸೆ ಕಾಣಿಸಲಿಲ್ಲ. ರಾಜ್ಯದ ರೈತರಲ್ಲಿ ಆತ್ಮವಿಶ್ವಾಸ ತುಂಬುವ ಬದಲು ಬೆಂಗಳೂರಿನ ಬಗ್ಗೆ ಹೆಚ್ಚಿನ ಒತ್ತು ನೀಡಲಾಗಿದೆ. ಬೆಂಗಳೂರು ಕರ್ನಾಟಕದ ಎಲ್ಲರ ಆಸ್ತಿ. ರಾಜ್ಯದ ವಿವಿಧ ಭಾಗಗಳಿಂದ ಬಂದ ಜನರು ಬೆಂಗಳೂರಿನ ಅಭಿವೃದ್ಧಿಗೆ ಕೊಡುಗೆ ನೀಡಿದ್ದಾರೆ. ಹೀಗಾಗಿ ಪ್ರಾದೇಶಿಕ ಭೇದವಿಲ್ಲದೆ ಎಲ್ಲ ಭಾಗಗಳ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡಬೇಕು ಎಂದರು.

ರೈತರ ಸಾಲ, ನೀರಾವರಿ ಹಾಗೂ ಬರ ಪರಿಹಾರ ಸೇರಿದಂತೆ ಹಲವು ವಿಚಾರಗಳಲ್ಲಿ ಸರ್ಕಾರ ಸ್ಪಷ್ಟ ಕ್ರಮ ಕೈಗೊಳ್ಳಬೇಕು. ಭೂಸ್ವಾಧೀನ ಅಥವಾ ನ್ಯಾಯಾಲಯದ ಪ್ರಕರಣಗಳನ್ನು ಕಾರಣವಾಗಿ ಹೇಳದೆ, ನೀರಾವರಿ ಯೋಜನೆಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕು. ಉತ್ತರ ಕರ್ನಾಟಕದ ಜಿಲ್ಲೆಗಳಿಗೂ ಸಮಾನ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ರಾಜ್ಯದ ರೈತರಿಗೆ ಹೆಚ್ಚಿನ ಪರಿಹಾರ ನೀಡಲು ಸರ್ಕಾರದ ಬಜೆಟ್‌ನ ಕಂದಾಯ ವೆಚ್ಚದಲ್ಲಿ ನಿರ್ದಿಷ್ಟ ಪ್ರಮಾಣದ ಹಣವನ್ನು ಮೀಸಲಿಡುವ ಕುರಿತು ವಿಶೇಷ ಅಧಿವೇಶನದಲ್ಲೇ ನಿರ್ಣಯ ಕೈಗೊಳ್ಳಬಹುದಿತ್ತು. ಆದರೆ ಅಂತಹ ಯಾವುದೇ ಕ್ರಮ ಕೈಗೊಳ್ಳಲಿಲ್ಲ. ಕೇಂದ್ರ ಸರ್ಕಾರದ ಯೋಜನೆಗಳ ಬಗ್ಗೆ ಹೇಳುವ ಬದಲು ರಾಜ್ಯ ಸರ್ಕಾರವೂ ತನ್ನ ಪಾಲಿನ ನೆರವನ್ನು ರೈತರಿಗೆ ನೀಡಬೇಕು ಎಂದು ಆಗ್ರಹಿಸಿದರು.

ಸಚಿವ ಸಂಪುಟ ಹಾಗೂ ಆಡಳಿತಾತ್ಮಕ ವೆಚ್ಚಗಳಿಗೆ ಕೋಟ್ಯಂತರ ರೂಪಾಯಿ ಖರ್ಚು ಮಾಡುವ ಸರ್ಕಾರ, ಸಂಕಷ್ಟದಲ್ಲಿರುವ ರೈತರಿಗೆ ಅಲ್ಪ ಮೊತ್ತದ ಪರಿಹಾರ ನೀಡುವುದು ಸರಿಯಲ್ಲ. ಬರದಿಂದ ಬಳಲುತ್ತಿರುವ ರೈತರಿಗೆ ಸಮರ್ಪಕ ಪರಿಹಾರ, ಉಚಿತ ಅಥವಾ ಸಮರ್ಪಕ ವಿದ್ಯುತ್, ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು–ನೀರು ಒದಗಿಸುವ ತುರ್ತು ಕ್ರಮಗಳನ್ನು ಕೈಗೊಳ್ಳಬೇಕು ಎಂದು ನಡಹಳ್ಳಿ ಒತ್ತಾಯಿಸಿದರು.

ರೈತರ ಬಗ್ಗೆ ಹಗುರವಾಗಿ ಮಾತನಾಡಿರುವ ಮುಖ್ಯಮಂತ್ರಿ ತಮ್ಮ ಹೇಳಿಕೆ ಕುರಿತು ರಾಜ್ಯದ ಜನರ ಹಾಗೂ ರೈತರ ಕ್ಷಮೆಯಾಚಿಸಬೇಕು. ಸರ್ಕಾರವು ಮಲತಾಯಿ ಧೋರಣೆ ಬಿಟ್ಟು ರೈತರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸಬೇಕು ಎಂದು ಅವರು ಆಗ್ರಹಿಸಿದರು.

ಬಿಜೆಪಿ ರೈತ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಎಚ್.ಸಿ. ಕಲ್ಮರುಡಪ್ಪ, ಉಪಾಧ್ಯಕ್ಷರಾದ ಭಾರತಿ ಮಲ್ಲಿಕಾರ್ಜುನ, ಗುರುಲಿಂಗನಗೌಡ ಹಾಗೂ ರಾಜ್ಯ ಕಾರ್ಯದರ್ಶಿ ಆರ್. ರಾಜೇಶ್ ಉಪಸ್ಥಿತರಿದ್ದರು.

# ತೈಲ ಬೆಲೆ ಏರಿಕೆಗೆ ಷೇರುಪೇಟೆ ಕುಸಿತ; ರೂ 17 ಲಕ್ಷ ಕೋಟಿ ನಷ್ಟ

1ನೇ ಪುಟದಿಂದ

ಅಮೆರಿಕದ ಫೆಡರಲ್ ರಿಸರ್ವ್ ಮತ್ತಷ್ಟು ಹಣಕಾಸು ಬಿಗಿಗೊಳಿಸಬಹುದು ಎಂಬ ನಿರೀಕ್ಷೆಯೂ ಮಾರುಕಟ್ಟೆಯ ಮೇಲೆ ಒತ್ತಡ ತಂದಿದೆ.

ಜಾಗತಿಕ ತೈಲ ಮಾನದಂಡವಾದ ಬ್ರೆಂಟ್ ಕಚ್ಚಾ ತೈಲದ ಬೆಲೆ ಸುಮಾರು ಶೇ.4ರಷ್ಟು ಏರಿಕೆಯಾಗಿ ಬ್ಯಾರೆಲ್‌ಗೆ 108.3 ಡಾಲರ್‌ಗೆ ತಲುಪಿದೆ. ಪಶ್ಚಿಮ ಏಷ್ಯಾದ ಸಂಘರ್ಷ ಮತ್ತಷ್ಟು ತೀವ್ರಗೊಂಡರೆ ತೈಲ ಪೂರೈಕೆಗೆ ವ್ಯತ್ಯಯ ಉಂಟಾಗಿ ಬೆಲೆ ಇನ್ನಷ್ಟು ಏರಿಕೆಯಾಗುವ ಆತಂಕ ಮಾರುಕಟ್ಟೆಯಲ್ಲಿದೆ.

ಅಮೆರಿಕದ 10 ವರ್ಷದ ಬಾಂಡ್ ಇಳುವರಿ ಶೇ.5.2ರ ಮಟ್ಟಕ್ಕೆ ಏರಿರುವುದು ಹಾಗೂ ವಿದೇಶಿ ಹೂಡಿಕೆ ನಿಧಿಗಳ ಹೊರಹರಿವು ಕೂಡ ಭಾರತೀಯ ಮಾರುಕಟ್ಟೆಯ ಮೇಲೆ ಒತ್ತಡ ಹೆಚ್ಚಿಸಿದೆ ಎಂದು ಮಾರುಕಟ್ಟೆ ತಜ್ಞರು ಹೇಳಿದ್ದಾರೆ. ಜಾಗತಿಕ ಬಾಂಡ್ ಇಳುವರಿ ಏರಿಕೆ ಮತ್ತು ಬಲಿಷ್ಠ ಡಾಲರ್‌ನಿಂದ ಉದಯೋನ್ಮುಖ ಮಾರುಕಟ್ಟೆಗಳಿಗೆ ಸವಾಲು ಹೆಚ್ಚಾಗಿದ್ದು, ಮುಂದಿನ ದಿನಗಳಲ್ಲೂ ಹೂಡಿಕೆದಾರರು ಎಚ್ಚರಿಕೆಯ ನಿಲುವು ತಳೆಯುವ ಸಾಧ್ಯತೆಯಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.


ತೈಲ ಬೆಲೆ ಏರಿಕೆಯಿಂದ ಆಮದು ವೆಚ್ಚ ಹೆಚ್ಚಳ, ಹಣದುಬ್ಬರದ ಒತ್ತಡ ಮತ್ತು ಕಂಪನಿಗಳ ಲಾಭದ ಮೇಲೆ ಪರಿಣಾಮ ಬೀರುವ ಆತಂಕವೂ ಹೂಡಿಕೆದಾರರ ಮನೋಭಾವ ಕುಗ್ಗಿಸಿದೆ. ವಿಶೇಷವಾಗಿ ತೈಲ ಆಮದಿನ ಮೇಲೆ ಹೆಚ್ಚಿನ ಅವಲಂಬನೆ ಹೊಂದಿರುವ ಭಾರತದಲ್ಲಿ ಕಚ್ಚಾ ತೈಲ ಬೆಲೆ ಏರಿಕೆ ಆರ್ಥಿಕತೆಯ ಮೇಲೆ ಬೀರುವ ಪರಿಣಾಮದ ಬಗ್ಗೆ ಮಾರುಕಟ್ಟೆ ವಲಯದಲ್ಲಿ ಕಳವಳ ವ್ಯಕ್ತವಾಗಿದೆ.

ರೂಪಾಯಿ ಮೌಲ್ಯದ ಮೇಲೂ ತೈಲ ಬೆಲೆ ಏರಿಕೆಯ ಪರಿಣಾಮ ಬೀರುವ ಆತಂಕ ಮಾರುಕಟ್ಟೆಯಲ್ಲಿ ಮೂಡಿದೆ. ಹೆಚ್ಚಿನ ಆಮದು ವೆಚ್ಚದಿಂದ ಚಾಲ್ತಿ ಖಾತೆ ಕೊರತೆ ಹಾಗೂ ಹಣದುಬ್ಬರದ ಒತ್ತಡ ಹೆಚ್ಚಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ಹೂಡಿಕೆದಾರರು ಎಚ್ಚರಿಕೆಯ ನಿಲುವು ತಳೆದಿದ್ದಾರೆ.

ದಿನದ ವಹಿವಾಟಿನಲ್ಲಿ ಬಹುತೇಕ ಪ್ರಮುಖ ವಲಯಗಳ ಷೇರುಗಳು ಮಾರಾಟದ ಒತ್ತಡಕ್ಕೆ ಒಳಗಾದವು. ಜಾಗತಿಕ ಮಾರುಕಟ್ಟೆಗಳ ದುರ್ಬಲ ಸೂಚನೆ, ವಿದೇಶಿ ಹೂಡಿಕೆದಾರರ ನಿರಂತರ ಮಾರಾಟ ಹಾಗೂ ಭೌಗೋಳಿಕ ರಾಜಕೀಯ ಅನಿಶ್ಚಿತತೆ ಮುಂದುವರಿದರೆ ಮಾರುಕಟ್ಟೆಯಲ್ಲಿ ಏರಿಳಿತ ಹೆಚ್ಚಾಗುವ ಸಾಧ್ಯತೆಯಿದೆ ಎಂದು ವಿಶ್ಲೇಷಕರು ಹೇಳಿದ್ದಾರೆ.

# ಪುನೀತ್ ಕೆರೆಹಳ್ಳಿ ಬೇಡಿಕೆ ಈಡೇರಿಸಲು ಆಗ್ರಹ; ಕಾನೂನು ದುರುಪಯೋಗಕ್ಕೆ ಖಂಡನೆ

● ವಿಕ್ರಮ ವಾಹಿನಿ । ಬೆಂಗಳೂರು



ರಾಜ್ಯದಲ್ಲಿ ಕಾನೂನಿನ ಆಳ್ವಿಕೆ ಹಾಗೂ ನಾಗರಿಕರ ಸಂವಿಧಾನಬದ್ಧ ಹಕ್ಕುಗಳ ರಕ್ಷಣೆ ಖಚಿತಪಡಿಸಬೇಕು. ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ರಾಷ್ಟ್ರ ರಕ್ಷಣಾ ಪಡೆಯ ಅಧ್ಯಕ್ಷ ಪುನೀತ್ ಕೆರೆಹಳ್ಳಿ ಅವರ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸಲು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಹಿಂದೂ ರಾಷ್ಟ್ರ ಸಮನ್ವಯ ಸಮಿತಿ ವತಿಯಿಂದ ಬೆಂಗಳೂರು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಕಳೆದ 15 ದಿನಗಳಿಂದ ಪುನೀತ್ ಕೆರೆಹಳ್ಳಿ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದು, ಅವರ ಆರೋಗ್ಯದ ಬಗ್ಗೆ ತಕ್ಷಣ ಸ್ವತಂತ್ರ ವೈದ್ಯಕೀಯ ತಂಡದಿಂದ ತಪಾಸಣೆ ನಡೆಸಿ ಅಗತ್ಯ ಚಿಕಿತ್ಸೆ ಹಾಗೂ ಜೀವ ರಕ್ಷಣಾ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಬಸವನಗುಡಿ ಪೊಲೀಸ್ ಠಾಣಾ ವ್ಯಾಪ್ತಿಯ ಪ್ರಕರಣಕ್ಕೆ ಸಂಬಂಧಿಸಿದಂತೆ ಪುನೀತ್ ಕೆರೆಹಳ್ಳಿ ಹಾಗೂ ಅವರ ಸಹಚರರ ವಿರುದ್ಧ ದಾಖಲಿಸಿರುವ ಎಫ್‌ಐಆರ್‌ನ್ನು ಮರುಪರಿಶೀಲಿಸಬೇಕು. ಘಟನಾ ಸ್ಥಳದ ಸಿಸಿಟಿವಿ ದೃಶ್ಯಾವಳಿಗಳನ್ನು ಸಂರಕ್ಷಿಸಿ, ಸಾಕ್ಷ್ಯ ನಾಶಕ್ಕೆ ಯತ್ನಿಸಿದವರು ಹಾಗೂ ಕರ್ತವ್ಯಲೋಪ ಎಸಗಿದ ಅಧಿಕಾರಿಗಳ ವಿರುದ್ಧ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಮನವಿ ಮಾಡಲಾಗಿದೆ.

ಬಂಟ್ವಾಳದ ಅಬ್ದುಲ್ ರೆಹಮಾನ್ ಹತ್ಯೆ ಪ್ರಕರಣದಲ್ಲಿ ಭರತ್ ಕುಂಡ್ಮೇಲ್ ಸೇರಿದಂತೆ ಕೆಲವರ ವಿರುದ್ಧ ಕೈಗೊಂಡಿರುವ ನಿರ್ಬಂಧಾತ್ಮಕ ಕ್ರಮಗಳನ್ನೂ ಸ್ವತಂತ್ರವಾಗಿ ಪರಿಶೀಲಿಸಬೇಕು. ಆರ್‌ಎಸ್‌ಎಸ್ ಮುಖಂಡ ಡಾ. ಕಲ್ಲಡ್ಕ ಪ್ರಭಾಕರ ಭಟ್ ಅವರಿಗೆ ನೀಡಿರುವ ವಿಚಾರಣಾ ನೋಟಿಸ್ ಸೇರಿದಂತೆ ರಾಜ್ಯದ ವಿವಿಧೆಡೆ ಹಿಂದೂ ಕಾರ್ಯಕರ್ತರಿಗೆ ನೀಡಲಾಗುತ್ತಿರುವ ಗಡಿಪಾರು ಹಾಗೂ ಗೂಂಡಾ ಕಾಯಿದೆ ನೋಟಿಸ್‌ಗಳ ಕುರಿತು ಉನ್ನತ ಮಟ್ಟದ ಪರಿಶೀಲನಾ ಸಮಿತಿ ರಚಿಸಬೇಕು ಎಂದು ಆಗ್ರಹಿಸಲಾಗಿದೆ.

ಯಾವುದೇ ಸಮುದಾಯ ಅಥವಾ ವ್ಯಕ್ತಿಯನ್ನು ರಾಜಕೀಯ ಅಥವಾ ಸೈದ್ಧಾಂತಿಕ ಕಾರಣಗಳಿಂದ ಗುರಿಯಾಗಿಸದೆ, ಎಲ್ಲರಿಗೂ ಸಮಾನ ಕಾನೂನು ಮಾನದಂಡ ಅನ್ವಯಿಸುವಂತೆ ಸರ್ಕಾರಕ್ಕೆ ಸೂಕ್ತ ನಿರ್ದೇಶನ ನೀಡಬೇಕು ಎಂದು ರಾಜ್ಯಪಾಲರಲ್ಲಿ ಮನವಿ ಮಾಡಲಾಗಿದೆ.

ಮನವಿ ಸಲ್ಲಿಕೆ ವೇಳೆ ಹಿಂದೂ ಜನಜಾಗೃತಿ ಸಮಿತಿಯ ರಾಜ್ಯ ವಕ್ತಾರ ಮೋಹನ ಗೌಡ, ರಾಷ್ಟ್ರ ರಕ್ಷಣಾ ಪಡೆಯ ಚೇತನ್ ನಾಯ್ಕ್, ಶ್ರೀರಾಮ ಸೇನೆಯ ಮೋಹನ, ಯುವ ಬ್ರಿಗೇಡ್‌ನ ರಾಕೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಸಿಜೆಪಿ ಪಟ್ಟು

1ನೇ ಪುಟದಿಂದ

ಎಂಬ ಆರೋಪವನ್ನು ಪ್ರಸ್ತಾಪಿಸಿದರು. ಮತದಾರರ ಹಕ್ಕುಗಳಿಗೆ ಧಕ್ಕೆ ಉಂಟಾಗಿದೆ ಎಂದು ಆರೋಪಿಸಿ ಸೆ.24ರಂದು ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಸಿಜೆಪಿ ಆಗ್ರಹಿಸಿತ್ತು ಎಂದು ತಿಳಿಸಿದರು.

48 ಗಂಟೆಗಳ ಗಡುವು ನೀಡಿದ್ದರೂ ಯಾವುದೇ ನಿರ್ಧಾರವಾಗಿಲ್ಲ. ಇದೀಗ ಅ.2ರಿಂದ ದೇಶಾದ್ಯಂತ ಪ್ರತಿಭಟನೆ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡುವವರೆಗೆ ಹೋರಾಟ ಮುಂದುವರಿಯಲಿದೆ ಎಂದು ರಂಕಾ ಹೇಳಿದರು.

ಮತದಾರರ ಪಟ್ಟಿಯಿಂದ ಹೆಸರುಗಳನ್ನು ಕೈಬಿಡಲಾಗಿದೆ ಎಂಬ ಆರೋಪಗಳ ಕುರಿತು ಜ್ಞಾನೇಶ್ ಕುಮಾರ್ ಅವರು ಮಾಧ್ಯಮಗಳ ಮುಂದೆ ಸ್ಪಷ್ಟನೆ ನೀಡಬೇಕು. ಚುನಾವಣಾ ಆಯೋಗವು ಸ್ವತಂತ್ರ ಸಾಂವಿಧಾನಿಕ ಸಂಸ್ಥೆಯಾಗಿದ್ದು, ಎಸ್‌ಐಆರ್ ಕುರಿತು ಕೇಳಿಬಂದಿರುವ ಆರೋಪಗಳಿಗೆ ಸಾರ್ವಜನಿಕವಾಗಿ ಉತ್ತರಿಸಬೇಕು ಎಂದು ಅವರು ಒತ್ತಾಯಿಸಿದರು.

ಅಸ್ಸಾಂನಲ್ಲಿ ಮತಕ್ಷೇತ್ರಗಳ ಮರುವಿಂಗಡಣೆ ಹಾಗೂ ಮತದಾರರ ಪಟ್ಟಿಯ ಪರಿಷ್ಕರಣೆ ಕುರಿತು ಕೂಡ ರಂಕಾ ಹಲವು ಆರೋಪಗಳನ್ನು ಮಾಡಿದರು. ಈ ಪ್ರಕ್ರಿಯೆ ಆಡಳಿತಾರೂಢ ಬಿಜೆಪಿ ನೇತೃತ್ವದ ಸರ್ಕಾರಕ್ಕೆ ಅನುಕೂಲವಾಗುವ ರೀತಿಯಲ್ಲಿ ನಡೆದಿದೆ ಎಂದು ಅವರು ಆರೋಪಿಸಿದರು. ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಸಾರ್ವಜನಿಕವಾಗಿ ಸ್ಪಷ್ಟನೆ ನೀಡುವ ಅಗತ್ಯವಿದೆ ಎಂದು ಹೇಳಿದರು.

ಎಸ್‌ಐಆರ್‌ಗೆ ಸಂಬಂಧಿಸಿದಂತೆ ಚುನಾವಣಾ ಆಯೋಗದೊಳಗೆ ಭಿನ್ನಾಭಿಪ್ರಾಯಗಳಿದ್ದವು ಎಂಬ ಮಾಧ್ಯಮ ವರದಿಗಳನ್ನು ಉಲ್ಲೇಖಿಸಿದ ಅವರು, ಈ ಕುರಿತು ಆಯೋಗ ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದರು.

ಅಕ್ಟೋಬರ್ 2ರಂದು ಮುಂಬೈನಲ್ಲಿ ಪ್ರತಿಭಟನೆ ನಡೆಸಲು ಅನುಮತಿ ನಿರಾಕರಿಸಲಾಗಿದೆ ಎಂಬ ವರದಿಗಳ ಬಗ್ಗೆಯೂ ಪ್ರತಿಕ್ರಿಯಿಸಿದ ರಂಕಾ, ದೇಶಾದ್ಯಂತ ಪ್ರಜಾಸತ್ತಾತ್ಮಕ ರೀತಿಯಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದರು. ಯುವಜನರನ್ನು ಕಡೆಗಣಿಸುವ ಪ್ರಯತ್ನಗಳು ನಡೆದರೆ 'ಜೆನ್ ಝಡ್' ತನ್ನದೇ ರೀತಿಯಲ್ಲಿ ಪ್ರತಿಕ್ರಿಯಿಸಲಿದೆ ಎಂದು ಅವರು ಹೇಳಿದರು.

# ನಕಲಿ ಔಷಧ ಜಾಲದ ಪ್ರಮುಖ ಆರೋಪಿ ಎಸ್‌ಐಟಿ ವಶಕ್ಕೆ

1ನೇ ಪುಟದಿಂದ

ಈ ವೇಳೆ ಪ್ರಮುಖ ಔಷಧ ಕಂಪನಿಗಳ ಹೆಸರಿನ ನಕಲಿ ಲೇಬಲ್‌ಗಳು, ಪ್ಯಾಕಿಂಗ್ ಸಾಮಗ್ರಿಗಳು ಹಾಗೂ ಅಂದಾಜು 4.5ರಿಂದ 5 ಕೋಟಿ ಮೌಲ್ಯದ ನಕಲಿ ಔಷಧಗಳನ್ನು ಜಪ್ತಿ ಮಾಡಲಾಗಿತ್ತು.

ಐಸಿಯುಗಳಲ್ಲಿ ಬಳಸುವ ಜೀವ ರಕ್ಷಕ ಔಷಧಗಳನ್ನು ಕಳಪೆ ಗುಣಮಟ್ಟದಲ್ಲಿ ನಕಲು ತಯಾರಿಸಿ, ಮಾರುಕಟ್ಟೆ ಹಾಗೂ ಆಸ್ಪತ್ರೆಗಳಿಗೆ ಶೇ.50ರಷ್ಟು ರಿಯಾಯಿತಿ ದರದಲ್ಲಿ ಪೂರೈಸಲಾಗುತ್ತಿತ್ತು ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿತ್ತು ಎನ್ನಲಾಗಿದೆ. ಪ್ರಕರಣದ ಸಮಗ್ರ ತನಿಖೆಗಾಗಿ ರಾಜ್ಯ ಸರ್ಕಾರ ಜಂಟಿ ಪೊಲೀಸ್ ಆಯುಕ್ತ ಸಿ. ವಂಶಿಕೃಷ್ಣ ನೇತೃತ್ವದಲ್ಲಿ ಎಸ್‌ಐಟಿ ರಚಿಸಿತ್ತು.

ತನಿಖೆಯ ಬಳಿಕ ಚಿಲ್ಲರೆ ಹಾಗೂ ಸಗಟು ಔಷಧ ವ್ಯಾಪಾರಿಗಳಿಗೆ ಸೇರಿದ 16 ಔಷಧ ಪರವಾನಗಿಗಳನ್ನು ಆಹಾರ ಮತ್ತು ಔಷಧ ಆಡಳಿತ ಇಲಾಖೆ ರದ್ದುಗೊಳಿಸಿದ್ದು, ಇತರ ಎಂಟು ಪರವಾನಗಿಗಳನ್ನು ಅಮಾನತುಗೊಳಿಸಿದೆ. ಅಮಾನತುಗೊಂಡ ಪರವಾನಗಿಗಳಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲೂಕಿನ ಕೆಂಪಲಿಂಗನಹಳ್ಳಿಯಲ್ಲಿರುವ ಫೈಜರ್ ಸಿ&ಎಫ್ ಡಿಪೋದ ಪರವಾನಗಿಯೂ ಸೇರಿದೆ.

ಪ್ರಕರಣದಲ್ಲಿ ಔಷಧ ಮತ್ತು ಸೌಂದರ್ಯವರ್ಧಕಗಳ ಕಾಯ್ದೆ–1940ರ ಅಡಿಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗಿದೆ. ನಕಲಿ ಔಷಧಗಳ ತಯಾರಿಕೆ, ಮಾರಾಟ, ದಾಸ್ತಾನು ಅಥವಾ ಪೂರೈಕೆಗೆ ಕಾನೂನಿನಡಿ ಕಠಿಣ ಶಿಕ್ಷೆ ವಿಧಿಸಲು ಅವಕಾಶವಿದೆ.

# 'ಹರಿಪ್ರಸಾದ್ ಮಾತಿಗೆ ಕವಡೆಕಾಸಿನ ಕಿಮ್ಮತ್ತಿದೆಯೇ?'

● ವಿಕ್ರಮ ವಾಹಿನಿ । ಬೆಂಗಳೂರು

ಆರೆಸ್ಸೆಸ್ಸಿನವರದು ದೊಣ್ಣೆ ಅಲ್ಲ; ಅದು ಪಥಸಂಚಲನದ ಗಣವೇಷದ ಭಾಗ ಅಷ್ಟೇ. 100 ವರ್ಷಗಳ ಕಾಲದಲ್ಲಿ ಗಣವೇಷ ಇಟ್ಟುಕೊಂಡು ಯಾರಿಗೂ ಮೋಸ, ಅನ್ಯಾಯ, ವಂಚನೆ ಮಾಡಿದ್ದಿಲ್ಲ. ಆ ದೊಣ್ಣೆಯಿಂದ ಒಬ್ಬರನ್ನು ಥಳಿಸಿದ್ದಿಲ್ಲ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಹೇಳಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಪ್ರಶ್ನೆಗೆ ಉತ್ತರ ನೀಡಿದರು. ಬೆಂಗಳೂರು ಬಿಟ್ಟು ಯಾರನ್ನಾದರೂ ಯಾರಾದರೂ ಓಡಿಸಲು ಸಾಧ್ಯ ಇದೆಯೇ ಎಂದು ಕೇಳಿದರು. ಅವರ ಕಾಲ ಒಂದಿತ್ತು. ತಳವಾರು ಹಿಡಿದು ಓಡಾಡುತ್ತಿದ್ದ ಕಾಲ ಅದು ಎಂದು ವ್ಯಂಗ್ಯವಾಡಿದರು. ಈಗ ಅದನ್ನು ಹಿಡಿದು ಓಡಾಡಲು ಅವರಿಗೆ ಆಗುವುದಿಲ್ಲ ಅಲ್ಲವೇ ಎಂದು ಪ್ರಶ್ನಿಸಿದರು.

ಆರೆಸ್ಸೆಸ್ ವಿರುದ್ಧ ಕಾಂಗ್ರೆಸ್ಸಿನ ಕಪೋಲಕಲ್ಪಿತ ಹೇಳಿಕೆ ಬಿಟ್ಟರೆ ಯಾವುದೇ ಕೇಸ್ ಕೂಡ ಇಲ್ಲ. ಆರೆಸ್ಸೆಸ್ ಅನ್ನು ಕಟ್ಟಾ ವಿರೋಧಿಸುವವರು ಈಗ ಗೃಹ ಸಚಿವರಾಗಿದ್ದಾರೆ. ಆರೆಸ್ಸೆಸ್ ವಿರುದ್ಧ ಯಾವುದೇ ಕೇಸ್ ಬಾಕಿ ಇಲ್ಲ ಎಂದು ಅವರೇ ಹೇಳಿದ್ದಾರೆ ಎಂದು ನುಡಿದರು. ಅಂದಮೇಲೆ ಹರಿಪ್ರಸಾದ್ ಅವರ ಮಾತಿಗೆ ಕವಡೆಕಾಸಿನ ಕಿಮ್ಮತ್ತಿದೆಯೇ ಎಂದು ಕೇಳಿದರು.

**ಇದು ತಳವಾರು ಕಾಲ ಅಲ್ಲ:** ಇದು ತಳವಾರು ಕಾಲ ಅಲ್ಲ; ಈಗ ವಂದೇ ಮಾತರಂ. ಸದನದಲ್ಲಿ ಪೂರ್ಣ ಹಾಡನ್ನು ಹಾಡುತ್ತಿದ್ದೆವು. ಅದನ್ನು ಕಾಂಗ್ರೆಸ್ ನಿಲ್ಲಿಸಿದ್ದೇಕೆ ಎಂದು ಪ್ರಶ್ನೆ ಹಾಕಿದರು. ಇದರಿಂದ ಭಂಡತನ ಪ್ರದರ್ಶನ ಆಗಿದೆ. ಅದು ನಿಮ್ಮಲ್ಲಿನ ದೋಷ ಎಂದು ಆಕ್ಷೇಪಿಸಿದರು.

**ಹೊಡಿ, ಬಡಿ, ಕಡಿ ಸಂಸ್ಕೃತಿ ಅವರದು:** ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಅವರಿಂದ ಒಳ್ಳೆಯದನ್ನು ನಿರೀಕ್ಷೆ ಮಾಡಲು ಸಾಧ್ಯವಿಲ್ಲ. ಹೊಡಿ, ಬಡಿ, ಕಡಿ ಸಂಸ್ಕೃತಿ ಅವರದು. ನಿನ್ನೆಯ ನನ್ನ ಎಸ್‌ಐಆರ್ ಹೇಳಿಕೆ ಸಂಬಂಧ ಮನೆಗೆ ಕಲ್ಲೆಸೆಯಲು ಪುಡಿ ಕಾಂಗ್ರೆಸ್ ಕಾರ್ಯಕರ್ತರನ್ನು ಕಳಿಸಿದ್ದಾರೆ ಎಂದು ದೂರಿದರು.

ಪಶ್ಚಿಮ ಬಂಗಾಲದ ನಂತರ ಹೆಚ್ಚು ಬಾಂಗ್ಲಾ ದೇಶೀಯರು ಕರ್ನಾಟಕದಲ್ಲಿದ್ದಾರೆ. ಕಾಂಗ್ರೆಸ್ಸಿನವರೇ ಅವರಿಗೆ ಅವಿತುಕೊಳ್ಳಲು ಅವಕಾಶ ನೀಡುತ್ತಿದ್ದಾರೆ. ಕಾಫಿ ಎಸ್ಟೇಟ್‌ನಲ್ಲಿ ಕೆಲಸ ಮಾಡುವ ಬಾಂಗ್ಲಾ ದೇಶದವರಿದ್ದಾರೆ. ಹೋಟೆಲ್ ಕಾರ್ಮಿಕರಾಗಿಯೂ ಇದ್ದಾರೆ. ಬೆಂಗಳೂರು, ಶಿವಮೊಗ್ಗ, ಧಾರವಾಡ, ಗುಲ್ಬರ್ಗದಲ್ಲಿ ಇದ್ದು ಎಲ್ಲ ಕಡೆ ಇದ್ದಾರೆ. ಅವರು ಕಾಂಗ್ರೆಸ್ಸಿಗೆ ಅತಿ ಪ್ರಿಯರು ಎಂದು ಆಕ್ಷೇಪಿಸಿದರು.

**ಕೇರಳದಲ್ಲಿ ಮತಗಳ್ಳತನದ ಮಾತಿಲ್ಲವೇಕೆ?**

ಕೇರಳದಲ್ಲಿ ಎಸ್‌ಐಆರ್ ಆದುದರಿಂದ ಅನುಕೂಲ ಆಗಿದೆ ಎಂದು ರಮೇಶ್ ಚೆನ್ನಿತ್ತಲ ಹೇಳಿಕೆ ಕೊಟ್ಟಿದ್ದಾರೆ. ಕಮ್ಯುನಿಸ್ಟರ ಬೋಗಸ್ ಮತದಾನಕ್ಕೆ ತಡೆ ಆಗಿದೆ. ನಮಗೆ ಸುಲಭ ಆದುದಾಗಿ ಹೇಳಿದ್ದಾರೆ. ಕರ್ನಾಟಕದಲ್ಲಿ 136 ಸೀಟು ಗೆದ್ದಿದ್ದೀರಿ. ಮತಗಳ್ಳತನ ಆದುದಾಗಿ ಒಂದು ದಿನವೂ ನೀವು ಹೇಳಿಲ್ಲ ಎಂದು ಆರೋಪಿಸಿದರು. ತೆಲಂಗಾಣದಲ್ಲಿ ನೀವೇ ಗೆದ್ದಾಗ ಮತಗಳ್ಳತನ ಎಂಬ ಮಾತನಾಡಿಲ್ಲ ಎಂದು ದೂರಿದರು. ದೇಶದಲ್ಲಿ ಮತಗಳ್ಳತನ ಆಗಿಲ್ಲ; ಕಾಂಗ್ರೆಸ್ಸಿನ ಚೋರರಿಗೆ ಮತದಾರರು ಮತ ಹಾಕಿಲ್ಲ ಎಂದು ವಿಶ್ಲೇಷಿಸಿದರು.



ವಿಕ್ರಮ ವಾಹಿನಿ
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ಸೆಪ್ಟಂಬರ್, 29- 2026
ಮಂಗಳವಾರ

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481


ಸ್ತನ ಕ್ಯಾನ್ಸರ್ ಜಾಗೃತಿ ಹಾಗೂ ಮಹಿಳೆಯರ ಆರೋಗ್ಯದ ಮಹತ್ವ ಸಾರಲು ಹೈದರಾಬಾದ್‌ನಲ್ಲಿ ನಡೆದ 'ಪಿಂಕ್ ಪವರ್ ರನ್ 3.0'ರಲ್ಲಿ 35 ಸಾವಿರಕ್ಕೂ ಅಧಿಕ ಮಂದಿ ಪಾಲ್ಗೊಂಡರು. 21, 10, 5 ಮತ್ತು 3 ಕಿ.ಮೀ. ವಿಭಾಗಗಳ ಓಟದಲ್ಲಿ 12ಕ್ಕೂ ಹೆಚ್ಚು ದೇಶಗಳ ಓಟಗಾರರು, ವಿವಿಧ ವಯೋಮಾನದವರು ಹಾಗೂ ಗಣ್ಯರು ಭಾಗವಹಿಸಿ ಜಾಗೃತಿ ಸಂದೇಶ ಸಾರಿದರು.

# ಸ್ತನ ಕ್ಯಾನ್ಸರ್ ಜಾಗೃತಿಗೆ ಬೃಹತ್ ಓಟ; 12ಕ್ಕೂ ಹೆಚ್ಚು ದೇಶಗಳ ಓಟಗಾರರ ಭಾಗಿ

● ವಿಕ್ರಮ ವಾಹಿನಿ । ಹೈದರಾಬಾದ್

ಸ್ತನ ಕ್ಯಾನ್ಸರ್ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಹಾಗೂ ಮಹಿಳೆಯರ ಆರೋಗ್ಯದ ಮಹತ್ವವನ್ನು ಸಾರುವ ಉದ್ದೇಶದಿಂದ ಆಯೋಜಿಸಿದ್ದ 'ಪಿಂಕ್ ಪವರ್ ರನ್ 3.0'ಕ್ಕೆ ಹೈದರಾಬಾದ್‌ನಲ್ಲಿ ಭಾನುವಾರ ಭರ್ಜರಿ ಪ್ರತಿಕ್ರಿಯೆ ವ್ಯಕ್ತವಾಯಿತು. ನಗರದ ಪ್ರಸಾದ್ ಐಮ್ಯಾಕ್ಸ್ ಬಳಿಯ ಎಚ್‌ಎಂಡಿಎ ಮೈದಾನದಲ್ಲಿ ನಡೆದ ಓಟದಲ್ಲಿ ಸುಮಾರು 35 ಸಾವಿರ ಮಂದಿ ಭಾಗವಹಿಸಿ ಮಹಿಳೆಯರ ಆರೋಗ್ಯದ ಕುರಿತು ಜಾಗೃತಿ ಮೂಡಿಸಿದರು.

**ನಾಲ್ಕು ವಿಭಾಗಗಳಲ್ಲಿ ಓಟ:** ಮೇಘಾ ಎಂಜಿನಿಯರಿಂಗ್ ಮತ್ತು ಇನ್ಫ್ರಾಸ್ಟ್ರಕ್ಚರ್ಸ್ ಲಿಮಿಟೆಡ್ (ಎಂಇಐಎಲ್) ಮತ್ತು ಸುಧಾ ರೆಡ್ಡಿ ಫೌಂಡೇಶನ್ ಜಂಟಿಯಾಗಿ ಆಯೋಜಿಸಿದ್ದ ಓಟದಲ್ಲಿ 21 ಕಿ.ಮೀ. ಹಾಫ್ ಮ್ಯಾರಥಾನ್, 10 ಕಿ.ಮೀ., 5 ಕಿ.ಮೀ. ಹಾಗೂ 3 ಕಿ.ಮೀ. ವಿಭಾಗಗಳಿದ್ದವು. ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ಕುರಿತು ಜಾಗೃತಿ, ಆರಂಭಿಕ ಹಂತದಲ್ಲೇ ಪತ್ತೆಹಚ್ಚುವಿಕೆ, ತಡೆಗಟ್ಟುವಿಕೆ ಹಾಗೂ ಆರೋಗ್ಯಕರ ಜೀವನಶೈಲಿಯ ಅಗತ್ಯವನ್ನು ಜನರಿಗೆ ತಿಳಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿತ್ತು.

**ಅಂತರರಾಷ್ಟ್ರೀಯ ಓಟಗಾರರ ಭಾಗಿ:** 21 ಕಿ.ಮೀ. ಹಾಫ್ ಮ್ಯಾರಥಾನ್‌ನಲ್ಲಿ ಅಮೆರಿಕ, ಬ್ರಿಟನ್, ಯುಎಇ, ಇಥಿಯೋಪಿಯಾ, ಉಗಾಂಡಾ, ಶ್ರೀಲಂಕಾ, ಐಸ್ಲ್ಯಾಂಡ್, ಟಾಂಜಾನಿಯಾ, ಬೋಟ್ಸ್ವಾನಾ, ಕೀನ್ಯಾ ಮತ್ತು ಕೆನಡಾ ಸೇರಿದಂತೆ ಒಂದು ಡಜನ್‌ಗೂ ಹೆಚ್ಚು ದೇಶಗಳ ಓಟಗಾರರು ಪಾಲ್ಗೊಂಡರು. ಇದರಿಂದ ಪಿಂಕ್ ಪವರ್ ರನ್‌ಗೆ ಅಂತರರಾಷ್ಟ್ರೀಯ ಮಟ್ಟದಲ್ಲೂ ಗಮನ ಸೆಳೆಯಿತು.




**5 ವರ್ಷದ ಮಗುವಿನಿಂದ 80ರ ಹರೆಯದವರವರೆಗೆ** ಓಟದಲ್ಲಿ ವಿವಿಧ ವಯೋಮಾನದವರು ಭಾಗವಹಿಸಿದ್ದು ವಿಶೇಷವಾಗಿತ್ತು. ಐದು ವರ್ಷದ ಮಕ್ಕಳಿಂದ 80 ವರ್ಷಕ್ಕೂ ಮೇಲ್ಪಟ್ಟ ಹಿರಿಯರವರೆಗೆ ಹಾಗೂ ವಿಕಲಚೇತನರು ಕೂಡ ಓಟದಲ್ಲಿ ಪಾಲ್ಗೊಂಡರು. ಮಹಾರಾಷ್ಟ್ರದ ಬೀಡ್ ಜಿಲ್ಲೆಯ ಅಂಬಾಜೋಗೈನ 47 ವರ್ಷದ ರಮಾಬಾಯಿ ರಣವೀರ್ ಅವರ ಭಾಗವಹಿಸುವಿಕೆ ಗಮನ ಸೆಳೆಯಿತು.

**ಗಣ್ಯರ ಉಪಸ್ಥಿತಿ:** ಪಂಚಾಯತ್ ರಾಜ್ ಮತ್ತು ಗ್ರಾಮೀಣಾಭಿವೃದ್ಧಿ ಸಚಿವೆ ದಾನಸರಿ ಅನಸೂಯಾ (ಸೀತಕ್ಕ) ಸೇರಿದಂತೆ ಹಲವು ಗಣ್ಯರು ಓಟಕ್ಕೆ ಚಾಲನೆ ನೀಡಿದರು. ತೆಲಂಗಾಣ ಪೊಲೀಸ್ ಮಹಾನಿರ್ದೇಶಕ ಸಿ.ವಿ. ಆನಂದ್, ಎಂಇಐಎಲ್ ಗ್ರೂಪ್‌ನ ವ್ಯವಸ್ಥಾಪಕ ನಿರ್ದೇಶಕ ಪಿ.ವಿ. ಕೃಷ್ಣ ರೆಡ್ಡಿ, ಸುಧಾ ರೆಡ್ಡಿ ಫೌಂಡೇಶನ್ ಸಂಸ್ಥಾಪಕಿ ಸುಧಾ ರೆಡ್ಡಿ, ಹೈದರಾಬಾದ್‌ನ ಅಮೆರಿಕ ಕಾನ್ಸುಲ್ ಜನರಲ್ ಲಾರಾ ವಿಲಿಯಮ್ಸ್, ಒಲೆಕ್ಟ್ರಾ ಗ್ರೀನ್‌ಟೆಕ್‌ನ ಉಪಾಧ್ಯಕ್ಷ ವಿ.ವಿ. ಲಕ್ಷ್ಮೀನಾರಾಯಣ ಸೇರಿದಂತೆ ಹಲವು ಗಣ್ಯರು ಪಾಲ್ಗೊಂಡಿದ್ದರು.

**ನಟರು, ಕ್ರೀಡಾಪಟುಗಳಿಂದ ಉತ್ಸಾಹ:** ಮಾಜಿ ಮಿಸ್ ವರ್ಲ್ಡ್ ಥೈಲ್ಯಾಂಡ್ ಓಪಲ್ ಸುಚತಾ, ಭಾರತೀಯ ವೃತ್ತಿಪರ ಬಾಕ್ಸರ್ ವಿಜೇಂದರ್ ಸಿಂಗ್, ನಟ ಸಿದ್ದು ಜೊನ್ನಲಗಡ್ಡ ಹಾಗೂ ಸಂಗೀತ ನಿರ್ದೇಶಕ ಎಸ್. ಥಮನ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಓಟಗಾರರನ್ನು ಹುರಿದುಂಬಿಸಿದರು. ಓಪಲ್ ಸುಚತಾ 5 ಮತ್ತು 10 ಕಿ.ಮೀ. ಓಟಕ್ಕೆ ಚಾಲನೆ ನೀಡಿದರು. ಗಣ್ಯರ ನೇರ ಪ್ರದರ್ಶನ ಹಾಗೂ ಭಾಗವಹಿಸುವಿಕೆ ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗು ನೀಡಿತು.

**ವಿಜೇತರಿಗೆ ರೂ 75 ಲಕ್ಷ ಬಹುಮಾನ:** 21 ಕಿ.ಮೀ. ಹಾಫ್ ಮ್ಯಾರಥಾನ್‌ನ ಪುರುಷರ ವಿಭಾಗದಲ್ಲಿ ಸುನೀಲ್ ಕುಮಾರ್ ಹಾಗೂ ಮಹಿಳಾ ವಿಭಾಗದಲ್ಲಿ ಸೋನಮ್ ಮೊದಲ ಸ್ಥಾನ ಪಡೆದರು. 10 ಕಿ.ಮೀ. ವಿಭಾಗದಲ್ಲಿ ಹರೀಶ್ ಶರೀನ್ ಮತ್ತು ವಂದನಾ ಪಟೇಲ್, 5 ಕಿ.ಮೀ. ವಿಭಾಗದಲ್ಲಿ ಲವ್ ಚೌಧರಿ ಮತ್ತು ಅಂಜಲಿ ಅಗ್ರಸ್ಥಾನ ಗಳಿಸಿದರು. ವಿವಿಧ ವಿಭಾಗಗಳಲ್ಲಿ ಅಗ್ರಸ್ಥಾನ ಪಡೆದವರಿಗೆ ಪದಕ, ಟ್ರೋಫಿ ಸೇರಿದಂತೆ ಒಟ್ಟು ರೂ 75 ಲಕ್ಷ ನಗದು ಬಹುಮಾನಗಳನ್ನು ವಿತರಿಸಲಾಯಿತು.

**ಆರೋಗ್ಯವೇ ಪ್ರಮುಖ ಸಂದೇಶ:** ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವೆ ದಾನಸರಿ ಅನಸೂಯಾ, ಇಂತಹ ಜಾಗೃತಿ ಕಾರ್ಯಕ್ರಮಗಳು ಆರೋಗ್ಯದ ಕುರಿತು ಜನರಲ್ಲಿ ಅರಿವು ಮೂಡಿಸಲು ಸಹಕಾರಿಯಾಗುತ್ತವೆ ಎಂದು ಹೇಳಿದರು. ಎಂಇಐಎಲ್ ವ್ಯವಸ್ಥಾಪಕ ನಿರ್ದೇಶಕ ಪಿ.ವಿ. ಕೃಷ್ಣ ರೆಡ್ಡಿ, ಜೀವನಶೈಲಿ ಸಂಬಂಧಿತ ಕಾಯಿಲೆಗಳನ್ನು ತಡೆಗಟ್ಟಲು ನಿಯಮಿತ ವ್ಯಾಯಾಮ ಅಗತ್ಯ ಎಂದು ತಿಳಿಸಿದರು.

ಸುಧಾ ರೆಡ್ಡಿ ಮಾತನಾಡಿ, ಪಿಂಕ್ ಪವರ್ ರನ್‌ನ ಮೂರನೇ ಆವೃತ್ತಿಗೆ ದೊರೆತಿರುವ ಭಾರಿ ಪ್ರತಿಕ್ರಿಯೆ ಸಂತಸ ತಂದಿದೆ. ಆರೋಗ್ಯ ಮತ್ತು ದೈಹಿಕ ಕ್ಷಮತೆಯನ್ನು ಪ್ರತಿಯೊಬ್ಬರೂ ತಮ್ಮ ಜೀವನದ ಪ್ರಮುಖ ಆದ್ಯತೆಯನ್ನಾಗಿ ಮಾಡಿಕೊಂಡು, ಅದರ ಸಂದೇಶವನ್ನು ಕುಟುಂಬ ಹಾಗೂ ಸಮುದಾಯಕ್ಕೆ ಕೊಂಡೊಯ್ಯಬೇಕು ಎಂದು ಕರೆ ನೀಡಿದರು.

**ಜಾಗೃತಿ ವಿಸ್ತರಣೆಗೆ ಸಂಕಲ್ಪ:** ಸ್ತನ ಕ್ಯಾನ್ಸರ್‌ನ ಆರಂಭಿಕ ಪತ್ತೆ, ತಡೆಗಟ್ಟುವಿಕೆ ಮತ್ತು ನಿಯಮಿತ ಆರೋಗ್ಯ ತಪಾಸಣೆಯ ಕುರಿತು ಜಾಗೃತಿ ಮೂಡಿಸುವ ಈ ಅಭಿಯಾನವನ್ನು ಮುಂದಿನ ವರ್ಷಗಳಲ್ಲೂ ವಿಸ್ತರಿಸುವುದಾಗಿ ಸಂಘಟಕರು ತಿಳಿಸಿದರು. 35 ಸಾವಿರಕ್ಕೂ ಅಧಿಕ ಮಂದಿ ಒಂದೇ ವೇದಿಕೆಯಲ್ಲಿ ಭಾಗವಹಿಸಿರುವುದು ಮಹಿಳೆಯರ ಆರೋಗ್ಯದ ಕುರಿತು ಸಾರ್ವಜನಿಕ ಜಾಗೃತಿ ಹೆಚ್ಚುತ್ತಿರುವುದಕ್ಕೆ ಸಾಕ್ಷಿಯಾಗಿದೆ ಎಂದು ಸಂಘಟಕರು ಹೇಳಿದರು.

# ವಾಯುವಿಹಾರಕ್ಕೆ ತೆರಳಿದ್ದ ವ್ಯಕ್ತಿ ಕಾಡಾನೆ ದಾಳಿಗೆ ಬಲಿ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರಿನ ಹೊರವಲಯ ಮೈಸೂರು ರಸ್ತೆಯ ಸಮೀಪದ ದೊಡ್ಡಬೆಲೆ ಗ್ರಾಮದ ಬಳಿ ಸೋಮವಾರ ಮುಂಜಾನೆ ಕಾಡಾನೆ ದಾಳಿಗೆ 60 ವರ್ಷದ ವ್ಯಕ್ತಿಯೊಬ್ಬರು ಮೃತಪಟ್ಟಿದ್ದಾರೆ.

ಮೃತರನ್ನು ಅಂಚೆಪಾಳ್ಯದ ನಿವಾಸಿ ನಾಗರಾಜು ಎಂದು ಗುರುತಿಸಲಾಗಿದೆ. ವಾರಾಹಿ ವಿವೇರಿಯಾ ಅಪಾರ್ಟ್‌ಮೆಂಟ್‌ಗಳ ಸಮೀಪ ಬೆಳಗ್ಗೆ ಸುಮಾರು 5 ಗಂಟೆಗೆ ಗಾಯಗೊಂಡ ಸ್ಥಿತಿಯಲ್ಲಿ ಪತ್ತೆಯಾದ ಅವರನ್ನು ರಾಜರಾಜೇಶ್ವರಿ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಲಾಯಿತು. ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ.

ಘಟನೆಯನ್ನು ಯಾರೂ ನೇರವಾಗಿ ನೋಡಿಲ್ಲ. ಆದರೆ ಅಪಾರ್ಟ್‌ಮೆಂಟ್‌ನ ಸಿಸಿಟಿವಿ ದೃಶ್ಯಾವಳಿಯಲ್ಲಿ ಬೆಳಗ್ಗೆ 5.11ರ ಸುಮಾರಿಗೆ ಮಲ್ಹಾರ್ ಅವೆನ್ಯೂ ರಸ್ತೆಯಲ್ಲಿ ಕಾಡಾನೆಯೊಂದು ಸಂಚರಿಸಿರುವುದು ಕಂಡುಬಂದಿದೆ. ಸ್ಥಳದಲ್ಲಿದ್ದ ಭದ್ರತಾ ಸಿಬ್ಬಂದಿಯೂ ಆನೆಯನ್ನು ಗಮನಿಸಿರುವುದಾಗಿ ತಿಳಿದುಬಂದಿದೆ. ಹೀಗಾಗಿ ಆನೆ ದಾಳಿಯ ಶಂಕೆ ವ್ಯಕ್ತವಾಗಿದೆ. ಮರಣೋತ್ತರ ಪರೀಕ್ಷೆಯ ಬಳಿಕ ಸಾವಿಗೆ ನಿಖರ ಕಾರಣ ತಿಳಿಯಲಿದೆ ಎಂದು ಕಗ್ಗಲಿಪುರ ವಲಯ ಅರಣ್ಯಾಧಿಕಾರಿ ಎನ್.ಆರ್. ಕಾಂಬ್ಳೆ ತಿಳಿಸಿದ್ದಾರೆ.

ಬನ್ನೇರುಘಟ್ಟ ವನ್ಯಜೀವಿ ಅಭಯಾರಣ್ಯದಿಂದ ಆನೆ ಈ ಪ್ರದೇಶಕ್ಕೆ ಬಂದಿರುವ ಸಾಧ್ಯತೆಯಿದೆ ಎಂದು ಅರಣ್ಯ ಅಧಿಕಾರಿಗಳು ತಿಳಿಸಿದ್ದಾರೆ. ಆನೆಯನ್ನು ಪತ್ತೆಹಚ್ಚಲು ಅರಣ್ಯ ಇಲಾಖೆ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಸಾಮಾನ್ಯವಾಗಿ ಬನ್ನೇರುಘಟ್ಟದಿಂದ ಬಿಎಂ ಕಾವಲ್ ಅರಣ್ಯ ಪ್ರದೇಶದತ್ತ ತೆರಳುವ ಆನೆಗಳು ಬಳಿಕ ಹಿಂದಿರುಗುತ್ತವೆ. ಆದರೆ ಈ ಪ್ರದೇಶದಲ್ಲಿ ಕಳೆದ ನಾಲ್ಕೈದು ವರ್ಷಗಳಿಂದ ಆನೆಗಳ ಸಂಚಾರ ಕಂಡುಬಂದಿರಲಿಲ್ಲ ಎನ್ನಲಾಗಿದೆ.


ನಾಗರಾಜು ಅವರು ಪ್ರತಿದಿನ ಬೆಳಗಿನ ವಾಯುವಿಹಾರಕ್ಕೆ ತೆರಳುತ್ತಿದ್ದರು. ಇತ್ತೀಚೆಗಷ್ಟೇ ಸಮೀಪದ ಕಾರ್ಖಾನೆಯಲ್ಲಿ ಕೆಲಸದಿಂದ ನಿವೃತ್ತರಾಗಿದ್ದರು ಎಂದು ಸ್ಥಳೀಯರು ತಿಳಿಸಿದ್ದಾರೆ. ಘಟನೆ ಹಿನ್ನೆಲೆಯಲ್ಲಿ ನಗರ ವಿಸ್ತರಣೆ ಹಾಗೂ ವನ್ಯಜೀವಿಗಳ ಆವಾಸಸ್ಥಾನದ ಸುತ್ತ ಹೆಚ್ಚುತ್ತಿರುವ ಮಾನವ ಚಟುವಟಿಕೆಗಳ ಬಗ್ಗೆ ಆತಂಕ ವ್ಯಕ್ತವಾಗಿದೆ.

## ಕ್ವಾರಿ ತ್ಯಾಜ್ಯ ನೀರು: ಅಧಿಕಾರಿ

# ಅಮಾನತಿಗೆ ಸೂಚನೆ

● ವಿಕ್ರಮ ವಾಹಿನಿ । ಯಾದಗಿರಿ

ಕಡೇಚೂರು-ಬಾಡಿಯಾಳ ಕ್ವಾರಿ ಪ್ರದೇಶದಲ್ಲಿರುವ ರಾಸಾಯನಿಕ ಕ್ವಾರಿಗಳಿಂದ ಸಂಗ್ರಹಿಸಿದ ಅಪಾಯಕಾರಿ ತ್ಯಾಜ್ಯ ನೀರನ್ನು ಯಾವುದೇ ಸಂಸ್ಕರಣೆ ಇಲ್ಲದೆ ನೇರವಾಗಿ ಭೀಮಾ ನದಿಗೆ ಹೊರಬಿಡಲಾಗುತ್ತಿದ್ದು ಜಲಮಾಲಿನ್ಯ ಉಂಟಾಗಿರುವ ಹಿನ್ನೆಲೆಯಲ್ಲಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ರಾಮಲಿಂಗಾರೆಡ್ಡಿ ಅವರು ಗರಂ ಆಗಿದ್ದು ಸಂಬಂಧಿಸಿದ ಅಧಿಕಾರಿಯ ಅಮಾನತ್ತಿಗೆ ಸೂಚಿಸಿದ್ದಾರೆ.



ಈ ಕುರಿತು ಬೆಂಗಳೂರಿನ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯ ಕಾರ್ಯದರ್ಶಿ ಇವರಿಗೆ ಪತ್ರ ಬರೆದಿರುವ ಸಚಿವರು, ಸಂಸ್ಕರಿಸದ ನೀರು ಭೀಮಾ ನದಿಗೆ ಸೇರುತ್ತಿರುವುದು ತೀವ್ರ ಕಳವಳಕಾರಿ. ಕ್ವಾರಿಗಳಿಂದ ಹೊರಬರುವ ತ್ಯಾಜ್ಯ ನೀರನ್ನು ಸೂಕ್ತವಾಗಿ ಸಂಸ್ಕರಿಸದೆ ನದಿ ಹಾಗೂ ಜಲಮೂಲಗಳಿಗೆ ಹರಿಸುವುದರಿಂದ ಜಲಮಾಲಿನ್ಯ ಉಂಟಾಗುವುದಲ್ಲದೆ, ಜನ-ಜಾನುವಾರುಗಳ ಆರೋಗ್ಯಕ್ಕೂ ಭಾರೀ ಅಪಾಯವಿದೆ. ಪರಿಸರದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ. ಇಂತಹ ಘಟನೆಗಳು ನಡೆಯದಂತೆ ನಿಯಂತ್ರಿಸುವುದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಮುಖ ಜವಾಬ್ದಾರಿ ಎಂದು ಸಚಿವರು ತಿಳಿಸಿದ್ದಾರೆ.

ಈ ಪ್ರಕರಣವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ಕಡೇಚೂರು-ಬಾಡಿಯಾಳ ಕ್ವಾರಿ ಪ್ರದೇಶದಲ್ಲಿರುವ ಸಂಬಂಧಿತ ಕ್ವಾರಿಗಳ ವಿರುದ್ಧ ತಕ್ಷಣವೇ ಪರಿಶೀಲನೆ ನಡೆಸಿ, ತ್ಯಾಜ್ಯ ನೀರಿನ ಮಾದರಿ ಸಂಗ್ರಹಿಸಿ ಗುಣಮಟ್ಟ ಪರೀಕ್ಷಿಸಬೇಕು. ನಿಯಮ ಉಲ್ಲಂಘಿಸಿದ ಕ್ವಾರಿಗಳ ವಿರುದ್ಧ ಯಾವುದೇ ವಿಳಂಬವಿಲ್ಲದೆ ಕಾನೂನುಬದ್ಧ ಹಾಗೂ ಕಠಿಣ ಕ್ರಮ ಕೈಗೊಳ್ಳಬೇಕು. ಈ ರೀತಿಯ ಬೇಜವಾಬ್ದಾರಿ ಕಾರ್ಯವೈಖರಿಗೆ ಕಾರಣರಾದ ಅಧಿಕಾರಿಯನ್ನು ಕೂಡಲೇ ನಿಯಮಾನುಸಾರ ಅಮಾನತು ಮಾಡಬೇಕು. ವಿಚಾರಣೆ ನಡೆಸಿ ಅನುಸರಣಾ ವರದಿ ಸಲ್ಲಿಸಬೇಕು. ಇನ್ನು ಮುಂದೆ ಇಂತಹ ಘಟನೆಗಳು ಮರುಕಳಿಸದಂತೆ ಮಂಡಳಿ ವತಿಯಿಂದ ಸೂಕ್ತ ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳಬೇಕೆಂದು ಸಚಿವ ರಾಮಲಿಂಗಾರೆಡ್ಡಿ ಸೂಚಿಸಿದ್ದಾರೆ.

# ದಸರಾ ಉದ್ಘಾಟನೆಗೆ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳಿಗೆ ಆಹ್ವಾನ

● ವಿಕ್ರಮ ವಾಹಿನಿ । ಮೈಸೂರು

ವಿಶ್ವವಿಖ್ಯಾತ ಮೈಸೂರು ದಸರಾ-2026ರ ಉದ್ಘಾಟನೆಗೆ ಕೊಪ್ಪಳದ ಗವಿಮಠದ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳನ್ನು ಜಿಲ್ಲಾಡಳಿತದ ವತಿಯಿಂದ ಅಕ್ಟೋಬರ್ 3ರಂದು ಅಧಿಕೃತವಾಗಿ ಆಹ್ವಾನಿಸಲಾಗುವುದು.

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ, ಜಿಲ್ಲಾಧಿಕಾರಿ ಹಾಗೂ ದಸರಾ ಮಹೋತ್ಸವದ ವಿಶೇಷಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ಜಿ. ಹಾಗೂ ದಸರಾ ಸ್ವಾಗತ ಸಮಿತಿಯ ಪದಾಧಿಕಾರಿಗಳು ಅ.3ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳದ ಗವಿಮಠಕ್ಕೆ ತೆರಳಲಿದ್ದಾರೆ.



ಈ ವೇಳೆ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳಿಗೆ ಗೌರವಪೂರ್ವಕವಾಗಿ ದಸರಾ ಉದ್ಘಾಟನಾ ಸಮಾರಂಭದ ಆಹ್ವಾನ ಪತ್ರಿಕೆ ನೀಡಿ, ಅಕ್ಟೋಬರ್ 11ರಂದು ನಡೆಯಲಿರುವ ವಿಶ್ವವಿಖ್ಯಾತ ಮೈಸೂರು ದಸರಾ ಕಾರ್ಯಕ್ರಮವನ್ನು ಉದ್ಘಾಟಿಸಿ, ಮಹೋತ್ಸವವನ್ನು ಯಶಸ್ವಿಗೊಳಿಸಬೇಕೆಂದು ಮನವಿ ಮಾಡಲಿದ್ದಾರೆ.

ಪ್ರತಿವರ್ಷ ವೈಭವದಿಂದ ನಡೆಯುವ ಮೈಸೂರು ದಸರಾ ಮಹೋತ್ಸವದ ಉದ್ಘಾಟನೆಗೆ ಈ ಬಾರಿ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳನ್ನು ಆಹ್ವಾನಿಸುವ ಮೂಲಕ ಧಾರ್ಮಿಕ ಹಾಗೂ ಸಾಂಸ್ಕೃತಿಕ ಮಹತ್ವಕ್ಕೆ ಆದ್ಯತೆ ನೀಡಲಾಗಿದೆ.

# ರೈತರ ಆದಾಯ ರಕ್ಷಣೆಗೆ 'ಸಂಪೂರ್ಣ ಗ್ರ್ಯಾಂಡ್ ಚಾಲೆಂಜ್'

● ವಿಕ್ರಮ ವಾಹಿನಿ । ಬೆಂಗಳೂರು

ಬೆಳೆಗಳ ಕಟಾವಿನ ನಂತರ ಉಂಟಾಗುವ ನಷ್ಟ ಹಾಗೂ ಆಹಾರ ವ್ಯರ್ಥವನ್ನು ತಗ್ಗಿಸಿ, ರೈತರ ಆದಾಯವನ್ನು ರಕ್ಷಿಸುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರ 'ಸಂಪೂರ್ಣ ಗ್ರ್ಯಾಂಡ್ ಚಾಲೆಂಜ್ 2026' ಉಪಕ್ರಮ ಹಮ್ಮಿಕೊಂಡಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ತಿಳಿಸಿದರು.



ವಿಧಾನಸೌಧದಲ್ಲಿ ನಡೆದ ಉಪಕ್ರಮದ ಉನ್ನತ ಮಟ್ಟದ ಸ್ಟೀರಿಂಗ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೃಷಿ ಮತ್ತು ತೋಟಗಾರಿಕಾ ಕ್ಷೇತ್ರದಲ್ಲಿನ ಕಟಾವಿನ ನಂತರದ ನಷ್ಟಗಳಿಗೆ ಪರಿಹಾರ ಕಂಡುಕೊಳ್ಳಲು ತಂತ್ರಜ್ಞಾನ ಆಧಾರಿತ ಹಾಗೂ ತಂತ್ರಜ್ಞಾನೇತರ ನವೀನ ಪರಿಹಾರಗಳನ್ನು ಗುರುತಿಸಲಾಗುತ್ತಿದೆ ಎಂದರು.

ಗ್ರ್ಯಾಂಡ್ ಚಾಲೆಂಜ್‌ಗೆ ರಾಜ್ಯದ ವಿವಿಧ ಕೃಷಿ-ವ್ಯಾಪಾರ, ಎಫ್‌ಪಿಒ, ಶೈಕ್ಷಣಿಕ ಮತ್ತು ಸಂಶೋಧನಾ ಸಂಸ್ಥೆಗಳು, ಇನ್‌ಕ್ಯೂಬೇಟರ್‌ಗಳು ಹಾಗೂ ಸರ್ಕಾರಿ ಸಂಸ್ಥೆಗಳಿಂದ ಒಟ್ಟು 210 ಅರ್ಜಿಗಳು ಸಲ್ಲಿಕೆಯಾಗಿದ್ದವು. ತಜ್ಞರ ಮೌಲ್ಯಮಾಪನದ ಬಳಿಕ ಆರು ನವೀನ ಪರಿಹಾರಗಳನ್ನು ಅಂತಿಮವಾಗಿ ಆಯ್ಕೆ ಮಾಡಲಾಗಿದ್ದು, ಅವುಗಳನ್ನು ಸರ್ಕಾರದ ಯೋಜನೆಗಳು, ಮಾರುಕಟ್ಟೆ ಹಾಗೂ ಹೂಡಿಕೆ ಅವಕಾಶಗಳೊಂದಿಗೆ ಸಂಪರ್ಕಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಆಹಾರ ನಷ್ಟವನ್ನು ಕೇವಲ ವ್ಯರ್ಥದ ಸಮಸ್ಯೆಯಾಗಿ ಪರಿಗಣಿಸದೆ, ರೈತರ ನೇರ ಆರ್ಥಿಕ ಸವಾಲಾಗಿ ಪರಿಗಣಿಸಿ ಪರಿಹಾರ ಕಂಡುಕೊಳ್ಳುವುದು 'ಸಂಪೂರ್ಣ' ವೇದಿಕೆಯ ಉದ್ದೇಶವಾಗಿದೆ. ನಷ್ಟ ಕಡಿಮೆ ಮಾಡುವ ಮೂಲಕ ಕೃಷಿ ಉತ್ಪನ್ನಗಳ ಮೌಲ್ಯ ಉಳಿಸಿ, ರೈತರ ಆದಾಯ ಹೆಚ್ಚಿಸಲು ಹಾಗೂ ಹವಾಮಾನ ಸ್ಥಿತಿಸ್ಥಾಪಕ ಆಹಾರ ವ್ಯವಸ್ಥೆ ರೂಪಿಸಲು ಆದ್ಯತೆ ನೀಡಲಾಗುತ್ತಿದೆ ಎಂದರು. 'ಸಂಪೂರ್ಣ ಗ್ರ್ಯಾಂಡ್ ಚಾಲೆಂಜ್ 2026'ರ ಸಮಾರೋಪ ಸಮಾರಂಭ ಅ.15ರಿಂದ 18ರವರೆಗೆ ಬೆಂಗಳೂರಿನ ಜಿಕೆವಿಕೆ ಆವರಣದಲ್ಲಿ ನಡೆಯಲಿರುವ ಕೃಷಿಮೇಳದಲ್ಲಿ ನಡೆಯಲಿದ್ದು, ಆಯ್ಕೆಯಾದ ಪರಿಹಾರಗಳನ್ನು ಪರಿಚಯಿಸಿ ಸರ್ಕಾರ, ಮಾರುಕಟ್ಟೆ ಹಾಗೂ ಹೂಡಿಕೆದಾರರೊಂದಿಗೆ ಸಂಪರ್ಕ ಕಲ್ಪಿಸಲಾಗುವುದು.

# ಭೂಸರ್ವೇಗೆ ತಜ್ಞರ ಆಯೋಗ ರಚಿಸಿ: ಕೋಟ

● ವಿಕ್ರಮ ವಾಹಿನಿ । ಚಿಬೆಂಗಳೂರು

ಕಸ್ತೂರಿರಂಗನ್ ವರದಿ ಜಾರಿಯಿಂದ ರೈತರಿಗೆ ತೊಂದರೆಯಾಗದಂತೆ ಕೇರಳ ಮಾದರಿಯಲ್ಲಿ ಕರ್ನಾಟಕದಲ್ಲಿ ಭೂಸರ್ವೇ ನಡೆಸಲು ತಜ್ಞರ ಆಯೋಗ ರಚಿಸಬೇಕು ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಆಗ್ರಹಿಸಿದರು.



ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ತಜ್ಞರ ಆಯೋಗವು ಆರು ತಿಂಗಳಿಂದ ಒಂದು ವರ್ಷದೊಳಗೆ ಅಧ್ಯಯನ ನಡೆಸಿ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸಬೇಕು. ಕಾಡು ಮತ್ತು ನಾಡಿನ ಪ್ರದೇಶಗಳನ್ನು ವೈಜ್ಞಾನಿಕವಾಗಿ ವಿಂಗಡಿಸಿ ರೈತಾಪಿ ವರ್ಗಕ್ಕೆ ಯಾವುದೇ ತೊಂದರೆಯಾಗದಂತೆ ಪರಿಹಾರ ಸೂಚಿಸಬೇಕು ಎಂದರು.

ಕಸ್ತೂರಿರಂಗನ್ ಹಾಗೂ ಮಾಧವ ಗಾಡ್ಗೀಳ್ ವರದಿಗಳಲ್ಲಿನ ಲೋಪದೋಷಗಳಿಗೆ ಹಿಂದಿನ ಕೇಂದ್ರ ಸರ್ಕಾರದ ನಿರ್ಧಾರಗಳೂ ಕಾರಣವಾಗಿದ್ದರೆ ಅದನ್ನು ವರದಿಯಲ್ಲಿ ಉಲ್ಲೇಖಿಸಬೇಕು. ಸುಪ್ರೀಂ ಕೋರ್ಟ್ ಹಾಗೂ ರಾಷ್ಟ್ರೀಯ ಹಸಿರು ನ್ಯಾಯಮಂಡಳಿಯ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಿರುವುದರಿಂದ, ರಾಜ್ಯದ ಹಿತದೃಷ್ಟಿಯಿಂದ ಆಯೋಗ ರಚಿಸುವಂತೆ ಹಿಂದಿನ ಹಾಗೂ ಈಗಿನ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದೆ ಎಂದು ಹೇಳಿದರು.

ಕಸ್ತೂರಿರಂಗನ್ ವರದಿಯನ್ನು ರಾಜಕೀಯಗೊಳಿಸಿ ಗೊಂದಲ ಸೃಷ್ಟಿಸಬಾರದು. ರೈತರ ಹಿತರಕ್ಷಣೆಯ ನಿಲುವು ಸರ್ಕಾರದ್ದಾಗಿದ್ದರೆ ಅದಕ್ಕೆ ಬಿಜೆಪಿ ಸಂಪೂರ್ಣ ಬೆಂಬಲ ನೀಡಲಿದೆ ಎಂದರು.

**ಬರ ನಿರ್ವಹಣೆಗೆ ಸಹಕಾರ:** ಬರದ ವಿಚಾರದಲ್ಲಿ ರಾಜಕಾರಣ ಮಾಡದೆ ಎಲ್ಲ ರೈತರು ಹಾಗೂ ಪ್ರದೇಶಗಳನ್ನು ಸಮಾನವಾಗಿ ಪರಿಗಣಿಸಿ ಪರಿಹಾರ ಕ್ರಮ ಕೈಗೊಳ್ಳಬೇಕು. ಗುಳೆ ಹೋಗುವ ಜನರಿಗೆ ನೆರವು ನೀಡುವುದರ ಜತೆಗೆ ಉದ್ಯೋಗ ಖಾತ್ರಿ ಯೋಜನೆಯಡಿ ಹೆಚ್ಚಿನ ಕೆಲಸ ಒದಗಿಸಬೇಕು. ಜನರ ಸಮಸ್ಯೆ ಪರಿಹರಿಸುವ ವಿಚಾರದಲ್ಲಿ ಬಿಜೆಪಿ ಸರ್ಕಾರಕ್ಕೆ ಸಹಕರಿಸಲಿದೆ ಎಂದು ತಿಳಿಸಿದರು.

**'ವಂದೇ ಮಾತರಂ' ಗೌರವಿಸಿ:** 'ವಂದೇ ಮಾತರಂ' ವಿಚಾರದಲ್ಲಿ ರಾಜಕೀಯ ಮಾಡದೆ ರಾಷ್ಟ್ರಗೀತೆಗೆ ಗೌರವ ನೀಡುವಂತೆ ಮುಖ್ಯಮಂತ್ರಿ ಹಾಗೂ ರಾಜ್ಯ ಸರ್ಕಾರಕ್ಕೆ ಕೋಟ ಶ್ರೀನಿವಾಸ ಪೂಜಾರಿ ಆಗ್ರಹಿಸಿದರು.

ಚುನಾವಣಾ ಆಯೋಗದ ವಿರುದ್ಧದ ಆರೋಪಗಳ ವಿಚಾರವಾಗಿಯೂ ಪ್ರತಿಕ್ರಿಯಿಸಿದ ಅವರು, ಕೇಂದ್ರ ಚುನಾವಣಾ ಆಯುಕ್ತರು ಹಾಗೂ ಸಹ ಆಯುಕ್ತರು ಸ್ಪಷ್ಟನೆ ನೀಡಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ತನ್ನ ಆರೋಪಗಳ ಬಗ್ಗೆ ವಾಸ್ತವಾಂಶಗಳನ್ನು ಗಮನದಲ್ಲಿಟ್ಟುಕೊಳ್ಳಬೇಕು ಎಂದರು. ಕರ್ನಾಟಕ ಮತ್ತು ಕೇರಳದಲ್ಲಿ ಗೆದ್ದಾಗ ಇವಿಎಂ ಬಗ್ಗೆ ತೃಪ್ತಿ ವ್ಯಕ್ತಪಡಿಸಿ, ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಗೆದ್ದಾಗ ಪ್ರಶ್ನಿಸುವುದು ಸರಿಯಲ್ಲ ಎಂದು ಟೀಕಿಸಿದರು.

# ಚುನಾವಣಾ ಆಯೋಗ ಹಾಗೂ ಶಿಕ್ಷಣ ನೀತಿಗಳ ಬಗ್ಗೆ ಸಿಡಬ್ಲ್ಯೂಸಿ ಸಭೆಯಲ್ಲಿ ಚರ್ಚೆ: ಡಿ.ಕೆ.ಶಿ

● ವಿಕ್ರಮ ವಾಹಿನಿ । ನವದೆಹಲಿ

"ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಸಿಡಬ್ಲ್ಯೂಸಿ) ಸಭೆಯಲ್ಲಿ ಚುನಾವಣಾ ಆಯೋಗ ಹಾಗೂ ಶಿಕ್ಷಣ ನೀತಿಗಳ ಬಗ್ಗೆ ಚರ್ಚೆ ನಡೆಸಲಾಗುವುದು" ಎಂದು ಸಿಎ ಡಿ ಕೆ ಶಿವಕುಮಾರ್ ಅವರು ಮಾಹಿತಿ ನೀಡಿದರು. ನವದೆಹಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಸೋಮವಾರ ಪ್ರತಿಕ್ರಿಯೆ ನೀಡಿದರು.

"ದೇಶದ ಶಿಕ್ಷಣ ವ್ಯವಸ್ಥೆ ಸುಧಾರಿಸಲು ಕೈಗೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ಚರ್ಚಿಸಲಾಗುವುದು. ಪರೀಕ್ಷೆಗಳು ನಡೆಯುವ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆ, ವ್ಯವಸ್ಥೆಗಳ ಸುಧಾರಣೆ ಹಾಗೂ ಯಾವ ಕ್ರಮಗಳನ್ನು ಅನುಸರಿಸಬೇಕೆಂದು ಚರ್ಚಿಸಲಾಗುವುದು. ನಮ್ಮಲ್ಲಿ ಈ ವಿಚಾರವಾಗಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದ್ದು, ಪಕ್ಷದ ನಾಯಕರುಗಳ ಜತೆಗೆ ನಾಲ್ಕು ರಾಜ್ಯಗಳ ಮುಖ್ಯಮಂತ್ರಿಗಳು ಸಭೆಯಲ್ಲಿ ಭಾಗವಹಿಸಲಿದ್ದಾರೆ" ಎಂದರು.

"ನಮಗೆ ದೇಶದ ಯುವಕರು ಹಾಗೂ ವಿದ್ಯಾರ್ಥಿಗಳ ಬಗ್ಗೆ ವಿಶೇಷ ಕಾಳಜಿ ಇದ್ದು, ನಮ್ಮ ಮೇಲೆ ಹೆಚ್ಚಿನ ಜವಾಬ್ದಾರಿ ಇದೆ. ಕಳೆದ 40-50 ವರ್ಷಗಳಿಂದ ನಮ್ಮ ಶಿಕ್ಷಣ ಸಚಿವರು ಉತ್ತಮ ಕ್ರಮಗಳನ್ನು ಕೈಗೊಂಡಿದ್ದರು" ಎಂದು ಸಿಎಂ ಡಿ ಕೆ ಶಿವಕುಮಾರ್ ತಿಳಿಸಿದರು.

# ಫ್ರಾನ್ಸ್ ಶಿಕ್ಷಣ ಸಚಿವರಿಗೆ 'ಬಿದ್ರಿವೇರ್' ಉಡುಗೊರೆ



● ವಿಕ್ರಮ ವಾಹಿನಿ । ನವದೆಹಲಿ

ಫ್ರಾನ್ಸ್ ಶಿಕ್ಷಣ ಸಚಿವರಿಗೆ ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ ಜೋಶಿ ಅವರು ಕರ್ನಾಟಕದ ವಿಶಿಷ್ಟ 'ಬಿದ್ರಿವೇರ್' ಅನ್ನು ನೆನಪಿನ ಕಾಣಿಕೆಯಾಗಿ ನೀಡಿ ಕರುನಾಡಿನ ಬಿದ್ರಿ ಕಲೆಯ ಹಿರಿಮೆ ಹೆಚ್ಚಿಸಿದ್ದಾರೆ.

ದೆಹಲಿಯಲ್ಲಿ ಸೋಮವಾರ ತಮ್ಮನ್ನು ಭೇಟಿ ಮಾಡಿದ ಫ್ರಾನ್ಸ್ ದೇಶದ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಸಚಿವ ಫಿಲಿಪ್ ಬ್ಯಾಪ್ಟಿಸ್ಟ್ ಅವರನ್ನು ಆದರದಿಂದ ಸ್ವಾಗತಿಸಿದ ಜೋಶಿ ಅವರು, ಕೊನೆಗೆ ನೆನಪಿನ ಕಾಣಿಕೆಯಾಗಿ 'ಬಿದ್ರಿ ವೇರ್' ಕಲಾಕೃತಿ ನೀಡಿ ಶುಭ ಕೋರಿದರು.

ಫ್ರಾನ್ಸ್ ಶಿಕ್ಷಣ ಸಚಿವರಿಗೆ ಕರ್ನಾಟಕದ ಸಂಪ್ರದಾಯಿಕ ಈ 'ಬಿದ್ರಿವೇರ್' ಕಲೆ, ಕಲಾಕೃತಿ ವೈಶಿಷ್ಟ್ಯತೆ ಕುರಿತು ವಿಶ್ಲೇಷಣೆ ನೀಡಿ ಗಮನ ಸೆಳೆದರು. 'ಬಿದ್ರಿ ವೇರ್' ಗೆ 500 ವರ್ಷಗಳ ಸುದೀರ್ಘ ಇತಿಹಾಸವಿದ್ದು, ವಿಶಿಷ್ಠ ಕಲೆ, ಸಂಸ್ಕೃತಿಗೆ ಹೆಸರಾದ ನಮ್ಮ ಕರ್ನಾಟಕದ ಬೀದರ್‌ನ ಅಪರೂಪದ ಕಲಾಕೃತಿಯಾಗಿದೆ ಎನ್ನುತ್ತಲೇ ಫ್ರಾನ್ಸ್ ಶಿಕ್ಷಣ ಸಚಿವರು ಅಭಿಮಾನ ತೋರಿದರು.

ಕರ್ನಾಟಕದ ಸಾಂಸ್ಕೃತಿಕ ಪರಂಪರೆಯನ್ನು ಅಂತರರಾಷ್ಟ್ರೀಯ ಮಟ್ಟದಲ್ಲಿ ಪರಿಚಯಿಸುವ ಉದ್ದೇಶದಿಂದ ಬಿದ್ರಿ ಕಲಾಕೃತಿಯನ್ನು ನೆನಪಿನ ಕಾಣಿಕೆಯಾಗಿ ನೀಡಲಾಗಿದೆ. ಈ ಮೂಲಕ ರಾಜ್ಯದ ಸಾಂಪ್ರದಾಯಿಕ ಕಲೆ, ಕರಕುಶಲ ಕೌಶಲ್ಯ ಹಾಗೂ ಸಾಂಸ್ಕೃತಿಕ ವೈವಿಧ್ಯತೆಯನ್ನು ವಿದೇಶಿ ಗಣ್ಯರಿಗೆ ಪರಿಚಯಿಸುವ ಪ್ರಯತ್ನವೂ ನಡೆದಿದೆ.

## ಆಹಾರ ಕಿಟ್ ವಿತರಣೆ ವಿಳಂಬ: ಉದ್ಯೋಗ ಅರಸಿ ಆದಿವಾಸಿಗಳ ವಲಸೆ

● ವಿಕ್ರಮ ವಾಹಿನಿ । ಮೈಸೂರು

ಆಹಾರ ಕಿಟ್‌ಗಳ ವಿತರಣೆ ವಿಳಂಬ, ಬರ ಪರಿಸ್ಥಿತಿ ಹಾಗೂ ಉದ್ಯೋಗಾವಕಾಶಗಳ ಕೊರತೆಯಿಂದಾಗಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಹಲವು ಆದಿವಾಸಿ ಕುಟುಂಬಗಳು ಜೀವನೋಪಾಯಕ್ಕಾಗಿ ಬೆಂಗಳೂರು, ಮಂಗಳೂರು ಹಾಗೂ ನೆರೆಯ ಕೇರಳಕ್ಕೆ ವಲಸೆ ಹೋಗುತ್ತಿವೆ.

ಎರಡೂ ಜಿಲ್ಲೆಗಳಲ್ಲಿ 21 ಸಾವಿರಕ್ಕೂ ಹೆಚ್ಚು ಬುಡಕಟ್ಟು ಕುಟುಂಬಗಳಿದ್ದು, ಕಳೆದ ಎಂಟು ತಿಂಗಳಿಂದ ಆಹಾರ ಕಿಟ್‌ಗಳು ವಿತರಣೆಯಾಗಿಲ್ಲ. ಟೆಂಡರ್ ಮತ್ತು ಖರೀದಿ ಪ್ರಕ್ರಿಯೆ ಪೂರ್ಣಗೊಳ್ಳದಿರುವುದೇ ವಿಳಂಬಕ್ಕೆ ಕಾರಣ ಎನ್ನಲಾಗಿದೆ. ರಾಜ್ಯದ ಒಂಬತ್ತು ಜಿಲ್ಲೆಗಳ ಅರಣ್ಯ ಹಾಗೂ ಅರಣ್ಯದಂಚಿನ ಪ್ರದೇಶಗಳಲ್ಲಿ ವಾಸಿಸುವ 51 ಸಾವಿರಕ್ಕೂ ಹೆಚ್ಚು ಆದಿವಾಸಿ ಕುಟುಂಬಗಳಿಗೆ ಈ ಯೋಜನೆಯಡಿ ಕಿಟ್ ವಿತರಿಸಲಾಗುತ್ತಿದೆ.


ಪ್ರತಿ ಕಿಟ್‌ನಲ್ಲಿ 8 ಕೆಜಿ ಅಕ್ಕಿ, ಬೇಳೆ, ರಾಗಿ, ತುಪ್ಪ, ಎರಡು ಲೀಟರ್ ಅಡುಗೆ ಎಣ್ಣೆ, ಶೇಂಗಾ ಸೇರಿದಂತೆ ಅಗತ್ಯ ಆಹಾರ ಪದಾರ್ಥಗಳನ್ನು ನೀಡಲಾಗುತ್ತದೆ. ಹಲವು ಕುಟುಂಬಗಳು ಈ ಕಿಟ್‌ಗಳನ್ನೇ ಪೌಷ್ಟಿಕ ಆಹಾರದ ಪ್ರಮುಖ ಆಧಾರವಾಗಿ ಅವಲಂಬಿಸಿರುವುದರಿಂದ, ವಿತರಣೆ ವಿಳಂಬವು ಸಂಕಷ್ಟಕ್ಕೆ ಕಾರಣವಾಗಿದೆ. ತಕ್ಷಣ ಕಿಟ್ ವಿತರಣೆ ಪುನರಾರಂಭಿಸಬೇಕು ಎಂಬ ಒತ್ತಾಯವೂ ಕೇಳಿಬಂದಿದೆ.

ಅಕ್ಟೋಬರ್ ಮೊದಲ ವಾರದಲ್ಲಿ ವಿತರಣೆ: ಟೆಂಡರ್ ಹಾಗೂ ಖರೀದಿ ಪ್ರಕ್ರಿಯೆ ಪೂರ್ಣಗೊಂಡಿದ್ದು, ಗುರುತಿಸಲಾದ ಎಲ್ಲ ಫಲಾನುಭವಿ ಕುಟುಂಬಗಳಿಗೆ ಅಕ್ಟೋಬರ್ ಮೊದಲ ವಾರದೊಳಗೆ ಆಹಾರ ಕಿಟ್ ವಿತರಿಸಲಾಗುವುದು ಎಂದು ಚಾಮರಾಜನಗರ ಜಿಲ್ಲಾ ಬುಡಕಟ್ಟು ಕಲ್ಯಾಣಾಧಿಕಾರಿ ಬಿಂದಿಯಾ ತಿಳಿಸಿದ್ದಾರೆ.

# 84 ಕ್ಷೇತ್ರಗಳಲ್ಲಿ 84 ದಿನಗಳ ಪಾದಯಾತ್ರೆ: ಬಿ.ಕೆ.ಹರಿಪ್ರಸಾದ್

● ವಿಕ್ರಮ ವಾಹಿನಿ । ಬೆಂಗಳೂರು

ರಾಹುಲ್ ಗಾಂಧಿ ಅವರು ನಡೆಸಿದ್ದ ಭಾರತ್ ಜೋಡೋ ಯಾತ್ರೆಗೆ ಅನುಗುಣವಾಗಿ ಇದೇ ಸೆ.30ರಂದು ಭಾರತ ಜೋಡೋ ಯಾತ್ರೆ 2.0 ಅನ್ನು ರಾಜ್ಯದಲ್ಲಿ ಹಮ್ಮಿಕೊಳ್ಳಲಾಗಿದೆ. ರಾಹುಲ್ ಗಾಂಧಿ ಅವರು ಮಾಡಿದ ಭಾರತ್ ಜೋಡೋ ಯಾತ್ರೆಯ 11 ಜಿಲ್ಲೆಗಳನ್ನು ಹೊರತುಪಡಿಸಿ ಉಳಿದ 29 ಜಿಲ್ಲೆಗಳಲ್ಲಿ ಈ ಯಾತ್ರೆ ಮಾಡಲು ಉದ್ದೇಶಿಸಲಾಗಿದೆ. ಮಧ್ಯಾಹ್ನ 1ರಿಂದ ಸಂಜೆ ಸಾರ್ವಜನಿಕ ಸಭೆ ಮಾಡಲಿದ್ದು, ಕಾಂಗ್ರೆಸ್ ಪಕ್ಷ ಸೋತಿರುವ 84 ಕ್ಷೇತ್ರಗಳಲ್ಲಿ ನಾವು ಈ ಯಾತ್ರೆ ಮಾಡಲು ತೀರ್ಮಾನಿಸಿದ್ದೇವೆ ಎಂದು ಕೆಪಿಸಿಸಿ ರಾಜ್ಯಾಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಹೇಳಿದರು.



ಇಂದಿರಾಗಾಂಧಿ ಭವನದಲ್ಲಿ ಮಾಧ್ಯಮಗೋಷ್ಠಿ ನಡೆಸಿದ ಅವರು, ರಾಹುಲ್ ಗಾಂಧಿ ಅವರು 2022ರ ಸೆ.7ರಂದು ಕನ್ಯಾಕುಮಾರಿಯಲ್ಲಿ ಭಾರತ ಜೋಡೋ ಪಾದಯಾತ್ರೆ ಆರಂಭಿಸಿದ್ದರು. ನಂತರ ಕರ್ನಾಟಕದಲ್ಲಿ ಸೆ.30ರಂದು ಗುಂಡ್ಲುಪೇಟೆಯಲ್ಲಿ ಯಾತ್ರೆ ಆರಂಭಿಸಿದ್ದರು. ಅಕ್ಟೋಬರ್ 21ರವರೆಗೆ 11 ಜಿಲ್ಲೆಗಳಲ್ಲಿ 600 ಕಿ.ಮೀ ಪಾದಯಾತ್ರೆ ಮಾಡಿ, ಜನಸಾಮಾನ್ಯರನ್ನು ಸಂಪರ್ಕಿಸಿ ಅವರ ಕಷ್ಟ ಆಲಿಸಿದರು. ಮಹಾತ್ಮಾ ಗಾಂಧಿ ಅವರ ಪಾದಯಾತ್ರೆ ಬಳಿಕ ಸುದೀರ್ಘ ಪಾದಯಾತ್ರೆ ನಡೆಸಿದ್ದು ರಾಹುಲ್ ಗಾಂಧಿ ಅವರ ಭಾರತ ಜೋಡೋ ಯಾತ್ರೆ. "ಬಿಜೆಪಿ ರಾಜ್ಯಾಧ್ಯಕ್ಷರ ಕ್ಷೇತ್ರದಿಂದ ಬಿಜೆಪಿಯ ನ್ಯೂನ್ಯತೆ ತಿಳಿಸಲು ಹಾಗೂ ಅಜ್ಞಾನೇಶ್ ಕುಮಾರ್ ಅವರು ಸಂವಿಧಾನಿಕ ಸಂಸ್ಥೆಯಾಗಿರುವ ಚುನಾವಣಾ ಆಯೋಗಕ್ಕೆ ಮಾಡುತ್ತಿರುವ ಧಕ್ಕೆ ಬಗ್ಗೆ ಜನಜಾಗೃತಿ ಮೂಡಿಸಲಾಗುತ್ತದೆ ಎಂದರು.

ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲ್ಲೂಕಿನಿಂದ ಯಾತ್ರೆ ಆರಂಭಿಸುತ್ತಿದ್ದು, ಸಚಿವರಾದ ಮಧುಬಂಗಾರಪ್ಪ, ರುದ್ರಪ್ಪ ಲಮಾಣಿ, ಜಮೀರ್ ಅಹ್ಮದ್ ಖಾನ್, ಬಿ ಎಲ್ ಶಂಕರ್ ಸೇರಿದಂತೆ ಪ್ರಮುಖ ನಾಯಕರು, ಜಿಲ್ಲೆಯ ಧುರೀಣರು ಪಾದಯಾತ್ರೆಯಲ್ಲಿ ಭಾಗವಹಿಸಲಿದ್ದಾರೆ. ನಂತರ ಅ. 4-5 ರಿಂದ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಹಮ್ಮಿಕೊಳ್ಳಲಾಗುತ್ತದೆ ಎಂದರು.

ಮಾಧ್ಯಮಗೋಷ್ಠಿಯಲ್ಲಿ ಮಾಜಿ ಎಂಎಲ್ ಸಿ ನಾರಾಯಣಸ್ವಾಮಿ ಹಾಗೂ ಕೆಪಿಸಿಸಿ ಮಾಧ್ಯಮ ಹಾಗೂ ಸಂವಹನ ವಿಭಾಗದ ಮುಖ್ಯಸ್ಥರಾದ ರಮೇಶ್ ಬಾಬು ಅವರು ಉಪಸ್ಥಿತರಿದ್ದರು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ಸಾಮಾಜಿಕ ನ್ಯಾಯ ನೀಡಿದ ಸಮಾಜವೇ ಇಂದು ನ್ಯಾಯ ಕೇಳುವಂತಾಗಿದೆ: ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ಇಡೀ ಜಗತ್ತಿನಲ್ಲಿ ಮೊಟ್ಟಮೊದಲ ಬಾರಿಗೆ ಸಾಮಾಜಿಕ ನ್ಯಾಯದ ಸಂದೇಶ ಸಾರಿದ ವೀರಶೈವ-ಲಿಂಗಾಯತ ಸಮಾಜವೇ ಇಂದು ಸಾಮಾಜಿಕ ನ್ಯಾಯಕ್ಕಾಗಿ ಬೇಡಿಕೆ ಇಡುವಂತಾಗಿರುವುದು ವಿಪರ್ಯಾಸ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹಾಗೂ ಅಖಿಲ ಭಾರತ ವೀರಶೈವ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷ ಈಶ್ವರ ಬಿ. ಖಂಡ್ರೆ ಹೇಳಿದರು.




ನಗರದ ಸುಜ್ಞಾನ ಮಂದಿರದಲ್ಲಿ ನಡೆದ ವೀರಶೈವ ಲಿಂಗಾಯತ ಧರ್ಮ ಸಂರಕ್ಷಣಾ ಸಮ್ಮೇಳನದಲ್ಲಿ ಮಾತನಾಡಿದ ಅವರು, ಸಮಾಜದ ಎಲ್ಲ ವರ್ಗಗಳಲ್ಲಿರುವಂತೆ ವೀರಶೈವ-ಲಿಂಗಾಯತ ಸಮುದಾಯದಲ್ಲಿಯೂ ಬಡವರು, ಹಿಂದುಳಿದವರು ಇದ್ದಾರೆ. ಅವರಿಗೆ ಸೂಕ್ತ ಸಾಮಾಜಿಕ ನ್ಯಾಯ ದೊರೆಯಬೇಕು ಎಂದರು.

12ನೇ ಶತಮಾನದಲ್ಲಿ ಬಸವಾದಿ ಶರಣರು ಸಮಸಮಾಜ ನಿರ್ಮಾಣಕ್ಕಾಗಿ ಹೋರಾಡಿದರು. ಜಾತಿ-ಮತ ಭೇದವಿಲ್ಲದೆ ಎಲ್ಲರಿಗೂ ಆಶ್ರಯ, ಅನ್ನ ಮತ್ತು ಅಕ್ಷರ ನೀಡುವಲ್ಲಿ ವೀರಶೈವ ಮಠಮಾನ್ಯಗಳು ಮಹತ್ವದ ಕೊಡುಗೆ ನೀಡಿವೆ. ಆದರೆ ಇಂದು ಅದೇ ಸಮಾಜ ಸಾಮಾಜಿಕ ನ್ಯಾಯಕ್ಕಾಗಿ ಕೇಳುವ ಪರಿಸ್ಥಿತಿ ನಿರ್ಮಾಣವಾಗಿರುವುದು ದುರದೃಷ್ಟಕರ ಎಂದು ಹೇಳಿದರು.

ಸ್ವಾರ್ಥಕ್ಕಾಗಿ ಜಾತಿ-ಜಾತಿಗಳ ನಡುವೆ ವೈಷಮ್ಯ ಸೃಷ್ಟಿಸುವ ಪ್ರಯತ್ನಗಳು ನಡೆಯುತ್ತಿರುವ ಸಂದರ್ಭದಲ್ಲಿ ಧರ್ಮ ಸಂರಕ್ಷಣಾ ಸಮ್ಮೇಳನದಂತಹ ಕಾರ್ಯಕ್ರಮಗಳು ಮಹತ್ವ ಪಡೆದಿವೆ. ಹಸಿದವರಿಗೆ ಅನ್ನ ನೀಡುವುದು, ಬಾಯಾರಿದವರಿಗೆ ನೀರು ನೀಡುವುದು, ಸಂಕಷ್ಟದಲ್ಲಿರುವವರ ಕೈಹಿಡಿಯುವುದು ಹಾಗೂ ಅಜ್ಞಾನಿಗಳಿಗೆ ಜ್ಞಾನದ ಬೆಳಕು ನೀಡುವುದೇ ನಿಜವಾದ ಧರ್ಮ ಎಂದು ಖಂಡ್ರೆ ಪ್ರತಿಪಾದಿಸಿದರು.

ದೇಶ-ದೇಶಗಳ ನಡುವೆ ಸಂಘರ್ಷ, ಯುದ್ಧ ಹಾಗೂ ವೈಮಾನಿಕ ದಾಳಿಗಳು ನಡೆಯುತ್ತಿದ್ದು, ಸೈನಿಕರ ಜತೆಗೆ ಮುಗ್ಧ ಜನರೂ ಪ್ರಾಣ ಕಳೆದುಕೊಳ್ಳುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಸಾವಿರಾರು ವರ್ಷಗಳ ಹಿಂದೆಯೇ ನಮ್ಮ ಗುರುಪರಂಪರೆ ಮಾನವ ಧರ್ಮ, ಮಾನವೀಯತೆ ಮತ್ತು ವಿಶ್ವಶಾಂತಿಯ ಸಂದೇಶ ಸಾರಿರುವುದನ್ನು ನೆನಪಿಸಿಕೊಳ್ಳಬೇಕು. ಮಾನವ ಧರ್ಮದ ಮೂಲಕವೇ ವಿಶ್ವಶಾಂತಿ ಸಾಧ್ಯ ಎಂಬ ಸಂದೇಶವನ್ನು ನಮ್ಮ ಮಹಾಮಹಿಮರು ನೀಡಿದ್ದಾರೆ ಎಂದರು.

ಪಂಚಾಚಾರ್ಯರು ಕನ್ಯಾಕುಮಾರಿಯಿಂದ ಆಸೇತು ಹಿಮಾಚಲದವರೆಗೆ ಸಂಚರಿಸಿ ಮಾನವಧರ್ಮದ ಸಂದೇಶ ಸಾರಿದ್ದಾರೆ. ಇದಕ್ಕೆ ಸಾಕ್ಷಿಯಾಗಿ ಉತ್ತರಾಖಂಡದ ಕೇದಾರನಾಥದಲ್ಲಿ ಕೇದಾರ ವೈರಾಗ್ಯ ಸಿಂಹಾಸನ ಪೀಠ ಇಂದಿಗೂ ಅಸ್ತಿತ್ವದಲ್ಲಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಲ್ಲೂ ಅಚಲ ಭಕ್ತಿ ಮತ್ತು ನಂಬಿಕೆ ಇದೆ. ಅವರು ಬಾಳೆಹೊನ್ನೂರು ಮಠದೊಂದಿಗೆ ನಂಟು ಹೊಂದಿದ್ದು, ನೊಣವಿನಕೆರೆ ಅಜ್ಜಯ್ಯ ಅವರನ್ನು ಆರಾಧ್ಯದೈವವಾಗಿ ಕಾಣುತ್ತಾರೆ. ವೀರ ಗಂಗಾಧರ ಅಜ್ಜಯ್ಯ ಅವರ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿರುವುದು ಅವರ ಜಾತ್ಯತೀತ ಮನೋಭಾವ ಹಾಗೂ ಎಲ್ಲ ಧರ್ಮ, ಜಾತಿಗಳ ಮಹನೀಯರಿಗೆ ನೀಡುವ ಗೌರವದ ಸಂಕೇತವಾಗಿದೆ ಎಂದು ಖಂಡ್ರೆ ಹೇಳಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ತೀವ್ರವಾಗಿದ್ದು, ರೈತರು ಮಳೆಗಾಗಿ ಎದುರು ನೋಡುತ್ತಿದ್ದಾರೆ. ಧರ್ಮ ಸಮ್ಮೇಳನದಲ್ಲಿ ಸೇರಿರುವ ಶರಣ-ಶರಣೆಯರು ರಾಜ್ಯದಲ್ಲಿ ಉತ್ತಮ ಮಳೆ, ಸಮೃದ್ಧ ಬೆಳೆ ಹಾಗೂ ರೈತರ ಸಂಕಷ್ಟ ದೂರವಾಗಲಿ ಎಂದು ಪ್ರಾರ್ಥಿಸಬೇಕು. ಪಂಚಾಚಾರ್ಯ ಪೀಠಗಳ ಪ್ರತಿನಿಧಿಗಳು ರಾಜ್ಯಕ್ಕೆ ಒಳಿತಾಗಲಿ ಎಂದು ಆಶೀರ್ವದಿಸಬೇಕು ಎಂದು ಮನವಿ ಮಾಡಿದರು.

750 ಕೋಟಿ ವೆಚ್ಚದಲ್ಲಿ ಬೀದರ್‌ನಲ್ಲಿ ನಿರ್ಮಾಣವಾಗುತ್ತಿರುವ ಭವ್ಯ ಅನುಭವ ಮಂಟಪದ ಕಾಮಗಾರಿ ಭರದಿಂದ ಸಾಗುತ್ತಿದೆ. 770 ಅಮರ ಗಣಂಗಳ ಪ್ರತೀಕವಾಗಿ 770 ಕಂಬಗಳ ಮೇಲೆ ನಿರ್ಮಾಣವಾಗುತ್ತಿರುವ ಈ ಅನುಭವ ಮಂಟಪದ ಕಂಬಗಳಲ್ಲಿ ಅಮರ ಗಣಂಗಳ ವಚನಗಳನ್ನು ಕೆತ್ತಲಾಗುತ್ತಿದೆ. ಯೋಜನೆಗೆ ಹಿಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 280 ಕೋಟಿ ಬಿಡುಗಡೆ ಮಾಡಿದ್ದು, ಕಾಮಗಾರಿಯನ್ನು ಮುಂದಿನ ವರ್ಷದ ಅಂತ್ಯದೊಳಗೆ ಪೂರ್ಣಗೊಳಿಸಿ ಲೋಕಾರ್ಪಣೆ ಮಾಡುವುದು ಸರ್ಕಾರದ ಗುರಿಯಾಗಿದೆ. ಉಳಿದ ಕಾಮಗಾರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅಗತ್ಯ ಅನುದಾನ ಒದಗಿಸಬೇಕು ಎಂದು ಖಂಡ್ರೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಜ್ಜಯನಿ ಪೀಠದ ಶ್ರೀ ಸಿದ್ದಲಿಂಗರಾಜ ದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು, ಹಿಮವತ್ ಕೇದಾರ ಪೀಠದ ಶ್ರೀ ಭೀಮಾಶಂಕರಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು, ಶ್ರೀಶೈಲ ಪೀಠದ ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು, ಕಾಶಿ ಪೀಠದ ಶ್ರೀ ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಸೇರಿದಂತೆ ವಿವಿಧ ಮಠಗಳ ಪೀಠಾಧಿಪತಿಗಳು, ಸಚಿವರಾದ ವಿಜಯಾನಂದ ಕಾಶಪ್ಪನವರ್, ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ವೀಣಾ ಕಾಶಪ್ಪನವರ ಮತ್ತಿತರರು ಉಪಸ್ಥಿತರಿದ್ದರು.

## ಆನೆ ದಾಳಿಗೆ ಬಲಿಯಾದ ನಾಗರಾಜ್ ಕುಟುಂಬಕ್ಕೆ ರೂ 20 ಲಕ್ಷ ಪರಿಹಾರ

● ವಿಕ್ರಮ ವಾಹಿನಿ । ಬೆಂಗಳೂರು

ಆನೆ ದಾಳಿಗೆ ಬಲಿಯಾದ ನಾಗರಾಜ್ ಅವರ ಕುಟುಂಬಸ್ಥರಿಗೆ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಸಾಂತ್ವನ ಹೇಳಿ, ಸರ್ಕಾರದಿಂದ ರೂ 20 ಲಕ್ಷ ಪರಿಹಾರ ನೀಡುವುದಾಗಿ ಘೋಷಿಸಿದರು.

ಆರ್.ಆರ್.ನಗರ ಆಸ್ಪತ್ರೆಗೆ ಭೇಟಿ ನೀಡಿದ ಸಚಿವರು, ನಾಗರಾಜ್ ಅವರ ಕುಟುಂಬಸ್ಥರಿಗೆ ಧೈರ್ಯ ತುಂಬಿದರು. ಬನ್ನೇರುಘಟ್ಟ ಅರಣ್ಯ ಪ್ರದೇಶದಿಂದ ಆನೆಗಳು ಬಿಎಂ ಕಾವಲು ಭಾಗದಲ್ಲಿ ಸಂಚರಿಸುತ್ತಿದ್ದು, ರಸ್ತೆ ನಿರ್ಮಾಣದ ಬಳಿಕ ಅವುಗಳ ಸಂಚಾರದ ಮಾರ್ಗದಲ್ಲಿ ಬದಲಾವಣೆಯಾಗಿದೆ. ಬೆಳಗ್ಗೆ ವಾಯುವಿಹಾರಕ್ಕೆ ತೆರಳಿದ್ದ ನಾಗರಾಜ್ ಮೇಲೆ ಆನೆ ದಾಳಿ ನಡೆಸಿ ಮೃತಪಟ್ಟಿದ್ದಾರೆ ಎಂದು ತಿಳಿಸಿದರು.

ಆನೆಗಳು ಜನವಸತಿ ಪ್ರದೇಶಕ್ಕೆ ಬರುವ ನಿರೀಕ್ಷೆ ಇರಲಿಲ್ಲ. ಘಟನೆ ಬಳಿಕ ಅರಣ್ಯ ಇಲಾಖೆ ಸಿಬ್ಬಂದಿ ರಾತ್ರಿ ಒಂದು ಗಂಟೆಯವರೆಗೂ ಕಾರ್ಯಾಚರಣೆ ನಡೆಸಿದ್ದಾರೆ. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಆನೆಗಳ ಚಲನವಲನದ ಮೇಲೆ ವಿಶೇಷ ನಿಗಾ ವಹಿಸಲಾಗುವುದು ಎಂದರು.

ರಾಮನಗರ, ಬನ್ನೇರುಘಟ್ಟ ಹಾಗೂ ಬೆಂಗಳೂರು ನಗರ ಅರಣ್ಯ ವಿಭಾಗಗಳಿಂದ ಮೂರು ವಿಶೇಷ ತಂಡಗಳನ್ನು ರಚಿಸಿ ಆನೆ ಪತ್ತೆ ಹಾಗೂ ಸೆರೆ ಕಾರ್ಯಾಚರಣೆ ನಡೆಸಲಾಗುತ್ತಿದೆ. ಡ್ರೋನ್‌ಗಳ ಮೂಲಕವೂ ನಿಗಾ ವಹಿಸಲು ಯೋಜಿಸಲಾಗಿದೆ. ಕೊಡಗಿನ ದುಬಾರೆ ಆನೆ ಶಿಬಿರದಿಂದ ನಾಲ್ಕು ತರಬೇತಿ ಪಡೆದ ಆನೆಗಳನ್ನು ಕರೆತರಲಾಗುತ್ತಿದ್ದು, ಒಟ್ಟು 100 ಸಿಬ್ಬಂದಿಯನ್ನು ಕಾರ್ಯಾಚರಣೆಗೆ ನಿಯೋಜಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಸದ್ಯ ಒಂಟಿ ಸಲಗ ಬಿಎಂ ಕಾವಲು ಪ್ರದೇಶದಲ್ಲಿರುವುದು ಪತ್ತೆಯಾಗಿದ್ದು, ಅದು ಜನವಸತಿ ಪ್ರದೇಶದತ್ತ ತೆರಳದಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ಆನೆ ಇರುವ ಸ್ಥಳವನ್ನು ನಿಖರವಾಗಿ ಗುರುತಿಸಿ ಸೆರೆ ಹಿಡಿಯುವ ಕಾರ್ಯಾಚರಣೆ ಮುಂದುವರಿದಿದೆ. ಕಾರ್ಯಾಚರಣೆ ನಡೆಯುವ ಅವಧಿಯಲ್ಲಿ ಸಾರ್ವಜನಿಕರು ಹೊರಗೆ ಬರದಂತೆ ಸೂಚಿಸಲಾಗಿದೆ ಎಂದು ಹೇಳಿದರು.

ಮೃತರ ಪ್ರಾಣವನ್ನು ಮರಳಿ ತರಲು ಸಾಧ್ಯವಿಲ್ಲ. ಮಾನವೀಯತೆ ಹಾಗೂ ಸರ್ಕಾರದ ನಿಯಅಮದಂತೆ ಕುಟುಂಬಕ್ಕೆ ಪರಿಹಾರ ನೀಡಲಾಗುತ್ತಿದೆ. ಅರಣ್ಯ ಇಲಾಖೆ ಸಿಬ್ಬಂದಿ ನಿರಂತರ ಎಚ್ಚರಿಕೆ ನೀಡುತ್ತಿದ್ದು, ಮುಂದಿನ ದಿನಗಳಲ್ಲಿ ಇಂತಹ ಘಟನೆಗಳನ್ನು ತಡೆಯಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ರಾಮಲಿಂಗಾರೆಡ್ಡಿ ಹೇಳಿದರು.

## ಮಲೆನಾಡಲ್ಲೂ ಜಲಕ್ಷಾಮದ ಭೀತಿ; ತುಂಗಾ ಹರಿವು ಕ್ಷೀಣ

● ವಿಕ್ರಮ ವಾಹಿನಿ । ಚಿಕ್ಕಮಗಳೂರು

ಪಶ್ಚಿಮ ಘಟ್ಟದಲ್ಲಿ ವಾಡಿಕೆ ಮಳೆಯಾಗದ ಹಿನ್ನೆಲೆಯಲ್ಲಿ ಮಲೆನಾಡಿನ ಜೀವನಾಡಿ ತುಂಗಾ ನದಿಯ ಹರಿವು ಗಣನೀಯವಾಗಿ ಕ್ಷೀಣಿಸಿದ್ದು, ಜಲಕ್ಷಾಮದ ಆತಂಕ ಎದುರಾಗಿದೆ. ನದಿಯನ್ನೇ ಅವಲಂಬಿಸಿರುವ ಶೃಂಗೇರಿ, ಎನ್.ಆರ್.ಪುರ ಹಾಗೂ ಕೊಪ್ಪ ಭಾಗಗಳಲ್ಲಿ ಕುಡಿಯುವ ನೀರು ಮತ್ತು ಕೃಷಿಗೆ ಮುಂದಿನ ದಿನಗಳಲ್ಲಿ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ. ಪ್ರತಿ ವರ್ಷ ಮಳೆಗಾಲದಲ್ಲಿ ಮೈದುಂಬಿ ಹರಿಯುತ್ತಿದ್ದ ತುಂಗಾ ನದಿಯ ನೀರಿನ ಮಟ್ಟ ಈ ಬಾರಿ ಗಣನೀಯವಾಗಿ ಕುಸಿದಿದೆ. ಮಳೆ ಕೊರತೆ ಮುಂದುವರಿದರೆ ಜಲಮೂಲಗಳು ಮತ್ತಷ್ಟು ಬರಿದಾಗುವ ಸಾಧ್ಯತೆಯಿದ್ದು, ರೈತರ ಕೃಷಿ ಚಟುವಟಿಕೆಗಳ ಮೇಲೂ ಪರಿಣಾಮ ಬೀರುವ ಆತಂಕವಿದೆ.

ತುಂಗಾ ನದಿಯನ್ನು ಅವಲಂಬಿಸಿರುವ ಲಕ್ಷಾಂತರ ಜನರ ಜತೆಗೆ ಶೃಂಗೇರಿ ಶಾರದಾ ಪೀಠಕ್ಕೆ ಆಗಮಿಸುವ ಭಕ್ತರು ಹಾಗೂ ಪ್ರವಾಸಿಗರಿಗೂ ನೀರಿನ ಕೊರತೆಯ ಬಿಸಿ ತಟ್ಟುವ ಸಾಧ್ಯತೆ ಇದೆ.

## ಡಾ. ಕೆ.ಜಿ. ಲಕ್ಷ್ಮೀನಾರಾಯಣಪ್ಪರಿಗೆ 'ಸಂಪ್ರಭ' ಗೌರವ

● ವಿಕ್ರಮ ವಾಹಿನಿ । ಬೆಂಗಳೂರು

ಅಮೆರಿಕದಲ್ಲಿ ಪಿಎಚ್.ಡಿ. ಸೇರಿದಂತೆ ಹಲವು ಡಾಕ್ಟರೇಟ್ ಪದವಿಗಳನ್ನು ಪಡೆದು ಶೈಕ್ಷಣಿಕ ಕ್ಷೇತ್ರದಲ್ಲಿ ಸಾಧನೆ ಮಾಡಿದ ಕೇಂದ್ರ ತೆರಿಗೆ ಮತ್ತು ಕಸ್ಟಮ್ಸ್ ಇಲಾಖೆಯ ನಿವೃತ್ತ ಅಧಿಕಾರಿ ಡಾ. ಕೆ.ಜಿ. ಲಕ್ಷ್ಮೀನಾರಾಯಣಪ್ಪ ಅವರನ್ನು 'ಸಂಪ್ರಭ' ಕೇಂದ್ರ ತೆರಿಗೆ ಮತ್ತು ಕಸ್ಟಮ್ಸ್ ಸಾಂಸ್ಕೃತಿಕ ಸಂಘದ ವತಿಯಿಂದ ಅಭಿನಂದಿಸಿ ಗೌರವಿಸಲಾಯಿತು.

ಸೆ. 26ರಂದು ಶನಿವಾರ ರಾಷ್ಟ್ರೀಯ ಕಸ್ಟಮ್ಸ್, ಪರೋಕ್ಷ ತೆರಿಗೆಗಳು ಮತ್ತು ಮಾದಕ ದ್ರವ್ಯಗಳ ಅಕಾಡೆಮಿ (NACIN) ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಡಾ. ಲಕ್ಷ್ಮೀನಾರಾಯಣಪ್ಪ ಅವರ ಶೈಕ್ಷಣಿಕ ಸಾಧನೆ ಹಾಗೂ ಜ್ಞಾನ ಕ್ಷೇತ್ರಕ್ಕೆ ನೀಡಿದ ಕೊಡುಗೆಯನ್ನು ಸ್ಮರಿಸಿ ಸನ್ಮಾನಿಸಲಾಯಿತು.

ಸಮಾರಂಭದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಶ್ರೀ ನಾರಾಯಣಸ್ವಾಮಿ ವಹಿಸಿದ್ದರು. ಸಂಘದ ಪೋಷಕರು ಹಾಗೂ ಕೇಂದ್ರ ಪರೋಕ್ಷ ತೆರಿಗೆಗಳು ಮತ್ತು ಕಸ್ಟಮ್ಸ್ ಮಂಡಳಿಯ ಮಾಜಿ ಸದಸ್ಯ ಶ್ರೀ ಡಿ.ಪಿ. ನಾಗೇಂದ್ರ ಕುಮಾರ್, ಶ್ರೀ ಬಿ.ವಿ. ಕುಮಾರ್ ಹಾಗೂ ಮುಖ್ಯ ಅತಿಥಿಯಾಗಿ ಶ್ರೀ ತುಪ್ಪುಲು ವೆಂಕಟೇಶ್ ಪಾಲ್ಗೊಂಡಿದ್ದರು.



ಇದೇ ಸಂದರ್ಭದಲ್ಲಿ ಇಲಾಖೆಯ ಉನ್ನತ ಅಧಿಕಾರಿಗಳು, ನಿವೃತ್ತ ಅಧಿಕಾರಿಗಳು ಹಾಗೂ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದು, ಡಾ. ಲಕ್ಷ್ಮೀನಾರಾಯಣಪ್ಪ ಅವರಿಗೆ ಶುಭಾಶಯಗಳನ್ನು ಸಲ್ಲಿಸಿದರು.

ಸರ್ಕಾರಿ ಸೇವೆಯ ಅನುಭವದೊಂದಿಗೆ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಕ್ಷೇತ್ರದಲ್ಲಿಯೂ ಸಾಧನೆ ಮಾಡಿರುವುದು ಅಭಿನಂದನಾರ್ಹ ಎಂದು ಗಣ್ಯರು ಅಭಿಪ್ರಾಯಪಟ್ಟರು. ಜ್ಞಾನಾರ್ಜನೆಗೆ ವಯಸ್ಸು ಅಥವಾ ವೃತ್ತಿಯ ಮಿತಿಯಿಲ್ಲ ಎಂಬುದನ್ನು ಡಾ. ಲಕ್ಷ್ಮೀನಾರಾಯಣಪ್ಪ ಅವರ ಸಾಧನೆ ಸಾರುತ್ತದೆ ಎಂದು ಅವರು ಹೇಳಿದರು.

## ಬೆಂಗಳೂರಿನ ಅಭಿವೃದ್ಧಿಗೆ ರಕ್ಷಣಾ ಜಾಗ, ಅನುಮತಿಗೆ ಸಿಎಂ ಮನವಿ

● ವಿಕ್ರಮ ವಾಹಿನಿ । ನವದೆಹಲಿ

ಬೆಂಗಳೂರಿನ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ರಕ್ಷಣಾ ಇಲಾಖೆಯ ಜಮೀನು ಹಸ್ತಾಂತರಿಸುವುದು ಹಾಗೂ ಅಗತ್ಯ ಅನುಮತಿಗಳನ್ನು ನೀಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಗೆ ಮನವಿ ಸಲ್ಲಿಸಿದರು.

ದೆಹಲಿಯಲ್ಲಿ ರಾಜನಾಥ್ ಸಿಂಗ್ ಅವರನ್ನು ಭೇಟಿಯಾದ ಸಿಎಂ, ಇಬ್ಬಲೂರು ಫೈರಿಂಗ್ ರೇಂಜ್ ಬಳಕೆಯಾಗದೆ ಇರುವ ಸುಮಾರು 730 ಎಕರೆ ರಕ್ಷಣಾ ಜಮೀನನ್ನು ಉದ್ಯಾನವನ ಹಾಗೂ ಹಸಿರು ವಲಯ ಅಭಿವೃದ್ಧಿಗೆ ಬಳಸಲು ಅನುಮತಿ ನೀಡಬೇಕು ಎಂದು ಕೋರಿದರು. ಜಮೀನಿನ ಮಾಲೀಕತ್ವವನ್ನು ರಾಜ್ಯ ಸರ್ಕಾರ ಕೇಳುತ್ತಿಲ್ಲ ಎಂದು ಸ್ಪಷ್ಟಪಡಿಸಿದರು.

ಬೆಂಗಳೂರಿನ ರಕ್ಷಣಾ ಜಮೀನಿನಲ್ಲಿರುವ 10 ಅಧಿಸೂಚಿತ ಕೊಳಚೆ ಪ್ರದೇಶಗಳ ಅಭಿವೃದ್ಧಿಗೂ ಅನುಮತಿ ನೀಡಬೇಕು. ಪರ್ಯಾಯವಾಗಿ ಸೂಕ್ತ ಸರ್ಕಾರಿ ಜಮೀನು ಒದಗಿಸಲು ರಾಜ್ಯ ಸರ್ಕಾರ ಸಿದ್ಧವಿದ್ದು, ಮಳೆಗಾಲದಲ್ಲಿ ಜಲಾವೃತಗೊಳ್ಳುವ ಪ್ರದೇಶಗಳಲ್ಲಿ ತುರ್ತು ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು ಅವಕಾಶ ನೀಡಬೇಕು ಎಂದು ಮನವಿ ಮಾಡಿದರು.



ಸಿಎಂ ಡಿ ಕೆ ಶಿವಕುಮಾರ್ ಅವರು ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ದೆಹಲಿಯ ಅವರ ಅಧಿಕೃತ ನಿವಾಸದಲ್ಲಿ ಸೋಮವಾರ ಭೇಟಿ ಮಾಡಿ ರಾಜ್ಯದ ನಾನಾ ಬೇಡಿಕೆಗಳ ಬಗ್ಗೆ ಮನವಿ ಸಲ್ಲಿಸಿದರು.

ಹೆಚ್‌ಎಎಲ್ ವಿಮಾನ ನಿಲ್ದಾಣ ಹಾಗೂ ಯಲಹಂಕ ವಾಯುನೆಲೆ ಸುತ್ತಮುತ್ತ ಕಟ್ಟಡ ನಿರ್ಮಾಣಕ್ಕೆ ಇರುವ ನಿರ್ಬಂಧಗಳನ್ನು ಸಡಿಲಿಸಿ, ಕಡ್ಡಾಯ ನಿರಾಕ್ಷೇಪಣಾ ಪ್ರಮಾಣಪತ್ರದ ವ್ಯಾಪ್ತಿಯನ್ನು 20ರಿಂದ 15 ಕಿ.ಮೀ.ಗೆ ಇಳಿಸಬೇಕು ಎಂದು ಕೋರಿದರು.

ಅಗರ-ಈಜಿಪುರ-ಸರ್ಜಾಪುರ ರಸ್ತೆ ಸಂಪರ್ಕಕ್ಕಾಗಿ 13.709 ಎಕರೆ ರಕ್ಷಣಾ ಜಮೀನು ಹಸ್ತಾಂತರ ಪ್ರಕ್ರಿಯೆ ತ್ವರಿತಗೊಳಿಸುವಂತೆ ಮನವಿ ಮಾಡಿದರು. ಹೆಬ್ಬಾಳದಿಂದ ಸೆಂಟ್ರಲ್ ಸಿಲ್ಕ್ ಬೋರ್ಡ್‌ವರೆಗೆ ಉದ್ದೇಶಿಸಿರುವ ಅವಳಿ ಸುರಂಗ ಯೋಜನೆಗೆ ಅಗತ್ಯವಿರುವ ರಕ್ಷಣಾ ಜಮೀನಿನ ಲೈಸೆನ್ಸ್ ಶುಲ್ಕವನ್ನು ಶೇ.33ರಿಂದ ಶೇ.2ಕ್ಕೆ ಇಳಿಸಬೇಕು ಎಂದು ಆಗ್ರಹಿಸಿದರು.

ಬಳ್ಳಾರಿ ರಸ್ತೆಯಿಂದ ಸರೋವರ ಲೇಔಟ್‌ಗೆ ಸಂಪರ್ಕ ಕಲ್ಪಿಸುವ ಲಿಂಕ್ ರಸ್ತೆಗಾಗಿ 6.837 ಎಕರೆ ಹಾಗೂ ಮೇಕ್ರಿ ಸರ್ಕಲ್ ರಸ್ತೆ ಅಗಲೀಕರಣಕ್ಕೆ 0.775 ಎಕರೆ ರಕ್ಷಣಾ ಜಮೀನು ಹಸ್ತಾಂತರಿಸುವಂತೆ ಮನವಿ ಸಲ್ಲಿಸಿದರು. ಈ ಯೋಜನೆಗಳಿಗೆ ಅನುಮತಿ ದೊರೆತರೆ ನಗರದ ಸಂಚಾರ ದಟ್ಟಣೆ ಕಡಿಮೆ ಮಾಡಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

## ದಸರಾ ಕಂಬಳ ಕ್ರೀಡಾಕೂಟದ ಆನ್ಲೈನ್ ನೋಂದಣಿ ಆರಂಭ

● ವಿಕ್ರಮ ವಾಹಿನಿ । ಮೈಸೂರು

ಮೈಸೂರು ದಸರಾ 2026ರ ಸಾಂಸ್ಕೃತಿಕ ಹಾಗೂ ಕ್ರೀಡಾ ಸಂಭ್ರಮದ ಅಂಗವಾಗಿ ಇದೇ ಮೊದಲ ಬಾರಿಗೆ ಕರಾವಳಿಯ ಜಾನಪದ ಕ್ರೀಡೆಯಾದ ದಸರಾ ಕಂಬಳವನ್ನು ಅದ್ದೂರಿಯಾಗಿ ಆಯೋಜಿಸಲಾಗುತ್ತಿದೆ. ಈ ಐತಿಹಾಸಿಕ ಕ್ರೀಡಾಕೂಟದ ನೋಂದಣಿ ಪ್ರಕ್ರಿಯೆಯನ್ನು ಸುಲಭಗೊಳಿಸಲು ಆನ್ಲೈನ್ ಪೋರ್ಟಲ್ ಅನ್ನು ಅಧಿಕೃತವಾಗಿ ತೆರೆಯಲಾಗಿದೆ.

ಈ ಬಾರಿಯ ದಸರಾದ ಮುಖ್ಯ ಆಕರ್ಷಣೆಯಾಗಿ ಕಂಬಳವು ಮೈಸೂರಿನ ಸಾತಗಳ್ಳಿ ಹೊರವರ್ತುಲ ರಸ್ತೆಯಲ್ಲಿ (VTU) ನಡೆಯಲಿದೆ. ಈ ಸ್ಪರ್ಧೆಯಲ್ಲಿ ಭಾಗವಹಿಸಲು ಬಯಸುವ ಕಂಬಳದ ಕೋಣಗಳ ಮಾಲೀಕರು ಮತ್ತು ಓಡಿಸುವ ಜಾನಪದ ವೀರರು ವಿವಿಧ ಸ್ಪರ್ಧಾ ವಿಭಾಗಗಳ ಅಡಿಯಲ್ಲಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದು.

ಆಸಕ್ತರು ಹೆಚ್ಚಿನ ವಿವರಗಳಿಗಾಗಿ ಮತ್ತು ತಕ್ಷಣದ ನೋಂದಣಿಗಾಗಿ https://kambala.milieumedia.in ಜಾಲತಾಣಕ್ಕೆ ಭೇಟಿ ನೀಡಬಹುದು. ಅರ್ಜಿ ಹಾಗೂ ಪ್ರವೇಶಾತಿಗಳನ್ನು ಸಲ್ಲಿಸಲು ಸೆಪ್ಟೆಂಬರ್ 30 ಕೊನೆಯ ದಿನಾಂಕವಾಗಿದೆ. ಆಫ್ಲೈನ್ ಮೂಲಕ ಅರ್ಜಿ ಸಲ್ಲಿಸಲು ಬಯಸುವವರು ಭೌತಿಕ ಪ್ರತಿಯನ್ನು ಜಿಲ್ಲಾ ಪಂಚಾಯತ್ ಕಚೇರಿಯಿಂದ ಪಡೆದುಕೊಳ್ಳಬಹುದು ಎಂದು ಕಂಬಳ ಉಪ ಸಮಿತಿಯ ಕಾರ್ಯಾಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ (ಅಭಿವೃದ್ಧಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಆರ್‌ಟಿ ಅರಣ್ಯದಲ್ಲಿ 292 ಗಾಂಜಾ ಗಿಡ ಪತ್ತೆ

● ವಿಕ್ರಮ ವಾಹಿನಿ । ಚಾಮರಾಜನಗರ

ಹನೂರು ತಾಲೂಕಿನ ಬಿಳಿಗಿರಿ ರಂಗನಾಥಸ್ವಾಮಿ ಹುಲಿ ಸಂರಕ್ಷಿತ ಪ್ರದೇಶದ (ಬಿಆರ್‌ಟಿ) ಕೋಳಿಹಟ್ಟಿ ಅರಣ್ಯ ಪ್ರದೇಶದಲ್ಲಿ ಅಕ್ರಮವಾಗಿ ಬೆಳೆಯಲಾಗಿದ್ದ 292 ಗಾಂಜಾ ಗಿಡಗಳನ್ನು ಅಬಕಾರಿ ಮತ್ತು ಅರಣ್ಯ ಇಲಾಖೆ ಸಿಬ್ಬಂದಿ ಜಂಟಿ ಕಾರ್ಯಾಚರಣೆಯಲ್ಲಿ ಪತ್ತೆಹಚ್ಚಿ ನಾಶಪಡಿಸಿದ್ದಾರೆ.

ಕಾರ್ಯಾಚರಣೆಯಲ್ಲಿ ಸುಮಾರು 210 ಕೆ.ಜಿ. ತೂಕದ ಹಸಿ ಗಾಂಜಾ ವಶಪಡಿಸಿಕೊಂಡು ನಾಶಪಡಿಸಲಾಗಿದೆ. ಅರಣ್ಯ ಪ್ರದೇಶದಲ್ಲೇ ಇಷ್ಟು ಪ್ರಮಾಣದ ಗಾಂಜಾ ಬೆಳೆಯಲಾಗಿರುವುದು ಅಧಿಕಾರಿಗಳ ಗಮನ ಸೆಳೆದಿದ್ದು, ಅಕ್ರಮ ಕೃಷಿಯ ಹಿಂದೆ ಯಾರಿದ್ದಾರೆ ಎಂಬ ಬಗ್ಗೆ ತನಿಖೆ ಮುಂದುವರಿದಿದೆ. ಅರಣ್ಯ ವ್ಯಾಪ್ತಿಯಲ್ಲಿ ಗಾಂಜಾ ಕೃಷಿ ನಡೆಸಿರುವವರ ಪತ್ತೆಗೆ ಅಧಿಕಾರಿಗಳು ಕಾರ್ಯಾಚರಣೆ ಮುಂದುವರಿಸಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿ ಕಲೆಹಾಕಲಾಗುತ್ತಿದೆ.


## ಬೆಂಗಳೂರಿನಲ್ಲಿ ಅರಣ್ಯ ವೃಕ್ಷೋದ್ಯಾನಗಳ ವಿಸ್ತರಣೆಗೆ ಚಿಂತನೆ: ರಾಮಲಿಂಗಾರೆಡ್ಡಿ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರಿನ ಅರಣ್ಯ ಪ್ರದೇಶಗಳಲ್ಲಿ ಸ್ಥಳೀಯ ನೈಸರ್ಗಿಕ ಮರಗಳ ವೃಕ್ಷೋದ್ಯಾನಗಳನ್ನು ಸ್ಥಾಪಿಸಿ ನಗರದ ಹಸಿರು ವಿಸ್ತರಣೆಗೆ ಒತ್ತು ನೀಡಲಾಗುವುದು ಎಂದು ಅರಣ್ಯ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

ನಗರದ ಕಲ್ಕೆರೆ ಅರಣ್ಯ ವೃಕ್ಷೋದ್ಯಾನ, ದೊರೆಸಾನಿಪಾಳ್ಯ ಸಂಶೋಧನಾ ಕೇಂದ್ರ ಹಾಗೂ ತುರಹಳ್ಳಿ ಕಿರು ಅರಣ್ಯ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಸಚಿವರು, ಸ್ಥಳೀಯ ಮರಗಳ ಸಂರಕ್ಷಣೆ ಹಾಗೂ ಸಂಶೋಧನೆಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

1980ರಲ್ಲಿ ಸ್ಥಾಪನೆಯಾದ ಕಲ್ಕೆರೆ ಅರಣ್ಯ ವೃಕ್ಷೋದ್ಯಾನದಲ್ಲಿ 30 ಹೆಕ್ಟೇರ್ ಪ್ರದೇಶದಲ್ಲಿ 34 ಕುಟುಂಬಗಳಿಗೆ ಸೇರಿದ 97 ಜಾತಿಗಳ 126 ಪ್ರಭೇದಗಳ 4,722 ಮರಗಳಿವೆ. ಇಲ್ಲಿನ ನೀಲಗಿರಿ ಹಾಗೂ ಅಕೇಶಿಯಾ ಮರಗಳನ್ನು ಹಂತ ಹಂತವಾಗಿ ತೆರವುಗೊಳಿಸಿ, ಸಂಶೋಧನಾ ವರದಿಯಲ್ಲಿ ಗುರುತಿಸಿರುವ ಸ್ಥಳೀಯ ಪ್ರಭೇದಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಬೆಳೆಸಬೇಕು.



ತುರಹಳ್ಳಿ ಪ್ರದೇಶದಲ್ಲಿ ಈಗಾಗಲೇ ಸಾರ್ವಜನಿಕರಿಗೆ ಮುಕ್ತವಾಗಿರುವ ಟ್ರೀ ಪಾರ್ಕ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ, ಅದರ ಪಕ್ಕದ ಸುಮಾರು 35 ಎಕರೆ ಪ್ರದೇಶದಲ್ಲಿ ಹೊಸ ವೃಕ್ಷೋದ್ಯಾನ ಸ್ಥಾಪಿಸಲು ವಿಸ್ತೃತ ಯೋಜನೆ ಸಿದ್ಧಪಡಿಸುವಂತೆ ಸೂಚಿಸಿದರು.

ತುರಹಳ್ಳಿ ಸೇರಿದಂತೆ ನಗರದ ಅರಣ್ಯ ಪ್ರದೇಶಗಳಲ್ಲಿ ಶೇ.80ರಿಂದ 85ರಷ್ಟು ಇರುವ ನೀಲಗಿರಿ ಮತ್ತು ಅಕೇಶಿಯಾ ಮರಗಳನ್ನು ಹಂತ ಹಂತವಾಗಿ ತೆರವುಗೊಳಿಸಿ ಸ್ಥಳೀಯ ನೈಸರ್ಗಿಕ ಮರಗಳನ್ನು ಬೆಳೆಸಲು ಕಾರ್ಯಯೋಜನೆ ರೂಪಿಸಬೇಕು. ಸುಮಾರು 500 ಎಕರೆಗೂ ಹೆಚ್ಚಿನ ಅರಣ್ಯ ಪ್ರದೇಶದ ಪುನಶ್ಚೇತನಕ್ಕೆ ಆದ್ಯತೆ ನೀಡುವುದರ ಜತೆಗೆ ಮಳೆನೀರು ಸಂರಕ್ಷಣೆಗಾಗಿ ಸಣ್ಣ ಕೆರೆಗಳು ಹಾಗೂ ಚೆಕ್ ಡ್ಯಾಂಗಳನ್ನು ನಿರ್ಮಿಸುವಂತೆ ಸಚಿವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.


## 6 ಸೆಕೆಂಡ್‌ನಲ್ಲಿ ಕುಸಿದ ಬೆಟ್ಟ; ನೇಪಾಳದಲ್ಲಿ 24 ಮಂದಿ ಬಲಿ

● ವಿಕ್ರಮ ವಾಹಿನಿ । ಕಠ್ಮಂಡು

ಭಾರಿ ಮಳೆ, ಪ್ರವಾಹ ಹಾಗೂ ಭೂಕುಸಿತದಿಂದ ತತ್ತರಿಸಿರುವ ನೇಪಾಳದಲ್ಲಿ ಮತ್ತೊಂದು ಭೀಕರ ದುರಂತ ಸಂಭವಿಸಿದ್ದು, ಮುಸ್ತಾಂಗ್ ಜಿಲ್ಲೆಯ ಲೆಟೆ ಸಮೀಪ ಬೃಹತ್ ಬೆಟ್ಟದ ಒಂದು ಭಾಗ ಕೇವಲ ಆರು ಸೆಕೆಂಡ್‌ಗಳಲ್ಲಿ ಕುಸಿದು ಕಾಲಿ ಗಂಡಕಿ ನದಿಗೆ ಬಿದ್ದಿದೆ. ಘಟನೆಯಲ್ಲಿ ಕನಿಷ್ಠ 24 ಮಂದಿ ಮೃತಪಟ್ಟಿದ್ದು, 14 ಮಂದಿ ನಾಪತ್ತೆಯಾಗಿದ್ದಾರೆ ಎಂದು ವರದಿಯಾಗಿದೆ.

ಭಾನುವಾರ ಸಂಭವಿಸಿದ ಭೂಕುಸಿತದ ಭಯಾನಕ ದೃಶ್ಯ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಇದೀಗ ಅದರ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಬೆಟ್ಟದ ಬೃಹತ್ ಭಾಗ ಮಣ್ಣು, ಬಂಡೆಗಳೊಂದಿಗೆ ನದಿಗೆ ಕುಸಿಯುತ್ತಿದ್ದಂತೆ ಸ್ಥಳದಲ್ಲಿದ್ದವರು ಭಯದಿಂದ ಕಿರುಚುತ್ತಿರುವುದು ವಿಡಿಯೋದಲ್ಲಿ ಕೇಳಿಸುತ್ತದೆ. ಚಾರ್‌ಧಾಮ ಯಾತ್ರಿಕರು ಈ ದೃಶ್ಯವನ್ನು ಚಿತ್ರೀಕರಿಸಿದ್ದಾರೆ ಎನ್ನಲಾಗಿದೆ.

ಬೆಟ್ಟ ಕುಸಿದ ಪರಿಣಾಮ ನದಿಯ ಹರಿವು ಕೆಲಕಾಲ ತಡೆಗಟ್ಟಲ್ಪಟ್ಟಿತ್ತು. ಬಳಿಕ ನೀರು ತನ್ನದೇ ದಾರಿ ಮಾಡಿಕೊಂಡು ಮತ್ತೆ ಹರಿಯಲು ಆರಂಭಿಸಿದೆ. ಮತ್ತೊಂದು ವಿಡಿಯೋದಲ್ಲಿ ಬೆಟ್ಟದ ಇಳಿಜಾರಿನಲ್ಲಿದ್ದ ಮನೆ, ಮರಗಳು ಹಾಗೂ ಶೆಲ್ಟರ್‌ನ ಒಂದು ಭಾಗ ಮಣ್ಣಿನೊಂದಿಗೆ ಕಣಿವೆಗೆ ಕೊಚ್ಚಿಹೋಗುತ್ತಿರುವ ದೃಶ್ಯ ಕಂಡುಬಂದಿದೆ.



ಗಂಡಕಿ ಪ್ರಾಂತ್ಯದಲ್ಲಿ ಶನಿವಾರದಿಂದ ಕಾಲಿ ಗಂಡಕಿ ನದಿಯ ನೀರಿನ ಮಟ್ಟ ಏರಿಕೆಯಾಗಿದ್ದು, ಸತತ ಮೂರು ದಿನಗಳ ಭಾರಿ ಮಳೆಯ ಬಳಿಕ ಭಾನುವಾರ ನದಿ ಅಪಾಯದ ಮಟ್ಟ ಮೀರಿ ಹರಿದಿದೆ. ಮುಸ್ತಾಂಗ್, ಮ್ಯಾಗ್ದಿ, ಪರ್ಬತ್ ಹಾಗೂ ಸ್ಯಾಂಗ್ಜಾ ಜಿಲ್ಲೆಗಳಲ್ಲಿ ಪ್ರವಾಹ ಮತ್ತು ಭೂಕುಸಿತದಿಂದ ವ್ಯಾಪಕ ಹಾನಿಯಾಗಿದೆ.

ಮನಾಂಗ್ ಜಿಲ್ಲೆಯಲ್ಲಿ ಹಿಮ್ಲುಂಗ್ ಹಿಮಾಲ್ ಶಿಖರದ ಬೇಸ್ ಕ್ಯಾಂಪ್ ಸಮೀಪ ಭಾನುವಾರ ಸಂಭವಿಸಿದ ಹಿಮಪಾತದಲ್ಲಿ ಇಬ್ಬರು ಮೃತಪಟ್ಟಿದ್ದು, 10 ಮಂದಿ ನಾಪತ್ತೆಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. 7,126 ಮೀಟರ್ ಎತ್ತರದ ಶಿಖರದ ನಾರ್ ಫು ಪ್ರದೇಶದಲ್ಲಿ ಹಿಮಪಾತ ಸಂಭವಿಸಿದ್ದು, ಒಂಬತ್ತು ಪರ್ವತಾರೋಹಕರು ಹಾಗೂ 13 ಮಂದಿ ಸಹಾಯಕ ಸಿಬ್ಬಂದಿ ಆಶ್ರಯ ಪಡೆದಿದ್ದ ಟೆಂಟ್‌ಗಳು ಹಿಮದಡಿ ಸಿಲುಕಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನೇಪಾಳದಲ್ಲಿ ಇತ್ತೀಚಿನ ದಿನಗಳಲ್ಲಿ ಪ್ರಕೃತಿ ವಿಕೋಪಗಳ ಸರಣಿ ಮುಂದುವರಿದಿದೆ. ಆಗಸ್ಟ್ 26ರಂದು ಸಂಭವಿಸಿದ್ದ ಭೋಟೆಕೋಶಿ ಪ್ರವಾಹದ ಬಳಿಕ ಇದೀಗ ಮತ್ತೊಂದು ಭೀಕರ ಪ್ರವಾಹ ಹಾಗೂ ಭೂಕುಸಿತ ಸಂಭವಿಸಿದೆ.

ಅಧಿಕಾರಿಗಳ ಪ್ರಕಾರ, ಹಿಂದಿನ ದುರಂತದಲ್ಲಿ 1,400ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದು, 6,000ಕ್ಕೂ ಹೆಚ್ಚು ಜನರು ನಾಪತ್ತೆಯಾಗಿದ್ದಾರೆ.

## ರಾವಣನ ಪ್ರತಿಕೃತಿ ದಹನ ಮಾನವ ಹಕ್ಕು ಉಲ್ಲಂಘನೆಯೇ?

● ವಿಕ್ರಮ ವಾಹಿನಿ । ರಾಯ್‌ಪುರ

ದಸರಾ ಹಬ್ಬದ ವೇಳೆ ರಾವಣನ ಪ್ರತಿಕೃತಿ ದಹಿಸುವುದು ಮಾನವ ಹಕ್ಕುಗಳ ಉಲ್ಲಂಘನೆಯಲ್ಲವೇ ಎಂದು ಪ್ರಶ್ನಿಸಿ ವ್ಯಕ್ತಿಯೊಬ್ಬರು ಛತ್ತೀಸ್‌ಗಢ ರಾಜ್ಯ ಮಾನವ ಹಕ್ಕುಗಳ ಆಯೋಗಕ್ಕೆ ದೂರು ಸಲ್ಲಿಸಿರುವುದು ಕುತೂಹಲಕ್ಕೆ ಕಾರಣವಾಗಿದೆ.

ಅಕ್ಟೋಬರ್ 20ರಂದು ನಡೆಯಲಿರುವ ದಸರಾ ಕಾರ್ಯಕ್ರಮದಲ್ಲಿ ರಾವಣನ ಪ್ರತಿಕೃತಿ ದಹಿಸುವುದನ್ನು ಪ್ರಶ್ನಿಸಿರುವ ದೂರುದಾರರು, ರಾವಣನಂತೆ ದುರ್ಯೋಧನನ ಪ್ರತಿಕೃತಿಯನ್ನು ಏಕೆ ದಹಿಸುವುದಿಲ್ಲ ಎಂದೂ ಪ್ರಶ್ನಿಸಿದ್ದಾರೆ. ರಾವಣನಿಗಿಂತ ದುರ್ಯೋಧನನನ್ನು ಪುರಾಣಗಳಲ್ಲಿ ಕೆಟ್ಟ ವ್ಯಕ್ತಿಯಾಗಿ ಬಿಂಬಿಸಲಾಗಿದೆ. ಹೀಗಾಗಿ ಆತನ ಪ್ರತಿಕೃತಿಯನ್ನೂ ದಹಿಸುವ ಸಂಪ್ರದಾಯ ಏಕೆ ಇಲ್ಲ ಎಂದು ಅವರು ವಾದಿಸಿದ್ದಾರೆ.

ಆಯೋಗದ ಹಂಗಾಮಿ ಅಧ್ಯಕ್ಷ ಗಿರಿಧಾರಿ ನಾಯಕ್ ಈ ಕುರಿತು ಪ್ರತಿಕ್ರಿಯಿಸಿ, ರಾವಣ ಪೌರಾಣಿಕ ಪಾತ್ರವಾಗಿದ್ದು, ಆತನ ಪ್ರತಿಕೃತಿ ಮಾನವನಲ್ಲ. ಹೀಗಾಗಿ ಈ ದೂರು ಮಾನವ ಹಕ್ಕುಗಳ ಆಯೋಗದ ವ್ಯಾಪ್ತಿಗೆ ಬರುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಧಾರ್ಮಿಕ ಹಾಗೂ ಸಾಂಸ್ಕೃತಿಕ ಆಚರಣೆಗಳಿಗೆ ಸಂಬಂಧಿಸಿದ ಇಂತಹ ವಿಷಯಗಳನ್ನು ಸೂಕ್ತ ವೇದಿಕೆಯಲ್ಲಿ ಪ್ರಶ್ನಿಸಬಹುದು ಎಂದು ಆಯೋಗ ತಿಳಿಸಿದೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com 93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 175,